VOLUME: 16 | 05 JULY 2026 | ಭಾನುವಾರ | RS: 2 | PAGE: 06 ISSUE: 144 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಬಾಲಿವುಡ್‌ನ ಬಹುನಿರೀಕ್ಷಿತ, ಸ್ಟಾರ್ ನಟಿಯರಾದ ಆಲಿಯಾ ಭಟ್ ಮತ್ತು ಶಾರ್ವರಿ ಮುಖ್ಯ ಭೂಮಿಕೆಯಲ್ಲಿ ನಟಿಸಿರುವ 'ಆಲ್ಫಾ' ಸಿನಿಮಾ 2ನೇ ದಿನವೂ ಬಾಕ್ಸ್ ಆಫೀಸ್‌ನಲ್ಲಿ ತೀವ್ರ ಹಿನ್ನಡೆ ಅನುಭವಿಸಿದೆ. ಚಿತ್ರ ಬಿಡುಗಡೆಯಾದ ಮೊದಲ ದಿನವೇ ಪ್ರೇಕ್ಷಕರು ಹಾಗೂ ವಿಮರ್ಶಕರಿಂದ ಅತ್ಯಂತ ಕೆಟ್ಟ ವಿಮರ್ಶೆಗಳು ಮತ್ತು ನೆಗೆಟಿವ್ ಪ್ರತಿಕ್ರಿಯೆಗಳು ವ್ಯಕ್ತವಾಗಿವೆ.


BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ




ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ದೇಶೀಯ ಉತ್ಪಾದನೆಗೆ ಒತ್ತು ನೀಡಿ: ಎಚ್‌ಡಿಕೆ

ಬೆಂಗಳೂರು: ದೇಶೀಯ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ಉದ್ಯಮಕ್ಕೆ ಉತ್ತೇಜನ ನೀಡುವುದು ಹಾಗೂ ಜಾಗತಿಕ ಮಟ್ಟದಲ್ಲಿ ಭಾರತದ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವ ಉದ್ದೇಶದಿಂದ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಬೆಂಗಳೂರಿನ ಹೆಚ್‌ಎಂಟಿ ಭವನದಲ್ಲಿ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ತಯಾರಕರು, ಚಾರ್ಜಿಂಗ್ ಮೂಲಸೌಕರ್ಯ ನಿರ್ಮಾತೃಗಳು ಮತ್ತು ತಂತ್ರಜ್ಞಾನ ಪಾಲುದಾರರೊಂದಿಗೆ ಮಹತ್ವದ ಸಮಾಲೋಚನೆ ನಡೆಸಿದರು.

ಸಭೆಯಲ್ಲಿ ಎಲೆಕ್ಟ್ರಿಕ್ ವಾಹನಗಳ ದೇಶೀಯ ಉತ್ಪಾದನೆ ಹೆಚ್ಚಿಸುವುದು, ಸ್ಥಳೀಯ ಪೂರಕ ಕೈಗಾರಿಕೆಗಳನ್ನು ಬಲಪಡಿಸುವುದು ಹಾಗೂ ನಾವೀನ್ಯತೆ ಆಧಾರಿತ, ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕ ಎಲೆಕ್ಟ್ರಿಕ್ ವಾಹನ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವ ಕುರಿತು ವಿಸ್ತೃತ ಚರ್ಚೆ ನಡೆಯಿತು.

ಉದ್ಯಮದ ಪ್ರತಿನಿಧಿಗಳು ತಮ್ಮ ಕಾರ್ಯಚಟುವಟಿಕೆಗಳು, ಎದುರಿಸುತ್ತಿರುವ ಸವಾಲುಗಳು ಹಾಗೂ ಕೇಂದ್ರ ಸರ್ಕಾರದಿಂದ ನಿರೀಕ್ಷಿಸಿರುವ ನೀತಿ ಬೆಂಬಲ ಕುರಿತು ಸಚಿವರ ಗಮನ ಸೆಳೆದರು. ದೇಶೀಯ ತಂತ್ರಜ್ಞಾನ ಅಭಿವೃದ್ಧಿ, ಉತ್ಪಾದನಾ ಸಾಮರ್ಥ್ಯ ವೃದ್ಧಿ ಮತ್ತು ಭಾರತವನ್ನು ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳ ಪ್ರಮುಖ ಜಾಗತಿಕ ಉತ್ಪಾದನಾ ಕೇಂದ್ರವನ್ನಾಗಿ ರೂಪಿಸುವ ಅಗತ್ಯವನ್ನು ಒತ್ತಿಹೇಳಿದರು.

ಸಭೆಯಲ್ಲಿ ಮಾತನಾಡಿದ ಸಚಿವ ಎಚ್.ಡಿ. ಕುಮಾರಸ್ವಾಮಿ, ಪ್ರಧಾನಿ ನರೇಂದ್ರ ಮೋದಿ ಅವರ 'ಆತ್ಮನಿರ್ಭರ ಭಾರತ' ಮತ್ತು 'ವಿಕಸಿತ ಭಾರತ–2047' ಪರಿಕಲ್ಪನೆಗೆ ಅನುಗುಣವಾಗಿ ಭಾರತೀಯ ಉತ್ಪಾದನಾ ವಲಯವನ್ನು ಮತ್ತಷ್ಟು ಬಲಪಡಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು. ಜಾಗತಿಕ ಮಾರುಕಟ್ಟೆಯ ಬೇಡಿಕೆಗೆ ತಕ್ಕಂತೆ ಗುಣಮಟ್ಟದ ಎಲೆಕ್ಟ್ರಿಕ್ ವಾಹನಗಳನ್ನು ದೇಶದಲ್ಲೇ ಉತ್ಪಾದಿಸುವ ಅಗತ್ಯವಿದ್ದು, ಆರಂಭಿಕ ಹಂತದಲ್ಲಿಯೇ ಇಂಗಾಲ ಹೊರಸೂಸುವಿಕೆಯನ್ನು ಶೂನ್ಯಕ್ಕೆ ತರುವ ದಿಸೆಯಲ್ಲಿ ಕಾರ್ಯನಿರ್ವಹಿಸಬೇಕೆಂದು ಕರೆ ನೀಡಿದರು. ಸಭೆಯಲ್ಲಿ ಉದ್ಯಮದ ಪ್ರಮುಖರು ಪಿಎಂ ಇ-ಡ್ರೈವ್ ಯೋಜನೆಯ ವ್ಯಾಪ್ತಿಯನ್ನು ವಿಸ್ತರಿಸುವುದು ಹಾಗೂ ಉದ್ಯಮದ ಬೆಳೆಯುತ್ತಿರುವ ಅಗತ್ಯಗಳಿಗೆ ಅನುಗುಣವಾಗಿ ಪಿಎಲ್‌ಐ ಆಟೋ ಯೋಜನೆಯಲ್ಲಿ ಅಗತ್ಯ ಬದಲಾವಣೆಗಳನ್ನು ತರಬೇಕೆಂದು ಸಲಹೆ ನೀಡಿದರು.

ದೇಶೀಯ ಮೌಲ್ಯವರ್ಧನೆ ಹೆಚ್ಚಿಸುವುದು, ಸ್ಥಳೀಯ ಉತ್ಪಾದನೆಗೆ ವೇಗ ನೀಡುವುದು ಹಾಗೂ ಭಾರತದ ಎಲೆಕ್ಟ್ರಿಕ್ ವಾಹನಗಳ ರಫ್ತು ಸಾಮರ್ಥ್ಯವನ್ನು ವಿಸ್ತರಿಸುವ ಅವಕಾಶಗಳ ಕುರಿತು ಉದ್ಯಮದ ನಿಯೋಗವು ಸಚಿವರೊಂದಿಗೆ ಸಮಾಲೋಚನೆ ನಡೆಸಿತು.

ಸಭೆಯಲ್ಲಿ ಎಥರ್ ಎನರ್ಜಿ ಸಹ–ಸಂಸ್ಥಾಪಕ ಹಾಗೂ ಸಿಇಒ ತರುಣ್ ಮೆಹ್ತಾ, ಮ್ಯಾಟರ್ ಸಂಸ್ಥಾಪಕ ಮತ್ತು ಸಿಇಒ ಮೋಹಲ್ ಲಾಲ್‌ಭಾಯ್, ರಿವರ್ ಸಹ–ಸಂಸ್ಥಾಪಕ ಹಾಗೂ ಸಿಇಒ ಅರವಿಂದ್ ಮಣಿ, ಯೂಲರ್ ಮೋಟಾರ್ಸ್ ಸಂಸ್ಥಾಪಕ ಮತ್ತು ಸಿಇಒ ಸೌರವ್ ಕುಮಾರ್ ಹಾಗೂ ರಾಪ್ಟೀ ಎಚ್‌ವಿ ಸಹ–ಸಂಸ್ಥಾಪಕ ಮತ್ತು ಸಿಇಒ ದಿನೇಶ್ ಅರ್ಜುನ್ ಸೇರಿದಂತೆ ಉದ್ಯಮದ ಪ್ರಮುಖರು ಭಾಗವಹಿಸಿದ್ದರು.



ಅರಮನೆ ಮೈದಾನದಲ್ಲಿ ಶನಿವಾರ ನಡೆದ ಮಾಜಿ ಸಂಸದರಾದ ಎಲ್. ಆರ್ ಶಿವರಾಮೇಗೌಡ ಅವರ ಅಭಿನಂದನಾ ಗ್ರಂಥ "ಶಿವಪಥ"ವನ್ನು ಸಿಎಂ ಡಿ ಕೆ ಶಿವಕುಮಾರ್ ಅವರು ಬಿಡುಗಡೆ ಮಾಡಿದರು. ಕಾರ್ಯಕ್ರಮದಲ್ಲಿ ಸ್ಫಟಿಕಪುರಿ ಮಹಾಸಂಸ್ಥಾನದ ಶ್ರೀ ನಂಜಾವಧೂತ ಸ್ವಾಮೀಜಿಗಳು, ವಿಶ್ವ ಒಕ್ಕಲಿಗರ ಮಹಾಸಂಸ್ಥಾನದ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿಗಳು, ಆದಿ ಚುಂಚನಗಿರಿ ಶಾಖಾ ಮಠದ ಶ್ರೀ ಸೌಮ್ಯನಾಥ ಸ್ವಾಮೀಜಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ನ್ಯಾಯಮೂರ್ತಿ ಚಂದ್ರಶೇಖರಯ್ಯ, ಸಚಿವ ರಾಮಲಿಂಗಾರೆಡ್ಡಿ, ಮಾಜಿ ಸಚಿವ ಸುಧಾಕರ್, ಶಾಸಕರಾದ ರಂಗನಾಥ್, ರಿಜ್ವಾನ್ ಅರ್ಷದ್, ಎಂಎಲ್ಸಿ ಪುಟ್ಟಣ್ಣ, ಹಿರಿಯ ಸಾಹಿತಿ ಹಂಪಾ ನಾಗರಾಜಯ್ಯ ಮತ್ತಿತರರು ಉಪಸ್ಥಿತರಿದ್ದರು.

# 202.70 ಕಿ.ಮೀ ಉದ್ದದ ಒತ್ತುವರಿ ತೆರವು

ಜುಲೈ 1ರಂದು ನಡೆದ ಕಾರ್ಯಾಚರಣೆಯಲ್ಲಿ ಒಟ್ಟು 76.55 ಕಿ.ಮೀ ಪಾದಚಾರಿ ಮಾರ್ಗಗಳಲ್ಲಿನ ಒತ್ತುವರಿ ತೆರವುಗೊಳಿಸಲಾಯಿತು. ಇದರಲ್ಲಿ ಪೂರ್ವ ನಗರ ಪಾಲಿಕೆಯಲ್ಲಿ 13.25 ಕಿ.ಮೀ, ಕೇಂದ್ರದಲ್ಲಿ 16.35 ಕಿ.ಮೀ, ಉತ್ತರದಲ್ಲಿ 12.85 ಕಿ.ಮೀ, ದಕ್ಷಿಣದಲ್ಲಿ 11.00 ಕಿ.ಮೀ ಹಾಗೂ ಪಶ್ಚಿಮ ನಗರ ಪಾಲಿಕೆಯಲ್ಲಿ ಅತಿ ಹೆಚ್ಚು 23.10 ಕಿ.ಮೀ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಸಾರ್ವಜನಿಕರಿಗೆ ಅಡೆತಡೆರಹಿತ ಪಾದಚಾರಿ ಸಂಚಾರ ಕಲ್ಪಿಸುವ ಉದ್ದೇಶದಿಂದ ಕೈಗೊಂಡಿರುವ ವಿಶೇಷ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದ್ದು, ಕಳೆದ ಮೂರು ದಿನಗಳಲ್ಲಿ 202.70 ಕಿ.ಮೀ ಉದ್ದದ ಪಾದಚಾರಿ ಮಾರ್ಗಗಳನ್ನು ಒತ್ತುವರಿಯಿಂದ ಮುಕ್ತಗೊಳಿಸಲಾಗಿದೆ.



ಜುಲೈ 1ರಂದು ನಡೆದ ಕಾರ್ಯಾಚರಣೆಯಲ್ಲಿ ಒಟ್ಟು 76.55 ಕಿ.ಮೀ ಪಾದಚಾರಿ ಮಾರ್ಗಗಳಲ್ಲಿನ ಒತ್ತುವರಿ ತೆರವುಗೊಳಿಸಲಾಯಿತು. ಇದರಲ್ಲಿ ಪೂರ್ವ ನಗರ ಪಾಲಿಕೆಯಲ್ಲಿ 13.25 ಕಿ.ಮೀ, ಕೇಂದ್ರದಲ್ಲಿ 16.35 ಕಿ.ಮೀ, ಉತ್ತರದಲ್ಲಿ 12.85 ಕಿ.ಮೀ, ದಕ್ಷಿಣದಲ್ಲಿ 11.00 ಕಿ.ಮೀ ಹಾಗೂ ಪಶ್ಚಿಮ ನಗರ ಪಾಲಿಕೆಯಲ್ಲಿ ಅತಿ ಹೆಚ್ಚು 23.10 ಕಿ.ಮೀ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಜುಲೈ 2ರಂದು ಐದು ನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 64.55 ಕಿ.ಮೀ ಪಾದಚಾರಿ ಮಾರ್ಗಗಳನ್ನು ತೆರವುಗೊಳಿಸಲಾಯಿತು. ಪೂರ್ವದಲ್ಲಿ 8.80 ಕಿ.ಮೀ, ಕೇಂದ್ರದಲ್ಲಿ 8.55 ಕಿ.ಮೀ, ಉತ್ತರದಲ್ಲಿ 12.70 ಕಿ.ಮೀ, ದಕ್ಷಿಣದಲ್ಲಿ 10.40 ಕಿ.ಮೀ ಹಾಗೂ ಪಶ್ಚಿಮ ನಗರ ಪಾಲಿಕೆಯಲ್ಲಿ 24.10 ಕಿ.ಮೀ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಯಿತು.

ಜುಲೈ 3ರಂದು ಒಟ್ಟು 61.60 ಕಿ.ಮೀ ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಲಾಯಿತು. ಪೂರ್ವ ನಗರ ಪಾಲಿಕೆಯಲ್ಲಿ 8.55 ಕಿ.ಮೀ, ಕೇಂದ್ರದಲ್ಲಿ 10.95 ಕಿ.ಮೀ, ಉತ್ತರದಲ್ಲಿ 14.10 ಕಿ.ಮೀ, ದಕ್ಷಿಣದಲ್ಲಿ 11.50 ಕಿ.ಮೀ ಹಾಗೂ ಪಶ್ಚಿಮ ನಗರ ಪಾಲಿಕೆಯಲ್ಲಿ 16.50 ಕಿ.ಮೀ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಯಿತು.

ಮೂರು ದಿನಗಳ ಒಟ್ಟಾರೆ ಕಾರ್ಯಾಚರಣೆಯಲ್ಲಿ ಜುಲೈ 1ರಂದು 76.55 ಕಿ.ಮೀ, ಜುಲೈ 2ರಂದು 64.55 ಕಿ.ಮೀ ಹಾಗೂ ಜುಲೈ 3ರಂದು 61.60 ಕಿ.ಮೀ ಸೇರಿ ಒಟ್ಟು 202.70 ಕಿ.ಮೀ ಉದ್ದದ ಪಾದಚಾರಿ ಮಾರ್ಗಗಳನ್ನು ಒತ್ತುವರಿಯಿಂದ ಮುಕ್ತಗೊಳಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಸಂಬಂಧಿತ ನಗರ ಪಾಲಿಕೆಗಳು ಪೊಲೀಸ್ ಮತ್ತು ಇತರ ಇಲಾಖೆಗಳ ಸಹಯೋಗದೊಂದಿಗೆ ಈ ವಿಶೇಷ ಅಭಿಯಾನವನ್ನು ಮುಂದುವರಿಸಿದ್ದು, ಪಾದಚಾರಿಗಳ ಸುರಕ್ಷಿತ ಮತ್ತು ಸುಗಮ ಸಂಚಾರಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

## ರೈತರ ಬೆಳೆಗಳಿಗೆ ನೀರಿಲ್ಲ...!

ಬಳ್ಳಾರಿ: ತುಂಗಭದ್ರಾ ಜಲಾಶಯದಲ್ಲಿ ಸಮರ್ಪಕ ಪ್ರಮಾಣದ ನೀರಿನ ಸಂಗ್ರಹ ಇಲ್ಲದಿರುವ ಹಿನ್ನೆಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಬಲದಂಡೆ ಹಾಗೂ ಎಡದಂಡೆ ಕಾಲುವೆಗಳ ಮೂಲಕ ಕೃಷಿ ಬೆಳೆಗಳಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂದು ತುಂಗಭದ್ರಾ ಯೋಜನೆ ಹಾಗೂ ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿ ಮತ್ತು ಅಧೀಕ್ಷಕ ಎಂಜಿನಿಯರ್ ಎಸ್.ಬಿ. ಮಲ್ಲಿಗವಾಡ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಕಾರಣ ಜಲಾಶಯಕ್ಕೆ ಒಳಹರಿವು ತೀವ್ರವಾಗಿ ಕುಂಠಿತಗೊಂಡಿದ್ದು, ನೀರಿನ ಸಂಗ್ರಹವೂ ಅತ್ಯಂತ ಕಡಿಮೆ ಮಟ್ಟದಲ್ಲಿದೆ ಎಂದು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸದ್ಯದ ಪರಿಸ್ಥಿತಿಯಲ್ಲಿ ಕೃಷಿ ನೀರಾವರಿಗಾಗಿ ನೀರು ಬಿಡುಗಡೆ ಮಾಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯ ಸರ್ಕಾರ ಜಲಾಶಯದಲ್ಲಿರುವ ಲಭ್ಯ ನೀರನ್ನು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸುವಂತೆ ನಿರ್ದೇಶನ ನೀಡಿರುವುದರಿಂದ ಬಲದಂಡೆ ಹಾಗೂ ಎಡದಂಡೆ ಕಾಲುವೆಗಳ ಮೂಲಕ ಮುಂಗಾರು ಬೆಳೆಗಳಿಗೆ ನೀರು ಹರಿಸುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ಈ ನಿರ್ಧಾರದಿಂದ ಬಳ್ಳಾರಿ, ವಿಜಯನಗರ ಸೇರಿದಂತೆ ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ಸಾವಿರಾರು ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆ ಕೊರತೆಯಿಂದ ಈಗಾಗಲೇ ಮುಂಗಾರು ಬಿತ್ತನೆ ವಿಳಂಬವಾಗಿರುವುದರ ಜೊತೆಗೆ ನೀರಾವರಿ ಸೌಲಭ್ಯವೂ ದೊರೆಯದಿರುವುದು ರೈತರ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ.

ರೈತರು ಈ ಸಂಕಷ್ಟದ ಸಂದರ್ಭದಲ್ಲಿ ಇಲಾಖೆಯೊಂದಿಗೆ ಸಹಕರಿಸುವಂತೆ ಅಧೀಕ್ಷಕ ಎಂಜಿನಿಯರ್ ಮನವಿ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗಿ ಜಲಾಶಯಕ್ಕೆ ಸಮರ್ಪಕ ನೀರು ಹರಿದು ಬಂದಲ್ಲಿ ನೀರಾವರಿ ಸಲಹಾ ಸಮಿತಿ ಸಭೆ ನಡೆಸಿ, ಪರಿಸ್ಥಿತಿಗೆ ಅನುಗುಣವಾಗಿ ಬೆಳೆಗಳಿಗೆ ನೀರು ಬಿಡುಗಡೆ ಮಾಡುವ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

## ಬಿಎಂಟಿಸಿ ಅಪಘಾತ: ಚಾಲಕ ಗಂಭೀರ

ಬೆಂಗಳೂರು: ನಗರದ ಕೆಆರ್ ಸರ್ಕಲ್‌ನಲ್ಲಿ ಸಿಗ್ನಲ್ ಬಳಿ ನಿಂತಿದ್ದ ಬಿಎಂಟಿಸಿ ಬಸ್‌ಗೆ ಹಿಂದಿನಿಂದ ಟೆಂಪೋ ಡಿಕ್ಕಿ ಹೊಡೆದ ಪರಿಣಾಮ ಎರಡು ಬಿಎಂಟಿಸಿ ಬಸ್‌ಗಳ ನಡುವೆ ಸರಣಿ ಅಪಘಾತ ಸಂಭವಿಸಿದ್ದು, ಚಾಲಕ ಸೇರಿದಂತೆ 13 ಮಂದಿ ಪ್ರಯಾಣಿಕರು ಗಾಯಗೊಂಡಿದ್ದಾರೆ.

ಅಪಘಾತದ ತೀವ್ರತೆಗೆ ಬಸ್ ಚಾಲಕ ಗಂಭೀರವಾಗಿ ಗಾಯಗೊಂಡಿದ್ದು, ಗಾಯಗೊಂಡ ಎಲ್ಲ ಪ್ರಯಾಣಿಕರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಅಪಘಾತದ ವೇಳೆ ಬಸ್‌ನ ಹಿಂಬದಿ ಸೀಟಿನಲ್ಲಿ ಕುಳಿತಿದ್ದ ಮಹಿಳೆಯ ಕಾಲು ಬಸ್‌ನ ಅವಶೇಷಗಳ ನಡುವೆ ಸಿಲುಕಿಕೊಂಡಿತ್ತು.

ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯರು ಹಾರೆ ಮತ್ತು ಕಬ್ಬಿಣದ ಕೋಲುಗಳ ಸಹಾಯದಿಂದ ಅರ್ಧ ಗಂಟೆಗೂ ಹೆಚ್ಚು ಕಾಲ ಕಾರ್ಯಾಚರಣೆ ನಡೆಸಿ ಮಹಿಳೆಯನ್ನು ಸುರಕ್ಷಿತವಾಗಿ ರಕ್ಷಿಸಿದರು. ಬಳಿಕ ಅವರನ್ನು ಆಂಬುಲೆನ್ಸ್ ಮೂಲಕ ಮಾರ್ಥಾಸ್ ಆಸ್ಪತ್ರೆಗೆ ದಾಖಲಿಸಲಾಯಿತು.

ಘಟನೆಯಲ್ಲಿ ಎರಡೂ ಬಿಎಂಟಿಸಿ ಬಸ್‌ಗಳು ತೀವ್ರವಾಗಿ ಹಾನಿಗೊಳಗಾಗಿದ್ದು, ಕ್ರೇನ್ ಮೂಲಕ ವಾಹನಗಳನ್ನು ತೆರವುಗೊಳಿಸುವ ಕಾರ್ಯ ಮುಂದುವರಿದಿದೆ.

ಅಪಘಾತದಿಂದ ಕೆಆರ್ ಸರ್ಕಲ್‌ನಲ್ಲಿ ಭಾರೀ ಸಂಚಾರ ದಟ್ಟಣೆ ಉಂಟಾಗಿದ್ದು, ವಾಹನ ಸವಾರರು ಪರದಾಡುವಂತಾಯಿತು. ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಸಂಚಾರವನ್ನು ಸುಗಮಗೊಳಿಸುವ ಕಾರ್ಯ ನಡೆಸುತ್ತಿದ್ದು, ಅಪಘಾತಕ್ಕೆ ನಿಖರ ಕಾರಣದ ಕುರಿತು ತನಿಖೆ ಆರಂಭಿಸಿದ್ದಾರೆ.

# ಎಸ್‌ಐಆರ್ ಗೊಂದಲ ನಿವಾರಣೆಗೆ ಒತ್ತಾಯ

ಬೆಂಗಳೂರು: ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಶೀಲನೆ ಹಾಗೂ ಗಣತಿ ಪ್ರಕ್ರಿಯೆಯಿಂದ ಸಾರ್ವಜನಿಕರಲ್ಲಿ ಉಂಟಾಗಿರುವ ಗೊಂದಲ ಮತ್ತು ಆತಂಕವನ್ನು ನಿವಾರಿಸಲು ಚುನಾವಣಾ ಆಯೋಗವು ತಕ್ಷಣವೇ ಅಧಿಕೃತ ಲಿಖಿತ ಸ್ಪಷ್ಟೀಕರಣ ನೀಡಬೇಕು ಎಂದು 'ನನ್ನ ಮತ ನನ್ನ ಹಕ್ಕು' ನಾಗರಿಕ ವೇದಿಕೆ ಆಗ್ರಹಿಸಿದೆ.

ಈ ಸಂಬಂಧ ರಾಜ್ಯದ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಅವರಿಗೆ ಮನವಿ ಸಲ್ಲಿಸಿರುವ ವೇದಿಕೆ, ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಸ್ಪಷ್ಟ ಮಾರ್ಗಸೂಚಿಗಳನ್ನು ಪ್ರಕಟಿಸುವಂತೆ ಕೋರಿದೆ. ಮಾಧ್ಯಮಗಳ ಮೂಲಕ ಪ್ರಕ್ರಿಯೆಯ ಕುರಿತು ಮಾಹಿತಿ ನೀಡುತ್ತಿರುವ ಚುನಾವಣಾ ಆಯೋಗದ ಪ್ರಯತ್ನವನ್ನು ಶ್ಲಾಘಿಸಿರುವ ವೇದಿಕೆ, ಅಧಿಕೃತ ಸುತ್ತೋಲೆ ಅಥವಾ ಪತ್ರಿಕಾ ಪ್ರಕಟಣೆಗಳ ಕೊರತೆಯಿಂದ ಹಲವು ಪ್ರಶ್ನೆಗಳು ಇನ್ನೂ ಉತ್ತರಿಸದೆ ಉಳಿದಿವೆ ಎಂದು ತಿಳಿಸಿದೆ.

ಬೂತ್ ಮಟ್ಟದ ಅಧಿಕಾರಿಗಳು ಮನೆಗಳಿಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಿ ನಂತರ ಸಂಗ್ರಹಿಸಬೇಕೆಂಬ ನಿಯಮ ಇದ್ದರೂ, ಹಲವೆಡೆ ತಕ್ಷಣವೇ ಫಾರ್ಮ್ ಭರ್ತಿ ಮಾಡುವಂತೆ ಒತ್ತಾಯಿಸಲಾಗುತ್ತಿದೆ. ಮತದಾರರಿಗೆ ಫಾರ್ಮ್ ಭರ್ತಿ ಮಾಡಲು ಅಧಿಕೃತವಾಗಿ ಎಷ್ಟು ದಿನಗಳ ಕಾಲಾವಕಾಶ ಇದೆ ಎಂಬುದನ್ನು ಆಯೋಗ ಸ್ಪಷ್ಟಪಡಿಸಬೇಕು ಎಂದು ವೇದಿಕೆ ಮನವಿ ಮಾಡಿದೆ.

## ಸರ್ಕಾರಿ ಉದ್ಯೋಗದ ಹೆಸರಿನಲ್ಲಿ ರೂ.1.2 ಕೋಟಿ ವಂಚನೆ; ದಂಪತಿ ಸೇರಿ ಗ್ಯಾಂಗ್ ಬಂಧನ

ಬೆಂಗಳೂರು: ಸರ್ಕಾರಿ ಉದ್ಯೋಗ ಕೊಡಿಸುವುದಾಗಿ ನಂಬಿಸಿ ಉದ್ಯೋಗಾಕಾಂಕ್ಷಿಗಳಿಂದ ಕೋಟ್ಯಂತರ ರೂಪಾಯಿ ವಂಚಿಸಿದ್ದ ಗ್ಯಾಂಗ್ ಅನ್ನು ದೊಡ್ಡಪೇಟೆ ಪೊಲೀಸರು ಬಂಧಿಸಿದ್ದಾರೆ. ಪ್ರಕರಣ ಕುರಿತು ಮಾಧ್ಯಮದಲ್ಲಿ ವರದಿ ಪ್ರಸಾರವಾದ ಬೆನ್ನಲ್ಲೇ ಪೊಲೀಸರು ಕಾರ್ಯಾಚರಣೆ ನಡೆಸಿ ಪ್ರಮುಖ ಆರೋಪಿಗಳಾದ ಸಚಿನ್ ಮತ್ತು ಸುಜಾತಾ ದಂಪತಿಯನ್ನು ವಶಕ್ಕೆ ಪಡೆದಿದ್ದಾರೆ.

ಆರೋಪಿಗಳು ಶಿವಮೊಗ್ಗ, ಚಿತ್ರದುರ್ಗ, ದಾವಣಗೆರೆ, ಚಿಕ್ಕಮಗಳೂರು ಸೇರಿದಂತೆ ಹಲವು ಜಿಲ್ಲೆಗಳ ನಿರುದ್ಯೋಗಿಗಳನ್ನು ಗುರಿಯಾಗಿಸಿಕೊಂಡು, ಎಫ್‌ಡಿಸಿ, ಎಸ್‌ಡಿಸಿ, ಅರಣ್ಯ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಯಲ್ಲಿ ಸರ್ಕಾರಿ ಉದ್ಯೋಗ ಕೊಡಿಸುವುದಾಗಿ ನಂಬಿಸುತ್ತಿದ್ದರು. ಈ ನೆಪದಲ್ಲಿ 50ಕ್ಕೂ ಹೆಚ್ಚು ಉದ್ಯೋಗಾಕಾಂಕ್ಷಿಗಳಿಂದ ತಲಾ ರೂ.3.5 ಲಕ್ಷದಂತೆ ಸುಮಾರು ರೂ.1.2 ಕೋಟಿ ಹಣ ವಸೂಲಿ ಮಾಡಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ವಂಚನೆಗೆ ವಿಶ್ವಾಸಾರ್ಹತೆ ಮೂಡಿಸಲು ಆರೋಪಿಗಳು ನಕಲಿ ನೇಮಕಾತಿ ಪತ್ರಗಳು, ಗುರುತಿನ ಚೀಟಿಗಳು ಹಾಗೂ ಇತರ ಸರ್ಕಾರಿ ದಾಖಲೆಗಳನ್ನು ಸೃಷ್ಟಿಸಿ ನೀಡುತ್ತಿದ್ದರು. ಈ ನಕಲಿ ದಾಖಲೆಗಳ ಮುದ್ರಣಕ್ಕಾಗಿ ದುರ್ಗಿಗುಡಿಯ ಶ್ರೀಸಾಯಿ ಆಫ್‌ಸೆಟ್ ಪ್ರಿಂಟರ್ಸ್ ಅನ್ನು ಬಳಸಿಕೊಂಡಿರುವುದೂ ತನಿಖೆಯಲ್ಲಿ ಪತ್ತೆಯಾಗಿದೆ. ಪ್ರಕರಣ ಬೆಳಕಿಗೆ ಬಂದ ಬಳಿಕ ದೊಡ್ಡಪೇಟೆ ಪೊಲೀಸರು ದಾಳಿ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ.

# 'ಮಳೆ ಕೊರತೆ ಹಿನ್ನೆಲೆ ಎಕರೆಗೆ ರೂ.50 ಸಾವಿರ ಪರಿಹಾರ ನೀಡಿ'

ಮಂಡ್ಯ: ಮಳೆ ಕೊರತೆಯಿಂದ ಕಾವೇರಿ ಜಲಾನಯನ ಪ್ರದೇಶದಲ್ಲಿ ನೀರಿನ ಸಂಗ್ರಹ ಕುಸಿದಿರುವ ಹಿನ್ನೆಲೆಯಲ್ಲಿ ರೈತರ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ತಕ್ಷಣವೇ ಎಕರೆಗೆ ರೂ.50 ಸಾವಿರ ಪರಿಹಾರ ಘೋಷಿಸಬೇಕು ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಗ್ರಹಿಸಿದರು.



ಕೆಆರ್‌ಎಸ್ ಜಲಾಶಯಕ್ಕೆ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಲಾಶಯದಲ್ಲಿ ನೀರಿನ ಮಟ್ಟ ತೀವ್ರವಾಗಿ ಕುಸಿದಿದ್ದರೂ ಸರ್ಕಾರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸಲು ಅಗತ್ಯ ಕ್ರಮಗಳನ್ನು ಕೈಗೊಂಡಿಲ್ಲ ಎಂದು ಆರೋಪಿಸಿದರು.

ಕೆಆರ್‌ಎಸ್‌ನಲ್ಲಿ ಕೇವಲ 6 ಟಿಎಂಸಿ ನೀರು ಮಾತ್ರ ಉಳಿದಿದ್ದು, ಒಳಹರಿವು ಸುಮಾರು 900 ಕ್ಯೂಸೆಕ್ಸ್ ಇದ್ದರೂ ಹೊರಹರಿವಿನ ಬಗ್ಗೆ ಅನುಮಾನಗಳಿವೆ. ಕುಡಿಯುವ ನೀರಿನ ಅಗತ್ಯವನ್ನು ಗಮನದಲ್ಲಿಟ್ಟುಕೊಂಡು ಜಲ ನಿರ್ವಹಣೆಯಲ್ಲಿ ಎಚ್ಚರಿಕೆ ವಹಿಸಬೇಕು ಎಂದು ಅವರು ಹೇಳಿದರು.

ರಾಜ್ಯದ ಹಲವು ಭಾಗಗಳಲ್ಲಿ ರೈತರು ಈಗಾಗಲೇ ಬೆಳೆ ಬಿತ್ತನೆ ಆರಂಭಿಸಿದ್ದು, ಸುಮಾರು ಒಂದು ಲಕ್ಷ ಎಕರೆಗೂ ಹೆಚ್ಚು ಪ್ರದೇಶದಲ್ಲಿ ಕೃಷಿ ಚಟುವಟಿಕೆ ನಡೆದಿದೆ. ಇಂತಹ ಸಂದರ್ಭದಲ್ಲಿ ರೈತರಿಗೆ ಬೆಳೆ ಬೆಳೆಯಬೇಡಿ ಎಂದು ಹೇಳುವುದಕ್ಕಿಂತ, ಸರ್ಕಾರ ಸೂಕ್ತ ಮಾರ್ಗದರ್ಶನ ಹಾಗೂ ಆರ್ಥಿಕ ನೆರವು ನೀಡಬೇಕು ಎಂದು ಒತ್ತಾಯಿಸಿದರು.

ಮಳೆ ಕೊರತೆ ಹಿನ್ನೆಲೆಯಲ್ಲಿ ರೈತ ಮುಖಂಡರ ಸಭೆ ಕರೆದು ಪರಿಸ್ಥಿತಿಯ ಅವಲೋಕನ ನಡೆಸಬೇಕಾಗಿದ್ದ ಸರ್ಕಾರ ಈವರೆಗೆ ಯಾವುದೇ ಸಮಗ್ರ ಸಭೆ ನಡೆಸಿಲ್ಲ ಎಂದು ಟೀಕಿಸಿದ ಅವರು, ಕೃಷಿ ಇಲಾಖೆಗೆ ಇನ್ನೂ ಪೂರ್ಣ ಪ್ರಮಾಣದ ನಾಯಕತ್ವ ಇಲ್ಲದಿರುವುದು ಆತಂಕಕಾರಿ ಬೆಳವಣಿಗೆ ಎಂದು ಹೇಳಿದರು.

ಬರಗಾಲ ಪರಿಸ್ಥಿತಿಯನ್ನು ಎದುರಿಸಲು ಸರ್ಕಾರ ಪೂರ್ವಸಿದ್ಧತೆ ನಡೆಸಿಲ್ಲ. ರೈತರಿಗೆ ಬದಲಿ ಬೆಳೆಗಳ ಕುರಿತು ಸಲಹೆ ನೀಡುವುದಷ್ಟೇ ಸಾಲದು, ಬೆಳೆ ನಷ್ಟವಾದರೆ ಸರ್ಕಾರ ಪರಿಹಾರ ನೀಡುವ ಬಗ್ಗೆ ಸ್ಪಷ್ಟ ಭರವಸೆ ನೀಡಬೇಕು. ತಕ್ಷಣವೇ ಎಕರೆಗೆ ರೂ.50 ಸಾವಿರ ಪರಿಹಾರ ಘೋಷಿಸಿ ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಕಾವೇರಿ ನೀರಿನ ಹಂಚಿಕೆ ವಿಚಾರದಲ್ಲೂ ರಾಜ್ಯ ಸರ್ಕಾರ ಎಚ್ಚರಿಕೆಯಿಂದ ನಡೆದುಕೊಳ್ಳಬೇಕು. ನೀರಿನ ಲಭ್ಯತೆ ಕುರಿತು ವಾಸ್ತವ ಸ್ಥಿತಿಯನ್ನು ಸಂಬಂಧಿತ ರಾಜ್ಯಗಳು ಹಾಗೂ ಕೇಂದ್ರದ ಗಮನಕ್ಕೆ ತರಬೇಕಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಎಸ್‌ಐಆರ್ ಪ್ರಕ್ರಿಯೆ ಕುರಿತು ಪ್ರತಿಕ್ರಿಯಿಸಿದ ಆರ್. ಅಶೋಕ್, ಮತದಾರರ ನೋಂದಣಿ ಕಾರ್ಯದಲ್ಲಿ ಅಧಿಕಾರಿಗಳು ಮನೆ ಮನೆಗೆ ತೆರಳಿ ಅರ್ಜಿಗಳನ್ನು ಭರ್ತಿ ಮಾಡಿಸಬೇಕು. ಈ ಪ್ರಕ್ರಿಯೆ ನಿಯಮಾನುಸಾರ ಮತ್ತು ಪಾರದರ್ಶಕವಾಗಿ ನಡೆಯಬೇಕು ಎಂದು ಹೇಳಿದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
05/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 'ಸುಹಾನಾ ಸಫರ್' ಯೋಜನೆ ಆರಂಭ

ಬೆಂಗಳೂರು

ಏಯು ಸ್ಮಾಲ್ ಫೈನಾನ್ಸ್ ಬ್ಯಾಂಕ್ ಹಾಗೂ ಮಾರುತಿ ಸುಜುಕಿ ಇಂಡಿಯಾ ಲಿಮಿಟೆಡ್ ಮೊದಲ ಬಾರಿಗೆ ಕಾರು ಖರೀದಿಸುವ ಗ್ರಾಹಕರಿಗಾಗಿ 'ಸುಹಾನಾ ಸಫರ್' ಎಂಬ ವಿಶೇಷ ಯೋಜನೆಯನ್ನು ಆರಂಭಿಸಿವೆ. ಮರುಕಳಿಸುವ ಠೇವಣಿ ಆಧಾರಿತ ಈ ವಿನೂತನ ಯೋಜನೆ, ಮೊದಲ ಕಾರು ಖರೀದಿಸುವವರ ಆರ್ಥಿಕ ಹೊರೆ ಕಡಿಮೆ ಮಾಡುವ ಉದ್ದೇಶ ಹೊಂದಿದೆ.

ಈ ಯೋಜನೆ ಆರಂಭಿಕ ಹಂತದಲ್ಲಿ ಆಲ್ಟೊ ಕೆ10, ಎಸ್-ಪ್ರೆಸ್ಸೊ, ಸೆಲೆರಿಯೊ ಹಾಗೂ ವ್ಯಾಗನ್‌ಆರ್ ಮಾದರಿಗಳ ಖರೀದಿಗೆ ಅನ್ವಯವಾಗಲಿದ್ದು, ದೇಶದಾದ್ಯಂತ ಅಧಿಕೃತ ಮಾರುತಿ ಸುಜುಕಿ ಮಾರಾಟ ಮಳಿಗೆಗಳ ಮೂಲಕ ಲಭ್ಯವಿರಲಿದೆ.

ಈ ಯೋಜನೆಯಡಿ ಗ್ರಾಹಕರು ಮೊದಲು ಏಯು ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನಲ್ಲಿ ಮರುಕಳಿಸುವ ಠೇವಣಿ ಖಾತೆ ತೆರೆಯಬೇಕು. ಬಳಿಕ ಮೂರುರಿಂದ ಆರು ತಿಂಗಳವರೆಗೆ ನಿರೀಕ್ಷಿತ ಮಾಸಿಕ ವಾಹನ ಸಾಲದ ಕಂತಿಗೆ ಸಮಾನವಾದ ಮೊತ್ತವನ್ನು ಪ್ರತಿ ತಿಂಗಳು ಠೇವಣಿ ಮಾಡಬೇಕು. ಈ ಅವಧಿಯಲ್ಲಿ ಠೇವಣಿಗೆ ಬಡ್ಡಿ ದೊರೆಯಲಿದ್ದು, ಅವಧಿ ಪೂರ್ಣಗೊಂಡ ನಂತರ ಸಂಗ್ರಹವಾದ ಮೊತ್ತವನ್ನು ವಾಹನದ ಮುಂಗಡ ಪಾವತಿಗೆ ಬಳಸಿಕೊಳ್ಳಬಹುದು. ನಂತರ ಬ್ಯಾಂಕ್ ವಾಹನ ಸಾಲವನ್ನು ಮಂಜೂರು ಮಾಡಿ ವಿತರಿಸುತ್ತದೆ.

ಒಂದೇ ಬಾರಿಗೆ ಹೆಚ್ಚಿನ ಮುಂಗಡ ಹಣವನ್ನು ಪಾವತಿಸಲು ಸಾಧ್ಯವಾಗದ ಗ್ರಾಹಕರಿಗೆ ಈ ಯೋಜನೆ ಅನುಕೂಲಕರವಾಗಿದೆ. ಉಳಿತಾಯದ ಅಭ್ಯಾಸ ಬೆಳೆಸುವುದರ ಜೊತೆಗೆ ಯೋಜಿತ ಹಣಕಾಸು ನಿರ್ವಹಣೆಯ ಮೂಲಕ ವಾಹನ ಖರೀದಿಯನ್ನು ಸುಲಭಗೊಳಿಸುವುದು ಇದರ ಪ್ರಮುಖ ಉದ್ದೇಶವಾಗಿದೆ.

# ಅಧಿಕಾರ ಸ್ವೀಕಾರ

ಬೆಂಗಳೂರು

ಜಲಸಂಪನ್ಮೂಲ ಇಲಾಖೆಯ ನೂತನ ಸರ್ಕಾರದ ಕಾರ್ಯದರ್ಶಿಯಾಗಿ ಹಿರಿಯ ಅಧಿಕಾರಿ ಹಾಗೂ ಪ್ರಧಾನ ಅಭಿಯಂತರ ಬಿ.ಎಸ್. ಶಿವಕುಮಾರ್ ಅವರು ಶುಕ್ರವಾರ ಅಧಿಕಾರ ಸ್ವೀಕರಿಸಿದರು.



ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಡಿಪಿಎಆರ್) ಹೊರಡಿಸಿರುವ ಆದೇಶದಂತೆ, ಸಾರ್ವಜನಿಕ ಹಾಗೂ ಆಡಳಿತಾತ್ಮಕ ಹಿತ ದೃಷ್ಟಿಯಿಂದ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರಗಳ ನಿರ್ದೇಶನಾಲಯದ ನಿರ್ದೇಶಕರಾಗಿದ್ದ ಬಿ.ಎಸ್. ಶಿವಕುಮಾರ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಜಲಸಂಪನ್ಮೂಲ ಇಲಾಖೆಯ ಸರ್ಕಾರದ ಕಾರ್ಯದರ್ಶಿಯಾಗಿ ವರ್ಗಾಯಿಸಲಾಗಿದೆ.

ಸರ್ಕಾರದ ಆದೇಶದ ಪ್ರಕಾರ, ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ಅಡಿಯಲ್ಲಿ ಅವರು ಪ್ರಸ್ತುತ ನಿರ್ವಹಿಸುತ್ತಿರುವ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರಗಳ ನಿರ್ದೇಶಕರ ಹುದ್ದೆಯ ಹೆಚ್ಚುವರಿ ಪ್ರಭಾರವನ್ನೂ ಮುಂದಿನ ಆದೇಶದವರೆಗೆ ಮುಂದುವರಿಸಲಿದ್ದಾರೆ.

ಅಧಿಕಾರ ಸ್ವೀಕಾರದ ಬಳಿಕ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ನೂತನ ಕಾರ್ಯದರ್ಶಿ ಬಿ.ಎಸ್. ಶಿವಕುಮಾರ್ ಅವರಿಗೆ ಹೂಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿ ಶುಭಾಶಯ ಕೋರಿದರು.

# ಬೆಂಗಳೂರು ದಕ್ಷಿಣ ಭಾಗಕ್ಕೆ ಮುಮ್ಮಡಿ ನಿರ್ವಾಣ ಶ್ರೀಗಳು ದಾರಿದೀಪ

ಕನಕಪುರ

"ಪರಮಪೂಜ್ಯ ಡಾ. ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿಗಳು ಬೆಂಗಳೂರು ದಕ್ಷಿಣ ಜಿಲ್ಲೆ ಹಾಗೂ ಸುತ್ತಮುತ್ತಲ ಪ್ರದೇಶದ ಜನರಿಗೆ ದಾರಿದೀಪವಾಗಿದ್ದರು. ಅವರ ಸೇವೆ ಮತ್ತು ಮಾರ್ಗದರ್ಶನ ಸದಾ ಸ್ಮರಣೀಯ" ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಕನಕಪುರದ ಶ್ರೀ ದೇಗುಲ ಮಠದಲ್ಲಿ ನಡೆದ ಲಿಂಗೈಕ್ಯ ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿಗಳ ಪುಣ್ಯಸಂಸ್ಮರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸ್ವಾಮೀಜಿಗಳ ಆಶಯದಂತೆ ನಿರ್ಮಿಸಲಾದ ಸೇತುವೆಯನ್ನು ಅವರ ಪುಣ್ಯಸಂಸ್ಮರಣಾ ದಿನವೇ ಉದ್ಘಾಟಿಸುವ ಅವಕಾಶ ಸಿಕ್ಕಿರುವುದು ತಮ್ಮ ಜೀವನದ ಭಾಗ್ಯ ಎಂದು ತಿಳಿಸಿದರು. ಈ ಸೇತುವೆಗೆ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮೀಜಿಗಳ ಹೆಸರನ್ನೇ ನಾಮಕರಣ ಮಾಡಲಾಗಿದೆ ಎಂದರು.

"ಗುರುವಿನ ಪಾದಗಳಿಗೆ ಶರಣಾದರೆ ಜ್ಞಾನ ವೃದ್ಧಿಯಾಗುತ್ತದೆ ಎಂದು ಹಿರಿಯರು ಹೇಳಿದ್ದಾರೆ. ಇದು ಕಣ್ಣೀರು ಹಾಕುವ ದಿನವಲ್ಲ, ಶ್ರೀಗಳ ಆದರ್ಶ ಮತ್ತು ಸೇವಾ ಕಾರ್ಯಗಳನ್ನು ಮುಂದುವರಿಸುವ ಸಂಕಲ್ಪ ಮಾಡುವ ದಿನ. ಮೌನವೇ ಮಂತ್ರ, ಕಾಯಕವೇ ಪೂಜೆ ಎಂಬ ತತ್ವದೊಂದಿಗೆ ಶ್ರೀಗಳು ಬದುಕಿದರು" ಎಂದು ಸ್ಮರಿಸಿದರು.



ತಮಗೂ ಶ್ರೀ ದೇಗುಲ ಮಠಕ್ಕೂ ಹಲವು ದಶಕಗಳ ಬಾಂಧವ್ಯವಿದೆ ಎಂದು ಹೇಳಿದ ಮುಖ್ಯಮಂತ್ರಿ, ತಮ್ಮ ಕುಟುಂಬವು ಪ್ರತಿಯೊಂದು ಶುಭ ಕಾರ್ಯಕ್ಕೂ ಮಠಕ್ಕೆ ಬಂದು ಆಶೀರ್ವಾದ ಪಡೆಯುತ್ತಿತ್ತು. ತಾವು ಕೂಡ ಧರ್ಮದ ಮಾರ್ಗದಲ್ಲಿ ನಡೆಯಬೇಕು, ಧರ್ಮದಿಂದ ಬದುಕಬೇಕು ಮತ್ತು ಧರ್ಮದಿಂದಲೇ ಆಡಳಿತ ನಡೆಸಬೇಕು ಎಂಬ ಮೌಲ್ಯಗಳೊಂದಿಗೆ ಸಾರ್ವಜನಿಕ ಜೀವನ ಸಾಗಿಸುತ್ತಿರುವುದಾಗಿ ಹೇಳಿದರು.

ತಮ್ಮ ಶಿಕ್ಷಣ ಜೀವನದ ನೆನಪುಗಳನ್ನು ಹಂಚಿಕೊಂಡ ಅವರು, ಹೈದರಾಬಾದ್ ಕರ್ನಾಟಕ ವಿದ್ಯಾಸಂಸ್ಥೆಯಲ್ಲಿ ಪಿಯುಸಿ ಹಾಗೂ ರೇಣುಕಾಚಾರ್ಯ ಕಾಲೇಜಿನಲ್ಲಿ ಪದವಿ ವ್ಯಾಸಂಗ ಮಾಡಿರುವುದನ್ನು ಉಲ್ಲೇಖಿಸಿ, ಈ ಸಮಾಜದೊಂದಿಗೆ ತಮ್ಮ ಸಂಬಂಧ ಕೇವಲ ರಾಜಕೀಯವಲ್ಲ, ಭಾವನಾತ್ಮಕವೂ ಆಗಿದೆ ಎಂದು ಹೇಳಿದರು.

ಮುಮ್ಮಡಿ ನಿರ್ವಾಣ ಶ್ರೀಗಳು ಸಮಾಜ ಸೇವೆಗೆ ತಮ್ಮ ಜೀವನವನ್ನೇ ಸಮರ್ಪಿಸಿಕೊಂಡಿದ್ದರು ಎಂದು ಸ್ಮರಿಸಿದ ಮುಖ್ಯಮಂತ್ರಿ, "ಮರ ಹಣ್ಣು, ನೆರಳು ನೀಡಿದಂತೆ, ನದಿ ನೀರು ನೀಡಿದಂತೆ, ಹಸು ಹಾಲು ನೀಡಿದಂತೆ ಮನುಷ್ಯನ ಬದುಕು ಕೂಡ ಪರೋಪಕಾರಕ್ಕಾಗಿ ಇರಬೇಕು ಎಂಬ ಸಂದೇಶವನ್ನು ಶ್ರೀಗಳು ತಮ್ಮ ಜೀವನದ ಮೂಲಕ ಸಾರಿದರು" ಎಂದರು.

> ಮುಮ್ಮಡಿ ನಿರ್ವಾಣ ಶ್ರೀಗಳು ಸಮಾಜ ಸೇವೆಗೆ ತಮ್ಮ ಜೀವನವನ್ನೇ ಸಮರ್ಪಿಸಿಕೊಂಡಿದ್ದರು ಎಂದು ಸ್ಮರಿಸಿದ ಮುಖ್ಯಮಂತ್ರಿ, "ಮರ ಹಣ್ಣು, ನೆರಳು ನೀಡಿದಂತೆ, ನದಿ ನೀರು ನೀಡಿದಂತೆ, ಹಸು ಹಾಲು ನೀಡಿದಂತೆ ಮನುಷ್ಯನ ಬದುಕು ಕೂಡ ಪರೋಪಕಾರಕ್ಕಾಗಿ ಇರಬೇಕು ಎಂಬ ಸಂದೇಶವನ್ನು ಶ್ರೀಗಳು ತಮ್ಮ ಜೀವನದ ಮೂಲಕ ಸಾರಿದರು"

ಮಠವು ಶತಮಾನಗಳ ಇತಿಹಾಸ ಹೊಂದಿದ್ದು, ಸಾವಿರಾರು ವಿದ್ಯಾರ್ಥಿಗಳಿಗೆ ಅನ್ನ, ಅಕ್ಷರ ಮತ್ತು ಆಶ್ರಯ ನೀಡುವ ಮೂಲಕ ಸಮಾಜ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ಪ್ರಶಂಸಿಸಿದ ಅವರು, ಶ್ರೀಗಳ ಆಶೀರ್ವಾದದಿಂದಲೇ ತಮ್ಮ ರಾಜಕೀಯ ಜೀವನಕ್ಕೆ ಹೊಸ ದಿಕ್ಕು ದೊರೆತಿದೆ ಎಂದು ಹೇಳಿದರು.

ಚುನಾವಣೆಗೆ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಅನಾರೋಗ್ಯದ ಹಾಸಿಗೆಯಲ್ಲಿದ್ದ ಶ್ರೀಗಳನ್ನು ಭೇಟಿ ಮಾಡಿದ್ದಾಗ, "ನೀವು ಮುಖ್ಯಮಂತ್ರಿಯಾಗಬೇಕು" ಎಂದು ಆಶೀರ್ವದಿಸಿ ಚುನಾವಣಾ ವೆಚ್ಚಕ್ಕೂ ನೆರವು ನೀಡಿದ್ದರು ಎಂಬುದನ್ನು ಸ್ಮರಿಸಿದ ಮುಖ್ಯಮಂತ್ರಿ, ಆ ಆಶೀರ್ವಾದವೇ ಇಂದು ತಮ್ಮ ಮೇಲೆ ದೊಡ್ಡ ಜವಾಬ್ದಾರಿಯನ್ನು ತಂದಿದೆ ಎಂದರು.

ಮಠಗಳ ಸಂರಕ್ಷಣೆ ಎಲ್ಲರ ಜವಾಬ್ದಾರಿ ಎಂದು ಕರೆ ನೀಡಿದ ಅವರು, "ನಾವು ಎಷ್ಟೇ ಸಂಪಾದನೆ ಮಾಡಿದರೂ ಅದನ್ನು ಹೊತ್ತುಕೊಂಡು ಹೋಗುವುದಿಲ್ಲ. ಜನನ ಉಚಿತ, ಮರಣ ಖಚಿತ. ಈ ಎರಡರ ನಡುವಿನ ಬದುಕಿನಲ್ಲಿ ಸಾಧ್ಯವಾದಷ್ಟು ದಾನ, ಧರ್ಮ ಮತ್ತು ಸಮಾಜಸೇವೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯ" ಎಂದು ಹೇಳಿದರು.

ಕೊನೆಯಲ್ಲಿ, "ರಾಜಕಾರಣದಲ್ಲಿ ಧರ್ಮ ಇರಬೇಕು, ಧರ್ಮದಲ್ಲಿ ರಾಜಕಾರಣ ಇರಬಾರದು ಎಂಬುದು ನನ್ನ ನಂಬಿಕೆ. ಮುಮ್ಮಡಿ ನಿರ್ವಾಣ ಶ್ರೀಗಳ ಸತ್ಯ, ದಯೆ ಮತ್ತು ಧರ್ಮದ ಮಾರ್ಗದರ್ಶನ ಮುಂದಿನ ಪೀಳಿಗೆಗೆ ದಾರಿದೀಪವಾಗಲಿ" ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

# 'ಜಿಬಿಎ ವಾರ್ಡ್‌ಗಳಲ್ಲಿ ಸಮಾನಾಂತರ ಎಸ್‌ಐಆರ್ ತಕ್ಷಣ ನಿಲ್ಲಿಸಿ'

ಬೆಂಗಳೂರು

ಗ್ರೇಟರ್ ಬೆಂಗಳೂರು ಆಡಳಿತ (ಜಿಬಿಎ) ವ್ಯಾಪ್ತಿಯ 27 ವಾರ್ಡ್‌ಗಳಲ್ಲಿ ಕರ್ನಾಟಕ ರಾಜ್ಯ ಚುನಾವಣಾ ಆಯೋಗ ನಡೆಸುತ್ತಿರುವ ಸಮಾನಾಂತರ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ತಕ್ಷಣ ಸ್ಥಗಿತಗೊಳಿಸಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದರು.

ಮಲ್ಲೇಶ್ವರದ ರಾಜ್ಯ ಬಿಜೆಪಿ ಕಚೇರಿ ಜಗನ್ನಾಥ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಕೇಂದ್ರ ಚುನಾವಣಾ ಆಯೋಗ ರಾಜ್ಯಾದ್ಯಂತ ಎಸ್‌ಐಆರ್ ಪ್ರಕ್ರಿಯೆ ನಡೆಸುತ್ತಿರುವ ಸಂದರ್ಭದಲ್ಲಿ, ಜಿಬಿಎ ವ್ಯಾಪ್ತಿಯಲ್ಲಿ ರಾಜ್ಯ ಚುನಾವಣಾ ಆಯೋಗ ಮತ್ತೊಂದು ಪರಿಷ್ಕರಣೆ ನಡೆಸುತ್ತಿರುವುದು ಮತದಾರರಲ್ಲಿ ಗೊಂದಲ ಸೃಷ್ಟಿಸಿದೆ ಎಂದು ಆರೋಪಿಸಿದರು.




ಸುಮಾರು ಎರಡು ದಶಕಗಳ ಬಳಿಕ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯ ಉದ್ದೇಶ ಅಕ್ರಮ ಮತದಾರರನ್ನು ಗುರುತಿಸುವುದು, ಮೃತಪಟ್ಟವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವುದು ಹಾಗೂ ಮತದಾರರ ಪಟ್ಟಿಯನ್ನು ನಿಖರಗೊಳಿಸುವುದಾಗಿದೆ ಎಂದು ಅವರು ಹೇಳಿದರು. ನಗರ ಪ್ರದೇಶಗಳಲ್ಲಿ ಅನೇಕ ಮತದಾರರ ಹೆಸರುಗಳು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ದಾಖಲಾಗಿರುವುದು ಹಾಗೂ ಹಲವು ಮಂದಿ ಬೇರೆಡೆ ವಾಸಿಸುತ್ತಿದ್ದರೂ ಹಳೆಯ ಮತದಾರರ ಪಟ್ಟಿಯಲ್ಲಿ ಹೆಸರು ಉಳಿದಿರುವುದರಿಂದ ಮತದಾನದ ಪ್ರಮಾಣದ ಮೇಲೂ ಪರಿಣಾಮ ಬೀರುತ್ತಿದೆ. ಈ ಸಮಸ್ಯೆಗಳನ್ನು ನಿವಾರಿಸಲು ಎಸ್‌ಐಆರ್ ಅಗತ್ಯವಾಗಿದೆ ಎಂದು ವಿವರಿಸಿದರು. ಮಸೀದಿಗಳು, ಶಾದಿ ಮಹಲ್‌ಗಳು ಹಾಗೂ ಕಲ್ಯಾಣ ಮಂಟಪಗಳಲ್ಲಿ ಮತದಾರರ ಅರ್ಜಿಗಳನ್ನು ಭರ್ತಿ ಮಾಡಿಸಲಾಗುತ್ತಿದೆ ಎಂದು ಆರೋಪಿಸಿದ ಅವರು, ನಿಯಮಾನುಸಾರ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆಮನೆಗೆ ತೆರಳಿ ಅರ್ಜಿಗಳನ್ನು ವಿತರಿಸಿ ಮಾಹಿತಿ ಸಂಗ್ರಹಿಸಬೇಕು. ಆದರೆ ಈ ನಿಯಮಗಳನ್ನು ಪಾಲಿಸಲಾಗುತ್ತಿಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಸೈಬರ್ ಕೇಂದ್ರಗಳ ಮೂಲಕ ಅಕ್ರಮವಾಗಿ ಜನನ ಪ್ರಮಾಣಪತ್ರ ಹಾಗೂ ನಿವಾಸಿ ಪ್ರಮಾಣಪತ್ರಗಳನ್ನು ನೀಡಲಾಗುತ್ತಿದೆ ಎಂದು ಆರೋಪಿಸಿದರು.

# 14.10 ಕಿ.ಮೀ. ಪಾದಚಾರಿ ಮಾರ್ಗ ಅತಿಕ್ರಮಣ ಮುಕ್ತ

ಬೆಂಗಳೂರು

ಪಾದಚಾರಿಗಳ ಸುರಕ್ಷತೆಗೆ ಆದ್ಯತೆ ನೀಡುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೂರನೇ ದಿನವೂ ಬೃಹತ್ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದೆ. ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನ ಹಾಗೂ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ, ಹೈಕೋರ್ಟ್ ಆದೇಶದಂತೆ ನಡೆದ ಕಾರ್ಯಾಚರಣೆಯಲ್ಲಿ ಒಟ್ಟು 14.10 ಕಿಲೋಮೀಟರ್ ಪಾದಚಾರಿ ಮಾರ್ಗಗಳನ್ನು ಅತಿಕ್ರಮಣ ಮುಕ್ತಗೊಳಿಸಲಾಗಿದೆ.

ಈ ಕಾರ್ಯಾಚರಣೆಗೆ 7 ಜೆಸಿಬಿ, 35 ಟ್ರಾಕ್ಟರ್, 3 ಇತರೆ ಯಂತ್ರಗಳು ಹಾಗೂ 168 ಕಾರ್ಮಿಕರನ್ನು ನಿಯೋಜಿಸಲಾಗಿತ್ತು. ಕಾರ್ಯಾಚರಣೆಯಲ್ಲಿ 33 ಅಂಗಡಿಗಳು ಹಾಗೂ ಬೀದಿ ವ್ಯಾಪಾರಿಗಳು, 52 ತಳ್ಳುವ ಗಾಡಿಗಳು, 121 ಶೀಟ್‌ಗಳು ಮತ್ತು ಕೆನೋಪಿಗಳು, 109 ಮೆಟ್ಟಿಲುಗಳು ಹಾಗೂ ಯಾರ್ಂಪ್‌ಗಳು, 141 ಜಾಹೀರಾತು ಫಲಕಗಳು, 2 ತಾತ್ಕಾಲಿಕ ಶೆಡ್‌ಗಳು ಮತ್ತು 46.50 ಟನ್ ತ್ಯಾಜ್ಯ ತೆರವುಗೊಳಿಸಲಾಯಿತು.

ವಲಯ-1ರ ಬ್ಯಾಟರಾಯನಪುರ, ವಿದ್ಯಾರಣ್ಯಪುರ, ಪುಲಿಕೇಶಿನಗರ ಮತ್ತು ಸರ್ವಜ್ಞನಗರ ವಿಭಾಗಗಳಲ್ಲಿ ಒಟ್ಟು 5.40 ಕಿಲೋಮೀಟರ್ ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮುಕ್ತಗೊಳಿಸಲಾಯಿತು. ಸಹಕಾರನಗರ, ಎಂ.ಎಸ್. ಪಾಳ್ಯ, ದಿನ್ನೂರು ಮುಖ್ಯರಸ್ತೆ, ಕಮ್ಮನಹಳ್ಳಿ ಹಾಗೂ ಹೆಣ್ಣೂರು ರಸ್ತೆಗಳಲ್ಲಿನ ಅಕ್ರಮ ನಿರ್ಮಾಣಗಳು, ತಳ್ಳುವ ಗಾಡಿಗಳು, ಮೆಟ್ಟಿಲುಗಳು, ಜಾಹೀರಾತು ಫಲಕಗಳು ಹಾಗೂ ಕಟ್ಟಡ ತ್ಯಾಜ್ಯವನ್ನು ತೆರವುಗೊಳಿಸಿ ಪಾದಚಾರಿಗಳಿಗೆ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಲಾಯಿತು.

# 5ರಂದು 14 ಅಡಿ ಎತ್ತರದ ಅಂಬೇಡ್ಕರ್ ಕಂಚಿನ ಪ್ರತಿಮೆ ಅನಾವರಣ

ಬೆಂಗಳೂರು

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ನಿರ್ಮಿಸಲಾಗಿರುವ 14 ಅಡಿ ಎತ್ತರದ ಡಾ. ಬಿ.ಆರ್. ಅಂಬೇಡ್ಕರ್ ಅವರ ಕಂಚಿನ ಪ್ರತಿಮೆಯನ್ನು ಜುಲೈ 5ರಂದು ಮುಖ್ಯಮಂತ್ರಿ ಅವರಿಂದ ಅನಾವರಣಗೊಳಿಸಲಾಗುತ್ತದೆ ಎಂದು ಮಾಜಿ ಸಚಿವರು ಹಾಗೂ ದೇವನಹಳ್ಳಿ ಕ್ಷೇತ್ರದ ಶಾಸಕರಾದ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕರ್ನಾಟಕ ಸರ್ಕಾರ, ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನಡೆಯಲಿರುವ ಈ ಕಾರ್ಯಕ್ರಮವು ಬೆಳಿಗ್ಗೆ 11 ಗಂಟೆಗೆ ಆರಂಭವಾಗಲಿದೆ. ಸಂವಿಧಾನ ಶಿಲ್ಪಿ ಹಾಗೂ ವಿಶ್ವಮಾನವ ಡಾ. ಬಿ.ಆರ್. ಅಂಬೇಡ್ಕರ್ ಅವರ ಶೋಷಿತ ಸಮುದಾಯಗಳಿಗೆ ನೀಡಿದ ಅಪೂರ್ವ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಈ ಪ್ರತಿಮೆಯನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರತಿಮೆಯನ್ನು ಅನಾವರಣಗೊಳಿಸಲಿದ್ದು, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೇರಿದಂತೆ ಸಚಿವರು, ಶಾಸಕರು ಹಾಗೂ ವಿವಿಧ ಗಣ್ಯರು ಭಾಗವಹಿಸಲಿದ್ದಾರೆ. ರಾಜ್ಯ ಹಾಗೂ ರಾಷ್ಟ್ರಮಟ್ಟದ ಮಹತ್ವದ ಕಾರ್ಯಕ್ರಮವಾಗಿ ಇದನ್ನು ಆಯೋಜಿಸಲಾಗಿದ್ದು, ಶೋಷಿತ ಸಮುದಾಯಗಳ ಸಂಘಟನೆಗಳು, ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕೆ.ಎಚ್. ಮುನಿಯಪ್ಪ ಮನವಿ ಮಾಡಿದ್ದಾರೆ.

# ಸಿಎಂಆರ್ ವಿಶ್ವವಿದ್ಯಾಲಯದಲ್ಲಿ ವಿಶ್ವದರ್ಜೆಯ ಆಸ್ಟ್ರೋ ಟರ್ಫ್ ಫುಟ್ಬಾಲ್ ಕ್ರೀಡಾಂಗಣ ಲೋಕಾರ್ಪಣೆ

ಬೆಂಗಳೂರು

ಸಿಎಂಆರ್ ವಿಶ್ವವಿದ್ಯಾಲಯದ ಬಾಗಲೂರು ಲೇಕ್‌ಸೈಡ್ ಕ್ಯಾಂಪಸ್‌ನಲ್ಲಿ ನಿರ್ಮಿಸಲಾದ ವಿಶ್ವದರ್ಜೆಯ ಆಸ್ಟ್ರೋ ಟರ್ಫ್ ಫುಟ್ಬಾಲ್ ಕ್ರೀಡಾಂಗಣವನ್ನು ಕರ್ನಾಟಕ ರಾಜ್ಯ ಫುಟ್ಬಾಲ್ ಅಸೋಸಿಯೇಷನ್ (ಕೆಎಸ್‌ಎಫ್‌ಎ) ಅಧ್ಯಕ್ಷ, ಎಐಎಫ್‌ಎಫ್ ಉಪಾಧ್ಯಕ್ಷ, ಬಿಡಿಎ ಅಧ್ಯಕ್ಷ ಹಾಗೂ ಶಾಸಕ ಎನ್.ಎ. ಹ್ಯಾರಿಸ್ ಲೋಕಾರ್ಪಣೆಗೊಳಿಸಿ, ಸಿಎಂಆರ್ ಅಂತರ-ಕ್ಲಬ್ ಫುಟ್ಬಾಲ್ ಪಂದ್ಯಾವಳಿಗೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕ್ರೀಡೆ ವಿದ್ಯಾರ್ಥಿ ಜೀವನದ ಅವಿಭಾಜ್ಯ ಅಂಗವಾಗಿದ್ದು, ಸಿಎಂಆರ್ ವಿಶ್ವವಿದ್ಯಾಲಯದ ಅಧ್ಯಕ್ಷ ಡಾ. ಕೆ.ಸಿ. ರಾಮಮೂರ್ತಿ ಅವರ ದೂರದೃಷ್ಟಿಯಿಂದ ಅಂತರಾಷ್ಟ್ರೀಯ ಮಟ್ಟದ ಫುಟ್ಬಾಲ್ ಕ್ರೀಡಾಂಗಣ ನಿರ್ಮಾಣವಾಗಿದೆ ಎಂದು ಶ್ಲಾಘಿಸಿದರು. ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕು ಎಂದು ಕರೆ ನೀಡಿದರು.

ರಾಜ್ಯ ಮತ್ತು ರಾಷ್ಟ್ರಮಟ್ಟದ ಫುಟ್ಬಾಲ್ ಪಂದ್ಯಾವಳಿಗಳನ್ನು ಆಯೋಜಿಸಲು ಕೆಎಸ್‌ಎಫ್‌ಎ ಹಾಗೂ ಎಐಎಫ್‌ಎಫ್ ವತಿಯಿಂದ ಸಿಎಂಆರ್ ವಿಶ್ವವಿದ್ಯಾಲಯದೊಂದಿಗೆ ಸಹಕಾರದ ಬಗ್ಗೆ ಚಿಂತನೆ ನಡೆದಿದೆ ಎಂದು ತಿಳಿಸಿದರು.



ಮಾಜಿ ರಾಜ್ಯಸಭಾ ಸದಸ್ಯ ಹಾಗೂ ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ. ಕೆ.ಸಿ. ರಾಮಮೂರ್ತಿ ಮಾತನಾಡಿ, ಶೈಕ್ಷಣಿಕ ಸಾಧನೆಯ ಜೊತೆಗೆ ಕ್ರೀಡೆ ಮತ್ತು ವ್ಯಕ್ತಿತ್ವ ವಿಕಸನಕ್ಕೂ ಸಮಾನ ಆದ್ಯತೆ ನೀಡಲಾಗುತ್ತಿದೆ ಎಂದರು.

ಈಗಾಗಲೇ ವಿಶ್ವದರ್ಜೆಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಿರುವ ಸಿಎಂಆರ್, ಇದೀಗ ಆಧುನಿಕ ತಂತ್ರಜ್ಞಾನದಿಂದ ನಿರ್ಮಿತ ಆಸ್ಟ್ರೋ ಟರ್ಫ್ ಫುಟ್ಬಾಲ್ ಕ್ರೀಡಾಂಗಣವನ್ನು ಸಮಾಜಕ್ಕೆ ಸಮರ್ಪಿಸಿದೆ ಎಂದು ಹೇಳಿದರು.

ಈ ಕ್ರೀಡಾಂಗಣದಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದ ಹೊನಲು-ಬೆಳಕಿನ ಪಂದ್ಯಾವಳಿಗಳನ್ನು ಆಯೋಜಿಸಬಹುದಾಗಿದೆ ಎಂದು ಅವರು ತಿಳಿಸಿದರು.

ಅಂತರ-ಕ್ಲಬ್ ಫುಟ್ಬಾಲ್ ಪಂದ್ಯಾವಳಿಯಲ್ಲಿ ಬೆಂಗಳೂರಿನ ವಿವಿಧ ಫುಟ್ಬಾಲ್ ಕ್ಲಬ್‌ಗಳು ಭಾಗವಹಿಸಿದ್ದವು. ವಿಜೇತ ತಂಡಕ್ಕೆ ರೂ.50,000 ಹಾಗೂ ರನ್ನರ್ಸ್-ಅಪ್ ತಂಡಕ್ಕೆ ರೂ.30,000 ನಗದು ಬಹುಮಾನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಸಹ ಕುಲಾಧಿಪತಿ ಜಯದೀಪ್ ಕೆ.ಆರ್. ರೆಡ್ಡಿ ಸ್ವಾಗತಿಸಿದರು. ಉಪಕುಲಪತಿ ಡಾ. ಎಚ್.ಬಿ. ರಾಘವೇಂದ್ರ, ಪ್ರೊ-ವೈಸ್ ಚಾನ್ಸೆಲರ್ ಡಾ. ಪ್ರವೀಣ್ ಆರ್., ರಿಜಿಸ್ಟ್ರಾರ್ ಡಾ. ಕೆ.ಇ. ಪ್ರಕಾಶ್ ಸೇರಿದಂತೆ ಹಲವು ಗಣ್ಯರು, ಅಧ್ಯಾಪಕರು, ವಿದ್ಯಾರ್ಥಿಗಳು ಮತ್ತು ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

# ಐಪಿಒಗೆ ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ರತ್ನದೀಪ್ ರಿಟೇಲ್

ಹೈದರಾಬಾದ್

ಆಂಧ್ರಪ್ರದೇಶ, ತೆಲಂಗಾಣ ಹಾಗೂ ಕರ್ನಾಟಕದಲ್ಲಿ ಸಂಘಟಿತ ಆಹಾರ, ದಿನಸಿ ಮತ್ತು ಮೌಲ್ಯಾಧಾರಿತ ಫ್ಯಾಷನ್ ಚಿಲ್ಲರೆ ವ್ಯಾಪಾರ ನಡೆಸುತ್ತಿರುವ ರತ್ನದೀಪ್ ರಿಟೇಲ್ ಲಿಮಿಟೆಡ್ ತನ್ನ ಆರಂಭಿಕ ಸಾರ್ವಜನಿಕ ಷೇರು ಮಾರಾಟ (ಐಪಿಒ) ಪ್ರಕ್ರಿಯೆಗೆ ಚಾಲನೆ ನೀಡಿದ್ದು, ಮಾರುಕಟ್ಟೆ ನಿಯಂತ್ರಕ ಸಂಸ್ಥೆ ಸೆಬಿಗೆ ಕರಡು ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಎಚ್‌ಪಿ) ಸಲ್ಲಿಸಿದೆ.

ಪ್ರಸ್ತಾವಿತ ಐಪಿಒದಲ್ಲಿ ರೂ.400 ಕೋಟಿ ಮೌಲ್ಯದ ಹೊಸ ಈಕ್ವಿಟಿ ಷೇರುಗಳ ಸಂಚಿಕೆ ಹಾಗೂ ಪ್ರವರ್ತಕರಿಂದ 1,48,60,000 ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆ (ಒಎಫ್‌ಎಸ್) ಒಳಗೊಂಡಿದೆ.

ಕಂಪನಿಯ ಪ್ರವರ್ತಕರಾದ ಸಂದೀಪ್ ಅಗರ್ವಾಲ್, ಮನೀಶ್ ಭಾರ್ತಿಯಾ, ಮಿತೇಶ್ ಭಾರ್ತಿಯಾ, ಯಶ್ ಅಗರ್ವಾಲ್ ಹಾಗೂ ಕವಿತಾ ಅಗರ್ವಾಲ್ ಅವರು ಮಾರಾಟದ ಕೊಡುಗೆಯ ಮೂಲಕ ತಮ್ಮ ಷೇರುಗಳನ್ನು ಮಾರಾಟ ಮಾಡಲಿದ್ದಾರೆ.

ಹೊಸ ಷೇರುಗಳ ಸಂಚಿಕೆಯಿಂದ ಸಂಗ್ರಹವಾಗುವ ನಿವ್ವಳ ಮೊತ್ತದಲ್ಲಿ ರೂ.40 ಕೋಟಿ ಸಾಲಗಳ ಮರುಪಾವತಿ ಅಥವಾ ಮುಂಗಡ ಪಾವತಿಗೆ, ರೂ.260 ಕೋಟಿ ರತ್ನದೀಪ್ ಹಾಗೂ ನ್ಯಾಷನಲ್ ಮಾರ್ಟ್ ಮಾದರಿಯ ಹೊಸ ಮಳಿಗೆಗಳ ಸ್ಥಾಪನೆಗೆ ಮುಂದಾಗಿದೆ.


ಉಳಿದ ಮೊತ್ತವನ್ನು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗೆ ಬಳಸಲು ಕಂಪನಿ ಯೋಜಿಸಿದೆ. ರತ್ನದೀಪ್ ರಿಟೇಲ್ ಸಂಸ್ಥೆಯು ತಾಜಾ ಆಹಾರ ಪದಾರ್ಥಗಳು, ದಿನಸಿ, ವೇಗವಾಗಿ ಬಳಕೆಯಾಗುವ ಗ್ರಾಹಕ ಉತ್ಪನ್ನಗಳು, ಸಾಮಾನ್ಯ ಗೃಹೋಪಯೋಗಿ ವಸ್ತುಗಳು ಹಾಗೂ ಉಡುಪು ಸೇರಿದಂತೆ 30 ಸಾವಿರಕ್ಕೂ ಹೆಚ್ಚು ಉತ್ಪನ್ನಗಳ ವೈವಿಧ್ಯಮಯ ಶ್ರೇಣಿಯನ್ನು ಗ್ರಾಹಕರಿಗೆ ಒದಗಿಸುತ್ತಿದೆ.

# ಕೀವೇ ಹೈಪ್ ವೋಲ್ಟ್-ಆರ್ ಬಿಡುಗಡೆ

ಬೆಂಗಳೂರು

ಕೀವೇ ಇಂಡಿಯಾ ಸಂಸ್ಥೆ ತನ್ನ ಅತ್ಯಾಧುನಿಕ ಪ್ರೀಮಿಯಂ ಕಾರ್ಯಕ್ಷಮತೆಯ ಎಲೆಕ್ಟ್ರಿಕ್ ಸ್ಕೂಟರ್ ಹೈಪ್ ವೋಲ್ಟ್-ಆರ್ ಅನ್ನು ಭಾರತೀಯ ಮಾರುಕಟ್ಟೆಗೆ ಪರಿಚಯಿಸಿದೆ. ಆಕರ್ಷಕ ವಿನ್ಯಾಸ, ಸುಧಾರಿತ ತಂತ್ರಜ್ಞಾನ ಮತ್ತು ಶಕ್ತಿಶಾಲಿ ಕಾರ್ಯಕ್ಷಮತೆಯೊಂದಿಗೆ ಈ ಸ್ಕೂಟರ್ ನಗರ ಪ್ರದೇಶದ ಯುವ ಸವಾರರನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾಗಿದೆ.

ಪ್ರಾರಂಭಿಕ ರೂ. 1,99,000 (ಎಕ್ಸ್-ಶೋರೂಂ) ಬೆಲೆಯಲ್ಲಿ ಲಭ್ಯವಿರುವ



ಹೈಪ್ ವೋಲ್ಟ್-ಆರ್, ಕ್ರಿಸ್ಟಲ್ ವೈಟ್ ಮತ್ತು ಪ್ಲಾಟಿನಂ ಗ್ರೇ ಬಣ್ಣಗಳಲ್ಲಿ ದೊರೆಯಲಿದೆ.

ಗ್ರಾಹಕರು ಕೇವಲ ರೂ. 5,000 ಮುಂಗಡ ಪಾವತಿಸಿ ಕೀವೇ ಇಂಡಿಯಾದ ಅಧಿಕೃತ ವೆಬ್‌ಸೈಟ್ ಮೂಲಕ ಬುಕ್ಕಿಂಗ್ ಮಾಡಬಹುದು.

ಹೈಪ್ ವೋಲ್ಟ್-ಆರ್‌ನ ಪ್ರಮುಖ ವಿಶೇಷತೆ ಅದರ 5 ಕಿಲೋವ್ಯಾಟ್-ಗಂಟೆ ಸಾಮರ್ಥ್ಯದ ಡ್ಯುಯಲ್ ಬ್ಯಾಟರಿ ವ್ಯವಸ್ಥೆ. ಇದು ಐಡಿಸಿ ಪ್ರಮಾಣೀಕೃತ 180 ಕಿಲೋಮೀಟರ್‌ವರೆಗೆ ಸವಾರಿಯ ರೇಂಜ್ ಒದಗಿಸುತ್ತದೆ. ಬ್ಯಾಟರಿಗಳನ್ನು ವಾಹನದಲ್ಲೇ ಚಾರ್ಜ್ ಮಾಡಬಹುದಾಗಿದ್ದು, ಅಗತ್ಯವಿದ್ದರೆ ಹೊರತೆಗೆದು ಪ್ರತ್ಯೇಕವಾಗಿಯೂ ಚಾರ್ಜ್ ಮಾಡುವ ಅವಕಾಶ ಕಲ್ಪಿಸಲಾಗಿದೆ. ಇದರಿಂದ ಅಪಾರ್ಟ್‌ಮೆಂಟ್ ಹಾಗೂ ನಗರ ಪ್ರದೇಶದ ಬಳಕೆದಾರರಿಗೆ ಹೆಚ್ಚಿನ ಅನುಕೂಲವಾಗಲಿದೆ.

ವೇಗದ ಚಾರ್ಜಿಂಗ್ ವ್ಯವಸ್ಥೆಯೊಂದಿಗೆ ಸ್ಕೂಟರ್ ಕೇವಲ 3 ಗಂಟೆಗಳಲ್ಲಿ 0ರಿಂದ 80 ಶೇಕಡಾ ಚಾರ್ಜ್ ಆಗುತ್ತದೆ. ಇದರಿಂದ ಚಾರ್ಜಿಂಗ್‌ಗೆ ಬೇಕಾಗುವ ಸಮಯ ಕಡಿಮೆಯಾಗುತ್ತಿದ್ದು, ದೈನಂದಿನ ಬಳಕೆಗೆ ಹೆಚ್ಚು ಅನುಕೂಲಕರವಾಗಲಿದೆ.

# ಮತದಾರರ ಪಟ್ಟಿ ಪರಿಷ್ಕರಣೆ ಜಾಗೃತಿಗೆ ಕೋಲಾರದಲ್ಲಿ ಬೃಹತ್ ಸೈಕಲ್ ಜಾಥಾ

ಕೋಲಾರ

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸುವ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬಲಪಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ (ಎಸ್‌ವೀಪ್) ಸಮಿತಿಯ ಸಂಯುಕ್ತ ಆಶ್ರಯದಲ್ಲಿ ಕೋಲಾರ ನಗರದಲ್ಲಿ ಶುಕ್ರವಾರ ಬೃಹತ್ ಸೈಕಲ್ ಜಾಥಾ ಆಯೋಜಿಸಲಾಯಿತು.

ನಗರದ ಐಬಿ (ಬಂಗಾರಪೇಟೆ ಸರ್ಕಲ್)ನಿಂದ ಆರಂಭವಾದ ಜಾಗೃತಿ ಜಾಥಾಕ್ಕೆ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಜಂಟಿಯಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ, ಪ್ರಜಾಪ್ರಭುತ್ವದ ಯಶಸ್ಸು ಮತದಾರರ



ಸಕ್ರಿಯ ಭಾಗವಹಿಸುವಿಕೆಯ ಮೇಲೆ ಅವಲಂಬಿತವಾಗಿದೆ ಎಂದು ಹೇಳಿದರು. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಅಭಿಯಾನವು ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಹಾಗೂ ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಸಿಕೊಳ್ಳಲು ಉತ್ತಮ ಅವಕಾಶವಾಗಿದೆ. ಜಿಲ್ಲೆಯ ಪ್ರತಿಯೊಬ್ಬ ನಾಗರಿಕರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಜವಾಬ್ದಾರಿಯುತ ಮತದಾರರಾಗಬೇಕು ಎಂದು ಅವರು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಮಾತನಾಡಿ, ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು ಮೂಲಭೂತ ಹಕ್ಕು ಹಾಗೂ ಕರ್ತವ್ಯವಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ–2026 ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸುವ ಮೂಲಕ ಪ್ರಜಾಪ್ರಭುತ್ವದ ಅಡಿಪಾಯವನ್ನು ಮತ್ತಷ್ಟು ಗಟ್ಟಿಗೊಳಿಸುವುದೇ ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಜಾಥಾದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ನಗರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ಉತ್ಸಾಹದಿಂದ ಸೈಕಲ್ ಸವಾರಿ ನಡೆಸಿದರು. ಈ ಮೂಲಕ ಸಾರ್ವಜನಿಕರಲ್ಲಿ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು.

ಜಾಥಾ ಸಾಗಿದ ಮಾರ್ಗದುದ್ದಕ್ಕೂ ಮತದಾರರ ಪಟ್ಟಿಯಲ್ಲಿ ಹೊಸದಾಗಿ ಹೆಸರು ನೋಂದಾಯಿಸುವುದು, ತಿದ್ದುಪಡಿ ಮಾಡಿಸುವುದು ಹಾಗೂ ತಮ್ಮ ಹೆಸರು ಇರುವುದನ್ನು ಪರಿಶೀಲಿಸಿಕೊಳ್ಳುವ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಈ ಜಾಗೃತಿ ಅಭಿಯಾನಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.

# ವಾಟರ್ ಮಾಫಿಯಾದಲ್ಲಿ ಕಡಿವಾಣಕ್ಕೆ ಆಗ್ರಹ

ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್–41ರಲ್ಲಿ ಕಂದಾಯ ವಸೂಲಿಗಾರರಾಗಿ ಕಾರ್ಯನಿರ್ವಹಿಸುತ್ತಿರುವ ಶಶಿಕಾಂತ್ ಬೆಳ್ಳೂರು ಅವರು ಖಾಸಗಿ ನೀರು ಸರಬರಾಜು ವ್ಯವಹಾರದಲ್ಲಿ ತೊಡಗಿದ್ದು, ಸರ್ಕಾರಿ ಸೇವಾ ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ಆರೋಪಿಸಿ ಅವರನ್ನು ತಕ್ಷಣ ಅಮಾನತುಗೊಳಿಸಿ, ಸಮಗ್ರ ತನಿಖೆ ನಡೆಸುವಂತೆ ವಂದೇ ಮಾತರಂ ಸಮಾಜ ಸೇವಾ ಸಂಸ್ಥೆ ಒತ್ತಾಯಿಸಿದೆ.



ಸಂಸ್ಥೆಯ ರಾಜ್ಯಾಧ್ಯಕ್ಷ ಸಿ.ಎಂ. ಶಿವಕುಮಾರ್ ನಾಯ್ಕ್ ಅವರು ಪಶ್ಚಿಮ ವಲಯ ಮಹಾನಗರ ಪಾಲಿಕೆ ಆಯುಕ್ತರಿಗೆ ದೂರು ಸಲ್ಲಿಸಿ, ಸರ್ಕಾರಿ ನೌಕರರಾಗಿರುವ ಶಶಿಕಾಂತ್ ಬೆಳ್ಳೂರು ಅವರು "ಆದ್ವಿಕ್ ವಾಟರ್ ಸಪ್ಲೈ" ಹೆಸರಿನಲ್ಲಿ ಖಾಸಗಿ ನೀರು ಸರಬರಾಜು ವ್ಯವಹಾರ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಸರ್ಕಾರಿ ಸೇವೆಯಲ್ಲಿರುವ ನೌಕರರು ಖಾಸಗಿ ವ್ಯಾಪಾರ ಅಥವಾ ಲಾಭದಾಯಕ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬಾರದು ಎಂಬ ನಿಯಮಗಳಿದ್ದರೂ, ಶಶಿಕಾಂತ್ ಬೆಳ್ಳೂರು ಅವರು ಬೋರ್‌ವೆಲ್ ನೀರನ್ನು ವಾಣಿಜ್ಯ ಉದ್ದೇಶಕ್ಕೆ ಬಳಸಿಕೊಂಡು ಟ್ಯಾಂಕರ್ ಹಾಗೂ ಟ್ರಾಕ್ಟರ್‌ಗಳ ಮೂಲಕ ಮನೆಗಳು, ಮದುವೆ ಸಮಾರಂಭಗಳು ಹಾಗೂ ನಿರ್ಮಾಣ ಕಾಮಗಾರಿಗಳಿಗೆ ನೀರು ಪೂರೈಸುತ್ತಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಟ್ಯಾಂಕರ್ ಮೂಲಕ ನೀರು ಪೂರೈಕೆಗೆ ರೂ.800 ಹಾಗೂ ಟ್ರಾಕ್ಟರ್ ಮೂಲಕ ರೂ.500 ದರ ನಿಗದಿಪಡಿಸಿ ನೀರು ಮಾರಾಟ ಮಾಡುತ್ತಿರುವುದಾಗಿ ಆರೋಪಿಸಿರುವ ಸಂಸ್ಥೆ, ಮನೆ ಬಳಕೆಗೆ ಕೊರೆಸಿದ ಬೋರ್‌ವೆಲ್ ಅನ್ನು ವಾಣಿಜ್ಯ ಉದ್ದೇಶಕ್ಕೆ ಬಳಸಿರುವುದು ನಿಯಮಬಾಹಿರ ಎಂದು ಹೇಳಿದೆ. ಇದಲ್ಲದೆ, ಶಶಿಕಾಂತ್ ಬೆಳ್ಳೂರು ಅವರು ರಾಜಕೀಯ ಮುಖಂಡರು ಹಾಗೂ ಹಿರಿಯ ಅಧಿಕಾರಿಗಳ ಹೆಸರನ್ನು ಉಲ್ಲೇಖಿಸಿ ಪ್ರಭಾವ ಬೀರುತ್ತಿರುವುದಾಗಿ ಮತ್ತು ಕೆಲಸದ ವೇಳೆಯಲ್ಲಿಯೇ ಖಾಸಗಿ ನೀರು ಸರಬರಾಜು ಚಟುವಟಿಕೆಗಳಲ್ಲಿ ತೊಡಗಿಕೊಂಡಿದ್ದಾರೆ ಎಂದು ಸಂಸ್ಥೆ ಗಂಭೀರ ಆರೋಪ ಮಾಡಿದೆ.

ಈ ಎಲ್ಲ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪು ಸಾಬೀತಾದಲ್ಲಿ ಶಶಿಕಾಂತ್ ಬೆಳ್ಳೂರು ಅವರನ್ನು ಅಮಾನತುಗೊಳಿಸುವುದರ ಜೊತೆಗೆ ವಾಟರ್ ಮಾಫಿಯಾ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ಆರೋಪದಡಿ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು ಎಂದು ವಂದೇ ಮಾತರಂ ಸಮಾಜ ಸೇವಾ ಸಂಸ್ಥೆ ಆಗ್ರಹಿಸಿದೆ.

# ರಾಷ್ಟ್ರೀಯ ವೈದ್ಯರ ದಿನಾಚರಣೆ: ನೈರುತ್ಯ ರೈಲ್ವೆಯಿಂದ ವೈದ್ಯರಿಗೆ ಸನ್ಮಾನ, ಸಿಪಿಆರ್ ತರಬೇತಿ

ಹುಬ್ಬಳ್ಳಿ

ನೈರುತ್ಯ ರೈಲ್ವೆಯ ವೈದ್ಯಕೀಯ ವಿಭಾಗವು ವೈದ್ಯರ ಸೇವೆಯನ್ನು ಗೌರವಿಸುವ ಹಾಗೂ ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ ರಾಷ್ಟ್ರೀಯ ವೈದ್ಯರ ದಿನಾಚರಣೆ 2026ಯನ್ನು ಅರ್ಥಪೂರ್ಣವಾಗಿ ಆಚರಿಸಿತು.

ಹುಬ್ಬಳ್ಳಿಯ ಕೇಂದ್ರ ರೈಲ್ವೆ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನೈರುತ್ಯ ರೈಲ್ವೆಯ ಪ್ರಧಾನ ಮುಖ್ಯ ವೈದ್ಯಕೀಯ ನಿರ್ದೇಶಕಿ ಡಾ. ಶೋಭಾ ಜಾಸ್ಮಿನ್ ಎಸ್. ವೈದ್ಯರೊಂದಿಗೆ ಸಂವಾದ ನಡೆಸಿ, ರೈಲ್ವೆ ಆರೋಗ್ಯ ಸೇವೆಯಲ್ಲಿ ಅವರು ಸಲ್ಲಿಸುತ್ತಿರುವ ಸಮರ್ಪಿತ ಸೇವೆಯನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಹಿರಿಯ ವೈದ್ಯರನ್ನು ಸನ್ಮಾನಿಸಲಾಯಿತು. ಅಲ್ಲದೆ, ನೈತಿಕತೆ ಮತ್ತು ಸಹಾನುಭೂತಿ ಆಧಾರಿತ ವೈದ್ಯಕೀಯ ಸೇವೆ ನೀಡುವ ಬದ್ಧತೆಯನ್ನು ಪುನರುಚ್ಚರಿಸುವ ಉದ್ದೇಶದಿಂದ ವೈದ್ಯರಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ರೈಲ್ವೆ ನೌಕರರು ಸಹ ಭಾಗವಹಿಸಿ ವೈದ್ಯರಿಗೆ ಶುಭಾಶಯ ಕೋರಿದರು.

ರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ ಬೆಂಗಳೂರು ವಿಭಾಗೀಯ ರೈಲ್ವೆ ಆಸ್ಪತ್ರೆಯಲ್ಲಿ ಸುಮಾರು 50 ಮಂದಿ ಹೌಸ್ ಕೀಪಿಂಗ್ ಸಿಬ್ಬಂದಿಗೆ ಆರೋಗ್ಯ ತಪಾಸಣೆ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು. ಇದರಲ್ಲಿ ಅಧಿಕ ರಕ್ತದೊತ್ತಡ, ಮಧುಮೇಹ ಹಾಗೂ ಎಚ್‌ಐವಿ ತಪಾಸಣೆ ನಡೆಸಲಾಯಿತು.

ಇದೇ ವೇಳೆ, ಸುಬ್ರಹ್ಮಣ್ಯ ರೋಡ್ ರೈಲ್ವೆ ನಿಲ್ದಾಣದಲ್ಲಿ ಕಬಕಪುತ್ತೂರು ಆರೋಗ್ಯ ಘಟಕದ ವತಿಯಿಂದ ಸಾರ್ವಜನಿಕ ಆರೋಗ್ಯ ಶಿಬಿರ ಆಯೋಜಿಸಿ, ಅಧಿಕ ರಕ್ತದೊತ್ತಡ, ಮಧುಮೇಹ ಹಾಗೂ ಬೊಜ್ಜಿನ ತಪಾಸಣೆ ನಡೆಸಲಾಯಿತು. ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಗೆ ಸ್ಥಳದಲ್ಲೇ ಚಿಕಿತ್ಸೆ ಮತ್ತು ವೈದ್ಯಕೀಯ ಸಲಹೆ ನೀಡಲಾಯಿತು.

ವೈದ್ಯಕೀಯ ವಿಭಾಗವು ಹುಬ್ಬಳ್ಳಿಯ ಕ್ಯಾರೇಜ್ ವರ್ಕ್‌ಶಾಪ್‌ನ ಅಧಿಕಾರಿಗಳು ಹಾಗೂ ಮೇಲ್ವಿಚಾರಕರಿಗೆ ಕಾರ್ಡಿಯೋಪಲ್ಮನರಿ ರಿಸಸಿಟೇಶನ್ (ಸಿ.ಪಿ.ಆರ್.) ಮತ್ತು ಬೇಸಿಕ್ ಲೈಫ್ ಸಪೋರ್ಟ್ (ಬಿ.ಎಲ್.ಎಸ್.) ಕುರಿತು ವಿಶೇಷ ತರಬೇತಿ ಕಾರ್ಯಕ್ರಮವನ್ನೂ ಆಯೋಜಿಸಿತು.

ಈ ತರಬೇತಿಯಲ್ಲಿ ಜೀವ ರಕ್ಷಕ ತಂತ್ರಗಳ ನೇರ ಪ್ರಾತ್ಯಕ್ಷಿಕೆ, ಹೃದಯಾಘಾತ ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾಹಿತಿ ನೀಡಲಾಯಿತು. ಕ್ಯಾರೇಜ್ ವರ್ಕ್‌ಶಾಪ್‌ನ ಅಧಿಕಾರಿಗಳು, ಮೇಲ್ವಿಚಾರಕರು ಹಾಗೂ ಸಿಬ್ಬಂದಿ ಉತ್ಸಾಹದಿಂದ ತರಬೇತಿಯಲ್ಲಿ ಭಾಗವಹಿಸಿ ತುರ್ತು ಸಂದರ್ಭಗಳಲ್ಲಿ ಜೀವ ಉಳಿಸುವ ಕೌಶಲ್ಯಗಳನ್ನು ಕಲಿತುಕೊಂಡರು.

# ಕ್ರೂಸ್, ಬೀಚ್ ಪ್ರವಾಸೋದ್ಯಮಕ್ಕೆ ವಿಶೇಷ ಆದ್ಯತೆ

ಬೆಂಗಳೂರು

ಕರ್ನಾಟಕವನ್ನು ದೇಶದ ಪ್ರಮುಖ ಪ್ರವಾಸೋದ್ಯಮ ತಾಣವನ್ನಾಗಿ ರೂಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ 'ಕರಾವಳಿ–ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ–2026' ರೂಪಿಸುತ್ತಿದ್ದು, ಕ್ರೂಸ್ ಪ್ರವಾಸೋದ್ಯಮ, ಬೀಚ್ ಪ್ರವಾಸೋದ್ಯಮ ಹಾಗೂ ವಿಶ್ವದರ್ಜೆಯ ಪ್ರವಾಸಿ ಸೌಲಭ್ಯಗಳಿಗೆ ವಿಶೇಷ ಆದ್ಯತೆ ನೀಡಲಾಗುವುದು ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಇಂಧನ ಭವನದಲ್ಲಿ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಚಿವರು, ರಾಜ್ಯದ ಪ್ರವಾಸೋದ್ಯಮವನ್ನು ಅಂತರರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ಯುವ ಕಾರ್ಯತಂತ್ರಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಕರಾವಳಿ ಹಾಗೂ ಮಲೆನಾಡು ವ್ಯಾಪ್ತಿಯ ಆರು ಜಿಲ್ಲೆಗಳ ಪ್ರವಾಸೋದ್ಯಮ ಸಾಮರ್ಥ್ಯವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ರೂಪಿಸಲಾಗುತ್ತಿರುವ ಹೊಸ ನೀತಿಯಲ್ಲಿ ವಿಷಯಾಧಾರಿತ ಪ್ರವಾಸೋದ್ಯಮ ಸರ್ಕೀಟ್‌ಗಳು, ಕಡಲತೀರ



ಪ್ರವಾಸೋದ್ಯಮ, ಕ್ರೂಸ್ ಪ್ರವಾಸೋದ್ಯಮ, ಸಾಹಸ ಕ್ರೀಡೆಗಳು ಹಾಗೂ ಸ್ಥಳೀಯ ಆರ್ಥಿಕತೆಗೆ ಉತ್ತೇಜನ ನೀಡುವ ಯೋಜನೆಗಳಿಗೆ ಆದ್ಯತೆ ನೀಡುವಂತೆ ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಅಂತರರಾಷ್ಟ್ರೀಯ ಕ್ರೂಸ್ ಹಡಗುಗಳು ಮಂಗಳೂರು ಸೇರಿದಂತೆ ರಾಜ್ಯದ ವಿವಿಧ ಬಂದರುಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಸಮಗ್ರ ಕಾರ್ಯತಂತ್ರ ರೂಪಿಸಬೇಕು. ಕ್ರೂಸ್ ಪ್ರವಾಸಿಗರು ಕರ್ನಾಟಕದಲ್ಲಿ ಹೆಚ್ಚು ದಿನಗಳ ಕಾಲ ತಂಗುವಂತೆ ವಿಶೇಷ ಪ್ರವಾಸೋದ್ಯಮ ಪ್ಯಾಕೇಜ್‌ಗಳು ಹಾಗೂ ಆಕರ್ಷಕ ಪ್ರವಾಸೋದ್ಯಮ ಸರ್ಕೀಟ್‌ಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಅವರು ತಿಳಿಸಿದರು.

ಪ್ರಮುಖ ಕ್ರೂಸ್ ಆಪರೇಟರ್‌ಗಳೊಂದಿಗೆ ಸಭೆ ನಡೆಸಿ, ಅವರ ಹಾಗೂ ವಿದೇಶಿ ಪ್ರವಾಸಿಗರ ನಿರೀಕ್ಷೆಗಳನ್ನು ಆಧರಿಸಿ ಹೊಸ ನೀತಿಯಲ್ಲಿ ಅಗತ್ಯ ಬದಲಾವಣೆಗಳನ್ನು ಅಳವಡಿಸಿಕೊಳ್ಳುವಂತೆ ಸಚಿವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೀಚ್ ಪ್ರವಾಸೋದ್ಯಮವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಬ್ಲೂ ಫ್ಲಾಗ್ ಬೀಚ್‌ಗಳ ಅಭಿವೃದ್ಧಿ, ಸ್ವಚ್ಛತೆ, ಸುರಕ್ಷತೆ, ಪ್ರವಾಸಿಗರಿಗೆ ಅಗತ್ಯ ಮೂಲಸೌಕರ್ಯ, ಜಲಕ್ರೀಡೆಗಳು, ಸಾಹಸ ಚಟುವಟಿಕೆಗಳು ಹಾಗೂ ಸಮುದ್ರತೀರದಲ್ಲಿ ಗುಣಮಟ್ಟದ ಪ್ರವಾಸಿ ಅನುಭವ ಕಲ್ಪಿಸುವ ಯೋಜನೆಗಳನ್ನು ಹೊಸ ನೀತಿಯಲ್ಲಿ ಸೇರಿಸಬೇಕು ಎಂದು ಅವರು ಸೂಚಿಸಿದರು.

ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಹಾಗೂ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ವ್ಯಾಪ್ತಿಯ ಪ್ರವಾಸಿ ತಾಣಗಳಲ್ಲಿ ಗುಣಮಟ್ಟದ ವಸತಿ, ಮೂಲಭೂತ ಸೌಲಭ್ಯ, ಸ್ವಚ್ಛತೆ, ಮಾಹಿತಿ ವ್ಯವಸ್ಥೆ ಹಾಗೂ ಪ್ರವಾಸಿಗರಿಗೆ ಅಗತ್ಯ ಸೇವೆಗಳನ್ನು ಮತ್ತಷ್ಟು ವಿಸ್ತರಿಸುವ ಮೂಲಕ ಪ್ರವಾಸಿಗರ ಅನುಭವವನ್ನು ಉತ್ತಮಗೊಳಿಸಬೇಕು ಎಂದು ಸಚಿವರು ಹೇಳಿದರು.

"ಪ್ರವಾಸೋದ್ಯಮ ಎಂದರೆ ಕೇವಲ ಪ್ರವಾಸಿ ತಾಣಗಳ ಅಭಿವೃದ್ಧಿಯಲ್ಲ. ಪ್ರವಾಸಿಗರಿಗೆ ವಿಶ್ವದರ್ಜೆಯ ಅನುಭವವನ್ನು ನೀಡುವ ಸಮಗ್ರ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವುದು. ಉತ್ತಮ ಮೂಲಸೌಕರ್ಯ, ಸುಲಭ ಸಂಪರ್ಕ, ಸುರಕ್ಷತೆ ಹಾಗೂ ಗುಣಮಟ್ಟದ ಸೇವೆಗಳ ಮೂಲಕ ಕರ್ನಾಟಕವನ್ನು ಜಾಗತಿಕ ಪ್ರವಾಸೋದ್ಯಮ ನಕ್ಷೆಯಲ್ಲಿ ಉನ್ನತ ಸ್ಥಾನಕ್ಕೆ ಕೊಂಡೊಯ್ಯಬಹುದು" ಎಂದು ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ಸಭೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ತ್ರಿಲೋಕ್ ಚಂದ್ರ, ಪ್ರವಾಸೋದ್ಯಮ ಇಲಾಖೆಯ ಆಯುಕ್ತ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಹಾಗೂ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಮತ್ತು ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್‌ನ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾಧ್ಯಮದವರು ಸಾಮಾಜಿಕ ಪ್ರಜ್ಞೆ ಹೊಂದಿರಲಿ: ಶೈಲಜಾ ಸೋಮಣ್ಣ

ಬೆಂಗಳೂರು

ಕರ್ನಾಟಕದಲ್ಲಿ ಅಭಿವೃದ್ಧಿ ಪರವಾದ ಹೆಚ್ಚು ಹೆಚ್ಚು ಸುದ್ದಿಗಳು ಪ್ರಕಟವಾಗಬೇಕು. ಜನ ಸಾಮಾನ್ಯರು ಜೀವನಾವಶ್ಯಕ ಮತ್ತು ದೈನಂದಿನ ಬದುಕಿನಲ್ಲಿ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ನಾಗರಿಕರ ಸಮಸ್ಯೆಗಳ ಮೇಲೆ ನಿಗಾ ವಹಿಸಿ ಸುದ್ದಿಗಳನ್ನು ಪ್ರಕಟಿಸುವ ಮೂಲಕ ಆಳುವ ಸರ್ಕಾರಗಳ ಕಣ್ಣು ತೆರೆಸಬೇಕೆಂದು ಶ್ರೀಮತಿ ಶೈಲಜಾ ಸೋಮಣ್ಣ ಅವರು ಹೇಳಿದರು.



ಭಾರತ ಚುನಾವಣಾ ಆಯೋಗವು ರಾಜ್ಯದಲ್ಲಿ ಹಮ್ಮಿಕೊಂಡಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ತಮ್ಮ ಪತಿ, ಕೇಂದ್ರ ಸಚಿವರಾದ ವಿ.ಸೋಮಣ್ಣ ಅವರೊಡಗೂಡಿ ಬಿಎಲ್‌ಓ ಗಳಿಗೆ ಅಗತ್ಯ ದಾಖಲೆಗಳನ್ನು ಒದಗಿಸಿ ಸಹಕರಿಸಿದ ಬಳಿಕ ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಬೆಂಗಳೂರು ನಗರದಲ್ಲಿ ಸಾಕಷ್ಟು ನಾಗರಿಕ ಸಮಸ್ಯೆಗಳಿವೆ. ಬಹುಮುಖ್ಯವಾಗಿ ರಸ್ತೆಗಳು ಗುಂಡಿ ಬಿದ್ದು ಹೋಗಿವೆ. ಎಲ್ಲಿ ನೋಡಿದರೂ ತ್ಯಾಜ್ಯವೇ ತುಂಬಿಕೊಂಡಿದೆ.

ರಸ್ತೆಗಳಲ್ಲಿ ಸಂಚರಿಸುವಾಗ ಸ್ವಚ್ಛತೆ ಎನ್ನುವುದು ಮರೀಚಿಕೆಯಾಗಿದೆ. ಸೇತುವೆಗಳಲ್ಲಿ ಮಳೆ ಬಂದರೆ ನೀರು ಸಂಗ್ರಹಗೊಂಡು ಜನಸಂಚಾರಕ್ಕೆ ಹೆಚ್ಚಿನ ತೊಂದರೆ ಆಗುತ್ತಿದೆ. ಇದೇ ರೀತಿ ರಾಜ್ಯದಾದ್ಯಂತ ಹಲವು ಸಮಸ್ಯೆಗಳಿವೆ. ಮಾಧ್ಯಮದವರು ಇಂತಹ ಸಮಸ್ಯೆಗಳ ಬಗ್ಗೆ ಹೆಚ್ಚು ಒತ್ತು ನೀಡಿ ಜನ ಸಾಮಾನ್ಯರ ನೆರವಿಗೆ ಬರಬೇಕು. ಆ ಮೂಲಕ ಸರ್ಕಾರಕ್ಕೆ ಜಾಗೃತಿ ಮೂಡಿಸಬೇಕೆಂದರು.

ಮಾಧ್ಯಮಗಳು ತೀರಾ ಇತ್ತೀಚೆಗೆ ಟಿ.ಆರ್.ಪಿ.ಗಾಗಿ ಕೇವಲ ರಾಜಕೀಯ ವಿಷಯಗಳನ್ನೇ ಹೆಚ್ಚು ಹೆಚ್ಚು ಬಿತ್ತರಿಸುತ್ತಿವೆ. ವಿವಾದಾತ್ಮಕ ಹೇಳಿಕೆಗಳನ್ನು ನೀಡುವ ರಾಜಕಾರಣಿಗಳನ್ನೇ ಪದೇ ಪದೇ ವೈಭವೀಕರಿಸಲಾಗುತ್ತಿದೆ. ಇಂತಹ ಸುದ್ದಿಗಳಿಂದ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯವಿಲ್ಲ. ಮಾಧ್ಯಮಗಳು ಟಿ.ಆರ್.ಪಿ.ಗೋಸ್ಕರ ತಮ್ಮ ಗುರುತರ ಜವಾಬ್ದಾರಿಯ ಹೊಣೆಗಾರಿಕೆಯಿಂದ ನುಣುಚಿಕೊಳ್ಳಬಾರದು. ಜನಸಾಮಾನ್ಯರು ಮತ್ತು ನಾಗರಿಕರಿಗೆ ಸಹ್ಯವಾಗುವ ರೀತಿಯಲ್ಲಿ ಸುದ್ದಿಗಳನ್ನು ಬಿತ್ತರಿಸಬೇಕು. ಸಮಾಜದಲ್ಲಿ ಸ್ವಾಸ್ಥ್ಯ ಕಾಪಾಡುವುದು ಸುದ್ದಿ ಮಾಧ್ಯಮದವರ ಜವಾಬ್ದಾರಿಯೂ ಅಡಗಿದೆ

# ಒತ್ತುವರಿ ತೆರವು: 14.10 ಕಿ.ಮೀ. ಪಾದಚಾರಿ ಮಾರ್ಗ ಅತಿಕ್ರಮಣ ಮುಕ್ತ

ಬೆಂಗಳೂರು

ಪಾದಚಾರಿಗಳ ಸುರಕ್ಷತೆಗೆ ಆದ್ಯತೆ ನೀಡಿ, ಪಾದಚಾರಿ ಸ್ನೇಹಿ ನಗರ ನಿರ್ಮಾಣದ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೂರನೇ ದಿನವೂ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದ್ದು, ಒಟ್ಟು 14.10 ಕಿಲೋಮೀಟರ್ ಉದ್ದದ ಪಾದಚಾರಿ ಮಾರ್ಗವನ್ನು ಅತಿಕ್ರಮಣದಿಂದ ಮುಕ್ತಗೊಳಿಸಲಾಗಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನ ಹಾಗೂ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ, ಉಚ್ಚ ನ್ಯಾಯಾಲಯದ ಆದೇಶದಂತೆ ಈ ಕಾರ್ಯಾಚರಣೆ ನಡೆಸಲಾಯಿತು.

ಕಾರ್ಯಾಚರಣೆಯಲ್ಲಿ 7 ಜೆಸಿಬಿ, 35 ಟ್ರಾಕ್ಟರ್‌ಗಳು, 3 ಇತರೆ ಯಂತ್ರಗಳು ಹಾಗೂ 168 ಕಾರ್ಮಿಕರನ್ನು ನಿಯೋಜಿಸಲಾಗಿತ್ತು. ಈ ವೇಳೆ 33 ಅಂಗಡಿಗಳು ಮತ್ತು ಬೀದಿ ವ್ಯಾಪಾರಿಗಳ ಅತಿಕ್ರಮಣ, 52 ತಳ್ಳುವ ಗಾಡಿಗಳು, 121 ಶೀಟ್‌ಗಳು ಹಾಗೂ ಕೆನೋಪಿಗಳು, 109 ಮೆಟ್ಟಿಲು ಮತ್ತು ರ್‍ಯಾಂಪ್‌ಗಳು, 141 ಜಾಹೀರಾತು ಫಲಕಗಳು, 2 ತಾತ್ಕಾಲಿಕ ಶೆಡ್‌ಗಳು ಹಾಗೂ 46.50 ಟನ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ಬ್ಯಾಟರಾಯನಪುರ ವಿಭಾಗದಲ್ಲಿ ಸಹಕಾರನಗರ 60 ಅಡಿ ರಸ್ತೆ, ಶ್ರೀರಾಂಪುರ ರೈಲ್ವೆ ಅಂಡರ್‌ಪಾಸ್‌ನಿಂದ ಥಣಿಸಂದ್ರ ಮುಖ್ಯರಸ್ತೆ ಹಾಗೂ ಅಗ್ರಹಾರ ಮುಖ್ಯರಸ್ತೆ ವ್ಯಾಪ್ತಿಯ 1.80 ಕಿಲೋಮೀಟರ್ ಪಾದಚಾರಿ ಮಾರ್ಗವನ್ನು ಅತಿಕ್ರಮಣದಿಂದ ಮುಕ್ತಗೊಳಿಸಲಾಯಿತು. 8 ಅಂಗಡಿಗಳು, 11 ತಳ್ಳುವ ಗಾಡಿಗಳು, 6 ಕೆನೋಪಿಗಳು, 9 ಮೆಟ್ಟಿಲುಗಳು, 26 ಜಾಹೀರಾತು ಫಲಕಗಳು ಹಾಗೂ 3.5 ಟನ್ ತ್ಯಾಜ್ಯ ತೆರವುಗೊಳಿಸಲಾಯಿತು.

ವಿದ್ಯಾರಣ್ಯಪುರ ವಿಭಾಗದಲ್ಲಿ ಎಂ.ಎಸ್. ಪಾಳ್ಯ



ವೃತ್ತದಿಂದ ಸಿಂಗಾಪುರ ಬಸ್ ನಿಲ್ದಾಣದವರೆಗೆ 2.30 ಕಿಲೋಮೀಟರ್ ಪಾದಚಾರಿ ಮಾರ್ಗವನ್ನು ತೆರವುಗೊಳಿಸಿ, 9 ಅಂಗಡಿಗಳು, 8 ತಳ್ಳುವ ಗಾಡಿಗಳು, 30 ಕೆನೋಪಿಗಳು, 20 ಮೆಟ್ಟಿಲುಗಳು, 18 ಜಾಹೀರಾತು ಫಲಕಗಳು ಹಾಗೂ 12 ಟನ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ಪುಲಿಕೇಶಿನಗರ ವಿಭಾಗದಲ್ಲಿ ದಿನ್ನೂರು ಮುಖ್ಯರಸ್ತೆಯ 0.30 ಕಿಲೋಮೀಟರ್ ವ್ಯಾಪ್ತಿಯಲ್ಲಿ 2 ಅಂಗಡಿಗಳು, 10 ತಳ್ಳುವ ಗಾಡಿಗಳು, ಕೆನೋಪಿ, ಮೆಟ್ಟಿಲುಗಳು ಹಾಗೂ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ಸರ್ವಜ್ಞನಗರ ವಿಭಾಗದಲ್ಲಿ ಆಯಿಲ್ ಮಿಲ್ ರಸ್ತೆಯ 1 ಕಿಲೋಮೀಟರ್ ಪಾದಚಾರಿ ಮಾರ್ಗವನ್ನು ಅತಿಕ್ರಮಣದಿಂದ ಮುಕ್ತಗೊಳಿಸಿ, 1 ಅಂಗಡಿ, 12 ತಳ್ಳುವ ಗಾಡಿಗಳು, 38 ಕೆನೋಪಿಗಳು, 42 ಮೆಟ್ಟಿಲುಗಳು, 18 ಜಾಹೀರಾತು ಫಲಕಗಳು ಹಾಗೂ 3 ಟನ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ಯಲಹಂಕ ವಿಭಾಗದಲ್ಲಿ ಸಂದೀಪ್ ಉನ್ನಿಕೃಷ್ಣನ್ ರಸ್ತೆಯ 3 ಕಿಲೋಮೀಟರ್ ಪಾದಚಾರಿ ಮಾರ್ಗದಲ್ಲಿ ಅತಿಕ್ರಮಣ ತೆರವುಗೊಳಿಸಲಾಯಿತು. ಈ ವೇಳೆ 2 ಬೀದಿ ವ್ಯಾಪಾರಿಗಳು, 10 ಕೆನೋಪಿಗಳು, 10 ಮೆಟ್ಟಿಲುಗಳು, 8 ಜಾಹೀರಾತು ಫಲಕಗಳು ಹಾಗೂ 3 ಟನ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ಹೆಬ್ಬಾಳ ವಿಭಾಗದಲ್ಲಿ ಸಿ.ಬಿ.ಐ ರಸ್ತೆಯ 1.20 ಕಿಲೋಮೀಟರ್ ವ್ಯಾಪ್ತಿಯಲ್ಲಿ 4 ಬೀದಿ ವ್ಯಾಪಾರಿಗಳು, 8 ತಳ್ಳುವ ಗಾಡಿಗಳು, 12 ಕೆನೋಪಿಗಳು, 6 ಮೆಟ್ಟಿಲುಗಳು, 18 ಜಾಹೀರಾತು ಫಲಕಗಳು ಹಾಗೂ 14 ಟನ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ನಗರದ ಪ್ರಮುಖ ರಸ್ತೆಗಳಲ್ಲಿ ಪಾದಚಾರಿಗಳಿಗೆ ಸುರಕ್ಷಿತ ಹಾಗೂ ಅಡೆತಡೆಯಿಲ್ಲದ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಮುಂದಿನ ದಿನಗಳಲ್ಲಿಯೂ ಒತ್ತುವರಿ ತೆರವು ಕಾರ್ಯಾಚರಣೆ ನಿರಂತರವಾಗಿ ಮುಂದುವರಿಯಲಿದೆ ಎಂದು ಪಾಲಿಕೆ ಅಧಿಕಾರಿಗಳು

# ವಾಹನಗಳ ಸಂಚಾರ ಮಾರ್ಗ ಬದಲಾಯಿಸಿ ಆದೇಶ

ತುಮಕೂರು

ತಿಪಟೂರು ನಗರದ ಕೋಡಿ ಸರ್ಕಲ್ ಬಳಿ ಸೇತುವೆ ನಿರ್ಮಾಣ ಕಾಮಗಾರಿ ಹಾಗೂ ಸರ್ಕಲ್ ಅಭಿವೃದ್ಧಿ ಕಾಮಗಾರಿ ಕೈಗೊಂಡಿರುವ ಹಿನ್ನೆಲೆಯಲ್ಲಿ 2026ರ ಅಕ್ಟೋಬರ್ 31ರವರೆಗೆ ವಾಹನಗಳ ಸಂಚಾರ ಮಾರ್ಗವನ್ನು ಬದಲಾಯಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಅವರು ಆದೇಶಿಸಿದ್ದಾರೆ.

ಈ ಆದೇಶದನ್ವಯ ತಿಪಟೂರು ನಗರ ಮತ್ತು ಹಾಸನ ಕಡೆಯಿಂದ ತುಮಕೂರು ಕಡೆ ಹೋಗುವ ಭಾರಿ ವಾಹನಗಳು ಹಾಗೂ ಕೆ.ಎಸ್.ಆರ್.ಟಿ.ಸಿ. ಬಸ್‌ಗಳು ಅಂಬೇಡ್ಕರ್ ವೃತ್ತದಿಂದ(ಐ.ಬಿ.ಸರ್ಕಲ್) ಹುಳಿಯಾರು ರಸ್ತೆ ಮೂಲಕ ಮಂಜುನಾಥನಗರದ ಬಳಿಯ ಬೈಪಾಸ್ ರಸ್ತೆಯಲ್ಲಿ ಹೋಗಿ ರಾಷ್ಟ್ರೀಯ ಹೆದ್ದಾರಿಯ ಮೂಲಕ ತುಮಕೂರಿಗೆ ಹೋಗತಕ್ಕದ್ದು.

ಕೆ.ಎಸ್.ಆರ್.ಟಿ.ಸಿ. ಬಸ್‌ಗಳು ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಿಂದ ಅಂಬೇಡ್ಕರ್ ವೃತ್ತ– ಹುಳಿಯಾರು ರಸ್ತೆ ಮೂಲಕ ಮಂಜುನಾಥನಗರದ ಬಳಿಯ ಬೈಪಾಸ್ ರಸ್ತೆಯಲ್ಲಿ ಹೋಗಿ ರಾಷ್ಟ್ರೀಯ ಹೆದ್ದಾರಿಯ ಮೂಲಕ ತುಮಕೂರಿಗೆ ಹೋಗತಕ್ಕದ್ದು.

ತುರುವೇಕೆರೆ ಮತ್ತು ಚೆನ್ನರಾಯಪಟ್ಟಣ ಕಡೆಯಿಂದ ತುಮಕೂರು ಕಡೆ ಹೋಗುವ ಭಾರಿ ವಾಹನಗಳನ್ನು ಕೋಡಿ ಸರ್ಕಲ್‌ನಿಂದ ಅಂಬೇಡ್ಕರ್ ವೃತ್ತದ ಮೂಲಕ ಹುಳಿಯಾರು ರಸ್ತೆಗೆ ಹೋಗಿ ಮಂಜುನಾಥ ನಗರದ ಬಳಿಯ ಬೈಪಾಸ್ ರಸ್ತೆ ಮೂಲಕ ರಾಷ್ಟ್ರೀಯ ಹೆದ್ದಾರಿಯಿಂದ ತುಮಕೂರಿಗೆ ತೆರಳತಕ್ಕದ್ದು.

ತಿಪಟೂರು ನಗರ, ಹಾಸನ ಮತ್ತು ತುರುವೇಕೆರೆ ಕಡೆ ಹೋಗುವ ಭಾರಿ ವಾಹನಗಳು ಕೊಲ್ವಾರಿ ಚರ್ಚ್ ಬಳಿಯ ರಾಷ್ಟ್ರೀಯ ಹೆದ್ದಾರಿ ಮತ್ತು ಕಲ್ಲೇಗೌಡನಪಾಳ್ಯ ಬೈಪಾಸ್ ರಸ್ತೆಯ ಮೂಲಕ ಹುಳಿಯಾರು ರಸ್ತೆಗೆ ಬಂದು ಮಂಜುನಾಥ ನಗರದ ಮೂಲಕ ಅಂಬೇಡ್ಕರ್ ವೃತ್ತಕ್ಕೆ ಬಂದು ಹೋಗಬೇಕಾಗಿದೆ.

# ರಾಜ್ಯ ಪಂಚಾಯಿತಿಗಳಿಗೆ 2,186 ಕೋಟಿ ರೂ. ಬಿಡುಗಡೆಗೆ ಒತ್ತಾಯ

ನವದೆಹಲಿ

15ನೇ ಹಣಕಾಸು ಆಯೋಗದ ಶಿಫಾರಸಿನಂತೆ 2025–26ನೇ ಸಾಲಿಗೆ ಕರ್ನಾಟಕದ ಗ್ರಾಮ ಪಂಚಾಯಿತಿಗಳಿಗೆ ಬಾಕಿ ಇರುವ ರೂ.2,186.20 ಕೋಟಿ ಅನುದಾನವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ನವದೆಹಲಿದಲ್ಲಿ ಕೇಂದ್ರ ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪಂಚಾಯತ್ ರಾಜ್ ಸಚಿವರ ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಅವರು ಈ ಬೇಡಿಕೆ ಮಂಡಿಸಿದರು.

ಸಭೆಯಲ್ಲಿ 16ನೇ ಹಣಕಾಸು ಆಯೋಗದ




ಶಿಫಾರಸುಗಳು, ಕಾರ್ಯಾಚರಣೆ ಮಾರ್ಗಸೂಚಿಗಳು, ಅನುದಾನ ಬಿಡುಗಡೆ ಪ್ರಕ್ರಿಯೆ, ಅನುಸರಣೆ ಷರತ್ತುಗಳು ಹಾಗೂ ಪ್ರಮುಖ ಸವಾಲುಗಳ ಕುರಿತು ಚರ್ಚೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಸಚಿವ ಖಂಡ್ರೆ, 15ನೇ ಹಣಕಾಸು ಆಯೋಗಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಕೇಳಿದ್ದ ಎಲ್ಲ ಮಾಹಿತಿಗಳಿಗೆ ಕರ್ನಾಟಕ ಸರ್ಕಾರ ಸಮಯಕ್ಕೆ ಸರಿಯಾಗಿ ಪ್ರತಿಕ್ರಿಯೆ ನೀಡಿದ್ದು, ಅಗತ್ಯ ಅನುಸರಣೆ ಕ್ರಮಗಳನ್ನೂ ಪೂರ್ಣಗೊಳಿಸಿದೆ. ಆದರೂ 2025–26ನೇ ಸಾಲಿನ ಅನುದಾನ ಇನ್ನೂ ಬಿಡುಗಡೆಯಾಗಿಲ್ಲ ಎಂದು ಹೇಳಿದರು.

15ನೇ ಹಣಕಾಸು ಆಯೋಗದಡಿ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಒಟ್ಟು ರೂ.13,392 ಕೋಟಿ ಹಂಚಿಕೆಯಾಗಿದ್ದು, 2021–22ರಿಂದ 2025–26ರವರೆಗೆ ರೂ.11,068 ಕೋಟಿ ಮಾತ್ರ ಬಿಡುಗಡೆಯಾಗಿದೆ. ಉಳಿದಿರುವ ರೂ.2,186.20 ಕೋಟಿ ತಕ್ಷಣ ಬಿಡುಗಡೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಅನುದಾನಕ್ಕೆ ಸಂಬಂಧಿಸಿದ ಎಲ್ಲ ಷರತ್ತುಗಳನ್ನು ಕರ್ನಾಟಕ ಸರ್ಕಾರ ಪಾಲಿಸಿದೆ.

2024–25ನೇ ಸಾಲಿನ ಅನುದಾನ ವರ್ಗಾವಣೆ ಪ್ರಮಾಣಪತ್ರಗಳನ್ನು ಕೇಂದ್ರಕ್ಕೆ ಸಲ್ಲಿಸಲಾಗಿದೆ. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳು ಗ್ರಾಮ ಪಂಚಾಯಿತಿ ಅಭಿವೃದ್ಧಿ ಯೋಜನೆಗಳನ್ನು (ಜಿಪಿಡಿಪಿ) ನಿಗದಿತ ಅವಧಿಯೊಳಗೆ ಅಪ್‌ಲೋಡ್ ಮಾಡಿವೆ ಎಂದು ಸಚಿವರು ಸಭೆಯ ಗಮನಕ್ಕೆ ತಂದರು.

ಈ ವರ್ಷ ಎಲ್ ನಿನೋ ಪರಿಣಾಮದಿಂದ ರಾಜ್ಯದಲ್ಲಿ ಮಳೆಯ ಕೊರತೆ ಉಂಟಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಗಳಿಗೆ ಸಕಾಲದಲ್ಲಿ ಅನುದಾನ ಬಿಡುಗಡೆಯಾಗದಿದ್ದರೆ ಕುಡಿಯುವ ನೀರು ಸೇರಿದಂತೆ ಅಭಿವೃದ್ಧಿ ಕಾಮಗಾರಿಗಳಿಗೆ ತೊಂದರೆಯಾಗಲಿದೆ ಎಂದು ಅವರು ಹೇಳಿದರು.

16ನೇ ಹಣಕಾಸು ಆಯೋಗದ ಶಿಫಾರಸಿನಂತೆ ಮುಂದಿನ ಐದು ವರ್ಷಗಳ ಅವಧಿಗೆ ಕರ್ನಾಟಕದ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ರೂ.18,889 ಕೋಟಿ ಅನುದಾನ ಶಿಫಾರಸು ಮಾಡಲಾಗಿದೆ.

ಇದರಲ್ಲಿ ರೂ.15,111 ಕೋಟಿ ಮೂಲ ಅನುದಾನ ಹಾಗೂ ರೂ.3,778 ಕೋಟಿ ಕಾರ್ಯಸಾಮರ್ಥ್ಯ ಆಧಾರಿತ ಅನುದಾನ ಒಳಗೊಂಡಿದೆ ಎಂದು ಸಚಿವರು ತಿಳಿಸಿದರು.

05/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ವಿದ್ಯುತ್ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ: ಸುನಿಲ್

ಮುಳಬಾಗಿಲು

ವಿದ್ಯುತ್‌ನ್ನು ಮಿತವಾಗಿ ಬಳಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ವಿದ್ಯುತ್ ವ್ಯರ್ಥವಾದರೆ ಮುಂದಿನ ದಿನಗಳಲ್ಲಿ ಗಂಭೀರ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂದು ಕೆಪಿಟಿಸಿಎಲ್ ಹಾಗೂ ಬೆಸ್ಕಾಂ ನೌಕರರ ಸಂಘದ ಅಧ್ಯಕ್ಷ ಸುನಿಲ್ ಹೇಳಿದರು.

ನಗರದ ಬೆಸ್ಕಾಂ ಕಚೇರಿ ಆವರಣದಲ್ಲಿ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹ ಅಂಗವಾಗಿ ಆಯೋಜಿಸಿದ್ದ ವಿದ್ಯುತ್ ಸುರಕ್ಷತಾ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.




ವಿದ್ಯುತ್ ಬಳಕೆಯಲ್ಲಿ ಮಿತವ್ಯಯದ ಜೊತೆಗೆ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಪ್ರತಿಯೊಂದು ಮನೆಯಲ್ಲೂ ಸಮರ್ಪಕ ಗ್ರೌಂಡಿಂಗ್ ವ್ಯವಸ್ಥೆ ಇರಬೇಕು. ಹಳೆಯ ವಿದ್ಯುತ್ ಸಂಪರ್ಕಗಳ ಗ್ರೌಂಡಿಂಗ್ ವ್ಯವಸ್ಥೆಯನ್ನು ನಿಯಮಿತವಾಗಿ ಪರಿಶೀಲಿಸಬೇಕು. ದೋಷಪೂರಿತ ವಿದ್ಯುತ್ ಉಪಕರಣಗಳನ್ನು ನುರಿತ ಎಲೆಕ್ಟ್ರಿಷಿಯನ್ ಮೂಲಕವೇ ದುರಸ್ತಿ ಮಾಡಿಸಬೇಕು ಹಾಗೂ ಮನೆ ವೈರಿಂಗ್ ಕಾಮಗಾರಿಯನ್ನು ಸರ್ಕಾರದಿಂದ ಪರವಾನಗಿ ಪಡೆದ ಗುತ್ತಿಗೆದಾರರಿಂದ ಮಾತ್ರ ಮಾಡಿಸಬೇಕು ಎಂದು ಸಲಹೆ ನೀಡಿದರು.

ಹಬ್ಬ-ಜಾತ್ರೆಗಳ ಸಂದರ್ಭದಲ್ಲಿ ವಿದ್ಯುತ್ ಅಲಂಕಾರ ದೀಪಗಳನ್ನು ಅಳವಡಿಸಲು ಬೆಸ್ಕಾಂನಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಮನೆಯ ಸಮೀಪ ವಿದ್ಯುತ್ ತಂತಿಗಳು ಹಾದುಹೋಗಿದ್ದರೆ ಹೆಚ್ಚಿನ ಎಚ್ಚರಿಕೆ ವಹಿಸಬೇಕು. ತುಂಡಾಗಿ ಬಿದ್ದ ವಿದ್ಯುತ್ ತಂತಿಗಳು ಅಥವಾ ಟ್ರಾನ್ಸ್‌ಫಾರ್ಮರ್ ಬೇಲಿಯನ್ನು ಯಾರೂ ಮುಟ್ಟಬಾರದು. ವಿದ್ಯುತ್ ಕಂಬಗಳಿಗೆ ಬ್ಯಾನರ್ ಅಥವಾ ಜಾಹೀರಾತು ಫಲಕಗಳನ್ನು ಕಟ್ಟಬಾರದು. ವಿದ್ಯುತ್ ತಂತಿಗಳಿಗೆ ಮರದ ಕೊಂಬೆಗಳು ತಾಗಿದ್ದರೆ ತಕ್ಷಣ ಇಲಾಖೆಗೆ ಮಾಹಿತಿ ನೀಡಬೇಕು. ಸಾರ್ವಜನಿಕರು ಸ್ವತಃ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ತಿಳಿಸಿದರು.

ಹೊಸದಾಗಿ ಕಟ್ಟಡ ನಿರ್ಮಿಸುವವರು ವಿದ್ಯುತ್ ತಂತಿಗಳಿಂದ ಸುರಕ್ಷಿತ ಅಂತರ ಕಾಯ್ದುಕೊಳ್ಳಬೇಕು. ವಿದ್ಯುತ್ ಕಂಬಗಳಿಗೆ ಹಗ್ಗ ಅಥವಾ ತಂತಿ ಕಟ್ಟಿ ಬಟ್ಟೆ ಒಣಗಿಸುವ ಅಭ್ಯಾಸ ಅಪಾಯಕಾರಿಯಾಗಿದ್ದು, ಇಂತಹ ಕೃತ್ಯಗಳಿಂದ ದೂರವಿರಬೇಕು ಎಂದು ಅವರು ಎಚ್ಚರಿಸಿದರು.

ಬಳಿಕ ಬೆಸ್ಕಾಂ ಕಚೇರಿಯಿಂದ ಡಿವಿಜಿ ವೃತ್ತ, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ವಿದ್ಯುತ್ ಸುರಕ್ಷತೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಜಾಥಾ ನಡೆಸಲಾಯಿತು.

ಈ ಸಂದರ್ಭದಲ್ಲಿ ಬೆಸ್ಕಾಂ ಕೇಂದ್ರೀಯ ಕಾರ್ಯ ಸಮಿತಿ ಸದಸ್ಯ ರಾಮಚಂದ್ರಪ್ಪ, ಎಸ್‌ಟಿ/ಎಸ್‌ಸಿ ನೌಕರರ ಸಂಘದ ಅಧ್ಯಕ್ಷ ಬಿ.ಎಂ. ನಾರಾಯಣಸ್ವಾಮಿ, ಸಹಾಯಕ ಇಂಜಿನಿಯರ್‌ಗಳಾದ ಶ್ರೀನಾಥ್, ಪ್ರಭಾಕರ್ ರೆಡ್ಡಿ, ರಾಜಕುಮಾರ್, ಸಂತೋಷ್, ಪೀಟರ್, ಭಾಸ್ಕರ್, ವೆಂಕಟೇಶಪ್ಪ, ರವಿ ಹಾಗೂ ಸಿಬ್ಬಂದಿಗಳಾದ ಹರ್ಷ, ಮುನಿರಾಜು, ರಮೇಶ್, ಮಂಜುನಾಥ್, ಶ್ರೀನಿವಾಸ್, ಕೆ.ಪಿ. ಗೌಡ ಸೇರಿದಂತೆ ಹಲವರು ಭಾಗವಹಿಸಿದ್ದರು.

# 'ಸಾಮಾನ್ಯ ವ್ಯಕ್ತಿಯನ್ನು, ಮನುಷ್ಯನನ್ನಾಗಿ ಮಾಡುವ ಶಕ್ತಿ, ಅಕ್ಷರಕ್ಕಿದೆ'

ವಿಜಯಪುರ

ಪಟ್ಟಣದ ಸರಕಾರಿ ಮಾದರಿ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ, ಎಲ್.ಕೆ.ಜಿ, ಯುಕೆಜಿ ಮಕ್ಕಳಿಗೆ ಸಾಂಪ್ರದಾಯಿಕವಾಗಿ ಅಕ್ಷರಾಭ್ಯಾಸ ಮಾಡಿಸಲಾಯಿತು.

ಮಕ್ಕಳ ಪೋಷಕರು, ಅಕ್ಕಿ, ಬೆಲ್ಲ, ಬಾಳೇಹಣ್ಣು ತಂದು, ಶಾಲೆಯ ಆವರಣದಲ್ಲಿ, ಪೂಜೆ ಸಲ್ಲಿಸಿದ ನಂತರ ತಮ್ಮ ಮಕ್ಕಳಿಗೆ ಅಕ್ಕಿಯ ಮೇಲೆ ಓಂಕಾರವನ್ನು ಬರೆಯಿಸುವ ಮೂಲಕ ಅಕ್ಷರಾಭ್ಯಾಸ ಮಾಡಿಸಿದರು.

ಮುಖ್ಯಶಿಕ್ಷಕ ಮನೋಹರ್ ಮಾತನಾಡಿ, ಅಕ್ಷರ ಎಂದರೆ ಕೇವಲ 'ಅ, ಆ' ಅಲ್ಲ. ಅದು ಸಾಮಾನ್ಯ ವ್ಯಕ್ತಿಯನ್ನು, ಮನುಷ್ಯನನ್ನಾಗಿ ಮಾಡುವ ಶಕ್ತಿ. ಅಕ್ಷರ ಜ್ಞಾನದ ಬಾಗಿಲು. ಓದು-ಬರಹ ಬಾರದವನಿಗೆ ಜಗತ್ತು ಕತ್ತಲೆ. ಪುಸ್ತಕ, ಪತ್ರಿಕೆ, ಬೋರ್ಡ್ನಲ್ಲಿರುವ ಮಾಹಿತಿ ಅವನಿಗೆ ದಕ್ಕುವುದಿಲ್ಲ. ಅಕ್ಷರ ಬಲ್ಲವನಿಗೆ ಇಡೀ ಜಗತ್ತಿನ ಜ್ಞಾನಭಂಡಾರ ತೆರೆದ ಪುಸ್ತಕದಂತಿದೆ. ಆದ್ದರಿಂದ ಅಕ್ಷರ ಕಲಿಕೆಗೆ ಹೆಚ್ಚು ಮಹತ್ವ ನೀಡಲಾಗುತ್ತಿದೆ. ಪೋಷಕರೂ ಸಹಾ ತಮ್ಮ ಮಕ್ಕಳಿಗೆ ಅಕ್ಷರದ ಜೊತೆಯಲ್ಲಿ, ಉತ್ತಮ ಸಂಸ್ಕಾರವನ್ನು ಕಲಿಸುವುದರ ಜೊತೆಗೆ, ಅವರನ್ನು ಉತ್ತಮ ಪೌರರನ್ನಾಗಿ ಮಾಡುವ ಹೊಣೆಗಾರಿಕೆ ಎಲ್ಲರ ಮೇಲಿದೆ.

ನಮ್ಮ ವೇದ, ಪುರಾಣ, ಕೀರ್ತನೆ, ವಚನಗಳು ಎಲ್ಲವೂ ಅಕ್ಷರ ರೂಪದಲ್ಲಿ ಉಳಿದಿವೆ. ಹಿರಿಯರು ಬರೆದಿಟ್ಟ ಅನುಭವ, ನೀತಿಪಾಠ ಮುಂದಿನ ಪೀಳಿಗೆಗೆ ಸಿಗುವುದು ಅಕ್ಷರದಿಂದಲೇ. ಅಕ್ಷರ ಇಲ್ಲದಿದ್ದರೆ ಸಂಸ್ಕೃತಿ ನಶಿಸಿಹೋಗುತ್ತದೆ ಎಂದರು.

ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷೆ ರಾಧಮ್ಮ, ಸದಸ್ಯರಾದ ಮಮತ, ಸಂಪದ, ಮಾಲ, ಸುಮ್ಮಯ್ಯಾಸುಲ್ತನಾ, ಶಿಕ್ಷಕರಾದ ನಿರ್ಮಲ,ಎಂ.ಸಿ, ನಾಗಮಣಿ.ಕೆ, ದ್ರಾಕ್ಷಾಯಣಿ.ಟಿ, ಸರಸ್ವತಿ.ಜೆ.ಎ, ರಾಜೇಶ್ವರಿ.ಎಂ, ಸೀಮಾ.ಐ, ಮಮತ.ಎನ್, ರೋಹಿಣಿ.ಕೆ, ಶೋಭ.ವಿ, ಮಾಧವಿ.ಎ.ಎನ್, ನೇತ್ರಾವತಿ.ಹೆಚ್.ಎಸ್, ರಾಜೇಶ್ವರಿ.ಹೆಚ್.ವಿ, ಅನ್ನಪೂರ್ಣೇಶ್ವರಿ ಹಳ್ಳಿಕೇರಿಮಠ ಮುಂತಾದವರು ಹಾಜರಿದ್ದರು.


# 'ಸ್ಥಳೀಯರೊಂದಿಗೆ ಸಮಾಲೋಚನೆ ಬಳಿಕವೇ ಒಆರ್‌ಆರ್ ಅಭಿವೃದ್ಧಿ ವಿನ್ಯಾಸ ಅಂತಿಮ'

ಬೆಂಗಳೂರು

ನಗರದ ಪ್ರಮುಖ ಸಂಚಾರ ಮಾರ್ಗಗಳಲ್ಲಿ ಒಂದಾದ ಹೊರ ವರ್ತುಲ ರಸ್ತೆ (ಒಆರ್‌ಆರ್) ಸಮಗ್ರ ಅಭಿವೃದ್ಧಿ ಯೋಜನೆಯ ಅಂತಿಮ ವಿನ್ಯಾಸವನ್ನು ಸ್ಥಳೀಯ ನಾಗರಿಕರು ಹಾಗೂ ಹಿತಾಸಕ್ತಿದಾರರೊಂದಿಗೆ ಸಮಾಲೋಚನೆ ನಡೆಸಿದ ಬಳಿಕವೇ ಅಂತಿಮಗೊಳಿಸಲಾಗುವುದು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಬೈಯ್ಯಪ್ಪನಹಳ್ಳಿ ಮೆಟ್ರೋ ನಿಲ್ದಾಣದವರೆಗೆ ಕೈಗೊಳ್ಳಲಿರುವ ರಸ್ತೆ ಸಮಗ್ರ ಅಭಿವೃದ್ಧಿ ಕಾಮಗಾರಿಯ ಹಿನ್ನೆಲೆಯಲ್ಲಿ ಲೋರಿ ಜಂಕ್ಷನ್‌ನಿಂದ ಇಬ್ಲೂರು ಜಂಕ್ಷನ್‌ವರೆಗೆ ಸ್ಥಳ ಪರಿಶೀಲನೆ ನಡೆಸಿದ ಬಳಿಕ ಅವರು ಮಾಧ್ಯಮದೊಂದಿಗೆ ಮಾತನಾಡಿದರು.

ಹೊರ ವರ್ತುಲ ರಸ್ತೆ ನಗರದ ಅತ್ಯಂತ ಸಂಚಾರ ದಟ್ಟಣೆ ಹೊಂದಿರುವ ರಸ್ತೆಗಳಲ್ಲೊಂದು. ಸುಮಾರು ರೂ.400 ರಿಂದ ರೂ.450 ಕೋಟಿ ವೆಚ್ಚದಲ್ಲಿ ಈ ರಸ್ತೆಯನ್ನು ಪುನರ್‌ನಿರ್ಮಿಸಿ ಆಧುನಿಕ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರ ಯೋಜನೆ ರೂಪಿಸಿದೆ ಎಂದು ತಿಳಿಸಿದರು. ಆದರೆ, ಕಾಮಗಾರಿ ಆರಂಭಿಸುವ ಮೊದಲು ಸಂಚಾರ ದಟ್ಟಣೆ ಸಮಸ್ಯೆಗೆ ಪರಿಣಾಮಕಾರಿ ಪರಿಹಾರ ಕಂಡುಹಿಡಿದು, ಜನರಿಗೆ ಕನಿಷ್ಠ ತೊಂದರೆಯಾಗುವ ರೀತಿಯಲ್ಲಿ ಯೋಜನೆ ರೂಪಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಹೇಳಿದರು.



ಒಆರ್‌ಆರ್ ವ್ಯಾಪ್ತಿಯಲ್ಲಿ ಅಪಾರ್ಟ್‌ಮೆಂಟ್‌ಗಳು, ಮಾಹಿತಿ ತಂತ್ರಜ್ಞಾನ ಕಂಪನಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ವಿವಿಧ ಸೇವಾ ಕೇಂದ್ರಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ, ರಸ್ತೆ ಅಭಿವೃದ್ಧಿ ವಿನ್ಯಾಸವನ್ನು ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ರೂಪಿಸಲಾಗುವುದು. ತಜ್ಞರಿಂದ ಸಿದ್ಧವಾಗುವ ಪ್ರಾಥಮಿಕ ವಿನ್ಯಾಸವನ್ನು ಸಾರ್ವಜನಿಕರ ಮುಂದೆ ಮಂಡಿಸಿ, ಅವರ ಸಲಹೆ-ಅಭಿಪ್ರಾಯಗಳನ್ನು ಪಡೆದು ಅಂತಿಮ ರೂಪ ನೀಡಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದರು.

ಇಂದಿನ ಸ್ಥಳ ಪರಿಶೀಲನೆಯಿಂದ ರಸ್ತೆಯ ಪ್ರಸ್ತುತ ಸ್ಥಿತಿ, ಸಂಚಾರದ ಸವಾಲುಗಳು ಹಾಗೂ ಮೂಲಸೌಕರ್ಯ ಅಗತ್ಯಗಳ ಕುರಿತು ಸಮಗ್ರ ಮಾಹಿತಿ ಲಭ್ಯವಾಗಿದೆ. ಅದರ ಆಧಾರದ ಮೇಲೆ ಅಂತಿಮ ವಿನ್ಯಾಸ ಸಿದ್ಧಪಡಿಸಿ, ಅಗತ್ಯ ಆಡಳಿತಾತ್ಮಕ ಅನುಮೋದನೆಗಳ ಬಳಿಕ ಅಭಿವೃದ್ಧಿ ಕಾಮಗಾರಿಯನ್ನು ಆರಂಭಿಸಲಾಗುವುದು ಎಂದು ಅವರು ತಿಳಿಸಿದರು.

ಪರಿಶೀಲನೆ ವೇಳೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಜಲಮಂಡಳಿ ಅಧ್ಯಕ್ಷೆ ಮಂಜುಳಾ, ವಿಶೇಷ ಆಯುಕ್ತ ನಿತೀಶ್, ನಗರ ಪಾಲಿಕೆ ಆಯುಕ್ತರಾದ ರಮೇಶ್ ಡಿ.ಎಸ್. ಹಾಗೂ ರಮೇಶ್ ಕೆ.ಎನ್., ಸಂಚಾರಿ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ, ಅಪರ ಆಯುಕ್ತೆ ಲೋಖಂಡೆ ಸ್ನೇಹಲ್ ಸುಧಾಕರ್, ಬಿ-ಸ್ಮೈಲ್ ತಾಂತ್ರಿಕ ನಿರ್ದೇಶಕ ಡಾ. ಬಿ.ಎಸ್. ಪ್ರಹ್ಲಾದ್, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಹಿತಾಸಕ್ತಿದಾರರು ಉಪಸ್ಥಿತರಿದ್ದರು.

# ಶಿಥಿಲಾವಸ್ತೆಯಲ್ಲಿರುವ ಹಳೇ ಕಟ್ಟಡಗಳನ್ನು ತೆರವುಗೊಳಿಸುವಂತೆ ಪೋಷಕರ ಒತ್ತಾಯ



ವಿಜಯಪುರ

ಪಟ್ಟಣದ ಸರಕಾರಿ ಶಾಲೆಗಳ ಆವರಣದಲ್ಲಿ, ಶಿಥಿಲವಾಗುವ ಹಂತದಲ್ಲಿರುವ ಹಳೇಯ ಕಟ್ಟಡಗಳನ್ನು ತೆರವುಗೊಳಿಸಲು ಜಿಲ್ಲಾ ಪಂಚಾಯಿತಿಯಿಂದ ಅನುಮತಿ ಕೊಟ್ಟಿದ್ದರೂ, ಶಾಲೆಗಳಲ್ಲಿ ಅನುದಾನಗಳ ಕೊರತೆಯಿಂದಾಗಿ ಕಟ್ಟಡಗಳ ತೆರವಿಗೆ ಯಾರೂ ಮುಂದಾಗದ ಕಾರಣ, ಶಾಲಾ ವಿದ್ಯಾರ್ಥಿಗಳು, ಅಪಾಯದಲ್ಲೆ ಕಲಿಯುವಂತಹ ಸ್ಥಿತಿ ನಿರ್ಮಾಣವಾಗಿದೆ.

ತಾಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಐಬಸಾಪುರ, ಹಿರಿಯ ಪ್ರಾಥಮಿಕ ಶಾಲೆ ಅರುವನಹಳ್ಳಿ, ಸರಕಾರಿ ಉರ್ದು ಹಿರಿಯ ಬಾಲಕರ ಪ್ರಾಥಮಿಕ ಶಾಲೆ ವಿಜಯಪುರ, ಹಿರಿಯ ಪ್ರಾಥಮಿಕ ಶಾಲೆ ಇಂದಿರಾನಗರ, ಜಿ.ಕೆ.ಬಿ.ಎಂ.ಎಸ್ ಶಾಲೆ ವಿಜಯಪುರ ಈ ಶಾಲೆಗಳ ಆವರಣದಲ್ಲಿ ಶಿಥಿಲವಾಗಿರುವ ನೆಲಕ್ಕುರುಳು ಹಂತದಲ್ಲಿರುವ ಹಳೇಯ ಕಟ್ಟಡಗಳನ್ನು ತೆರವುಗೊಳಿಸುವಂತೆ, ಶಾಲಾಭಿವೃದ್ಧಿ ಸಮಿತಿಗಳಿಂದ ಬಂದಿದ್ದ ಮನವಿಗಳು, ಹಾಗೂ ಸ್ಥಳೀಯ ಶಿಕ್ಷಣ ಇಲಾಖೆಯ ಅಧಿಕಾರಿಗಳು, ನೀಡಿದ್ದ ಮನವಿಗಳನ್ನು ಪುರಸ್ಕರಿಸಿದ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಕಟ್ಟಡಗಳನ್ನು ತೆರವುಗೊಳಿಸುವಂತೆ ಮಾ.17, 2026 ರಂದು ಅನುಮತಿ ನೀಡಿದ್ದರೂ, ಇದುವರೆಗೂ ಕಟ್ಟಡಗಳು ತೆರವುಗೊಂಡಿಲ್ಲ.

ಕಟ್ಟಡಗಳನ್ನು ತೆರವುಗೊಳಿಸಲು, ಶಾಲೆಗಳಲ್ಲಿ ಅನುದಾನವಿಲ್ಲ. ಶಾಲಾಭಿವೃದ್ಧಿ ಸಮಿತಿಯವರು, ಬಂಡವಾಳ ಹೂಡಿಕೆ ಮಾಡಲು ಮುಂದೆ ಬರುತ್ತಿಲ್ಲ, ಪುರಸಭೆಯವರು, ಗ್ರಾಮ ಪಂಚಾಯಿತಿಗಳವರು, ನಮ್ಮಲ್ಲಿ ಅನುದಾನವಿಲ್ಲ, ಲೋಕೋಪಯೋಗಿ ಇಲಾಖೆಯವರು ಈ ಕೆಲಸ ಮಾಡಿಕೊಡಬೇಕು ಎನ್ನುವ ಸಿದ್ಧ ಉತ್ತರ ನೀಡುತ್ತಾರೆ.

ಈಗ ಮಳೆಗಾಲ ಆರಂಭವಾಗಿದೆ. ವಿದ್ಯಾರ್ಥಿಗಳನ್ನು ತರಗತಿಗಳಿಂದ ಹೊರಗೆ ಬಿಟ್ಟಾಗ ಅವರು, ಶಿಥಿಲವಾಗಿರುವ ಕಟ್ಟಡಗಳ ಬಳಿಯಲ್ಲೆ ಆಟವಾಡುತ್ತಾರೆ. ಆಕಸ್ಮಾತ್ ಕಟ್ಟಡಗಳು ಕುಸಿದು ಬಿದ್ದರೆ, ನಾವೇನು ಮಾಡಬೇಕು ಎಂದು ಪೋಷಕರು ಆತಂಕ ವ್ಯಕ್ತಪಡಿಸುತ್ತಿದ್ದಾರೆ. ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಶಿಥಿಲ ಕಟ್ಟಡಗಳನ್ನು ತೆರವುಗೊಳಿಸುವಂತೆ ಪೋಷಕರು ಒತ್ತಾಯಿಸಿದ್ದಾರೆ.

# ಎಸ್‌ಐಆರ್: ಅಕ್ರಮ ತನಿಖೆಗೆ ಜೆಡಿಎಸ್ ಆಗ್ರಹ

ಬಂಗಾರಪೇಟೆ

ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಚುನಾವಣಾ ಆಯೋಗದ ನಿಯಮಗಳು ಹಾಗೂ ಮಾರ್ಗಸೂಚಿಗಳನ್ನು ಉಲ್ಲಂಘಿಸಲಾಗುತ್ತಿದೆ ಎಂದು ಆರೋಪಿಸಿರುವ ಜಾತ್ಯಾತೀತ ಜನತಾದಳ (ಜೆಡಿಎಸ್), ಈ ಸಂಬಂಧ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ತಾಲೂಕು ಆಡಳಿತವನ್ನು ಆಗ್ರಹಿಸಿದೆ.

ಈ ಕುರಿತು ತಾಲೂಕು ದಂಡಾಧಿಕಾರಿಗೆ ದೂರು ಸಲ್ಲಿಸಿರುವ ಜೆಡಿಎಸ್ ಮುಖಂಡ ಹಾಗೂ ಜಿಲ್ಲಾ ಯೂನಿಯನ್ ನಿರ್ದೇಶಕ ಎಚ್.ಎಂ. ಹನುಮಂತಯ್ಯ, ಬಂಗಾರಪೇಟೆ ನಗರಸಭೆ ವ್ಯಾಪ್ತಿಯ ಸಿ. ರಹೀಂ ಕಾಂಪೌಂಡ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಎಸ್‌ಐಆರ್ ಪ್ರಕ್ರಿಯೆ ಚುನಾವಣಾ ಆಯೋಗದ ನಿಗದಿತ ವಿಧಾನಕ್ಕೆ ವಿರುದ್ಧವಾಗಿ ನಡೆಯುತ್ತಿದೆ ಎಂದು ಆರೋಪಿಸಿದ್ದಾರೆ.

ಅವರ ಪ್ರಕಾರ, ಮತದಾರರನ್ನು ಒಂದೇ ಸ್ಥಳದಲ್ಲಿ ಗುಂಪು ಸೇರಿಸಿ ಎಣಿಕೆಯ ನಮೂನೆಗಳನ್ನು (ಎನ್ಯುಮರೇಷನ್ ಫಾರಂ) ವಿತರಿಸಲಾಗುತ್ತಿದ್ದು, ಅದೇ ಸ್ಥಳದಲ್ಲೇ ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ.

ಆದರೆ ಚುನಾವಣಾ ಆಯೋಗದ ಮಾರ್ಗಸೂಚಿಗಳ ಪ್ರಕಾರ, ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಪ್ರತಿ ಮತದಾರರ ಮನೆಗೆ ತೆರಳಿ ಪರಿಶೀಲನೆ ನಡೆಸಿ, ಅರ್ಜಿಗಳನ್ನು ವಿತರಿಸಿ, ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಬಳಿಕ ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಬೇಕು. ಈ ನಿಯಮವನ್ನು ಪಾಲಿಸದೆ ಸಾಮೂಹಿಕವಾಗಿ ಅರ್ಜಿ ವಿತರಣೆ ಹಾಗೂ ಸ್ವೀಕಾರ ಮಾಡುತ್ತಿರುವುದು ಕಾನೂನುಬದ್ಧ ಪ್ರಕ್ರಿಯೆಗೆ ವಿರುದ್ಧವಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಜೆಡಿಎಸ್ ಮುಖಂಡರು ಸಂಬಂಧಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಸ್ಥಳೀಯ ಸಾರ್ವಜನಿಕರಿಂದಲೂ ಇದೇ ರೀತಿಯ ಹಲವು ದೂರುಗಳು ಬಂದಿವೆ ಎಂದು ತಿಳಿಸಿದ್ದಾರೆ. ಪ್ರಸ್ತುತ ಅನುಸರಿಸುತ್ತಿರುವ ವಿಧಾನದಿಂದ ಎಸ್‌ಐಆರ್ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆಗೆ ಧಕ್ಕೆ ಉಂಟಾಗುವ ಸಾಧ್ಯತೆ ಇದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಡೆದಿರುವ ಎಲ್ಲ ಅಕ್ರಮಗಳ ಕುರಿತು ತಕ್ಷಣ ಸಮಗ್ರ ತನಿಖೆ ನಡೆಸಬೇಕು ಎಂದು ಹೇಳಿದರು.

# ಎಸ್‌ಐಆರ್ ಅಕ್ರಮ: ಬಿಜೆಪಿ-ಜೆಡಿಎಸ್ ಪ್ರತಿಭಟನೆ



ರಾಮನಗರ

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಚುನಾವಣಾ ಆಯೋಗದ ನಿಯಮಗಳನ್ನು ಉಲ್ಲಂಘಿಸಿ ಅಕ್ರಮಗಳು ನಡೆಯುತ್ತಿವೆ ಎಂದು ಆರೋಪಿಸಿ ಬಿಜೆಪಿ-ಜೆಡಿಎಸ್ ಮೈತ್ರಿ ಪಕ್ಷದ ವತಿಯಿಂದ ರಾಮನಗರ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಬೃಹತ್ ಪ್ರತಿಭಟನೆ ನಡೆಯಿತು.

ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಸರ್ಕಾರ, ಜಿಲ್ಲಾಡಳಿತ ಹಾಗೂ ಚುನಾವಣಾ ಪ್ರಕ್ರಿಯೆ ಕುರಿತು ತೀವ್ರ ಆಕ್ಷೇಪ ವ್ಯಕ್ತಪಡಿಸಲಾಯಿತು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ನಿಖಿಲ್ ಕುಮಾರಸ್ವಾಮಿ, ಸರ್ಕಾರಗಳು ಮತ್ತು ಮುಖ್ಯಮಂತ್ರಿಗಳು ಬರುತ್ತಾರೆ, ಹೋಗುತ್ತಾರೆ. ಆದರೆ ಅಧಿಕಾರಿಗಳು ಕಾನೂನಿನ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಬೇಕು. ಯಾವುದೇ ರಾಜಕೀಯ ಒತ್ತಡಕ್ಕೆ ಮಣಿಯದೆ ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸಬೇಕು ಎಂದು ಎಚ್ಚರಿಕೆ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ವಿಚಾರವಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾಡುತ್ತಿರುವ ಆರೋಪಗಳನ್ನು ಉಲ್ಲೇಖಿಸಿದ ಅವರು, ಕರ್ನಾಟಕಕ್ಕೆ ಬಂದು ಇಲ್ಲಿನ ಪರಿಸ್ಥಿತಿಯನ್ನು ನೇರವಾಗಿ ಪರಿಶೀಲಿಸಲಿ ಎಂದು ಸವಾಲು ಹಾಕಿದರು. ಅಗತ್ಯವಿದ್ದರೆ ಈ ವಿಚಾರವನ್ನು ದೆಹಲಿಗೆ ತೆಗೆದುಕೊಂಡು ಹೋಗಿ ಇಂಗ್ಲಿಷ್‌ನಲ್ಲಿಯೇ ಸುದ್ದಿಗೋಷ್ಠಿ ನಡೆಸುವುದಾಗಿ ಹೇಳಿದರು.

ರಾಜ್ಯ ಸರ್ಕಾರ ಚುನಾವಣೆಗೆ ಅನುಕೂಲವಾಗುವ ರೀತಿಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದ ಅವರು, ರಾಮನಗರದ ಕೆಲವು ವಾರ್ಡ್‌ಗಳಲ್ಲಿ ನಿಯಮಬಾಹಿರವಾಗಿ ಎಸ್‌ಐಆರ್ ನಡೆಯುತ್ತಿದೆ ಎಂದು ದೂರಿದರು.

ರಾಮನಗರ ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ್ ವಿರುದ್ಧವೂ ವಾಗ್ದಾಳಿ ನಡೆಸಿದ ನಿಖಿಲ್ ಕುಮಾರಸ್ವಾಮಿ, ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಸರಿಯಾಗಿ ಪಾಲಿಸಲಾಗುತ್ತಿಲ್ಲ. ಅರ್ಜಿಗಳ ವಿತರಣೆಯಿಂದ ಹಿಡಿದು ಪರಿಶೀಲನೆವರೆಗೆ ನಿಯಮ ಉಲ್ಲಂಘನೆ ನಡೆದಿದೆ ಎಂದು ಆರೋಪಿಸಿದರು.

ಕೆಲವು ಮುಸ್ಲಿಂ ಬಹುಸಂಖ್ಯಾತ ವಾರ್ಡ್‌ಗಳಲ್ಲಿ ಅಕ್ರಮವಾಗಿ ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ಆರೋಪಿಸಿದ ಅವರು, ಈ ಕುರಿತು ತಮ್ಮ ಕಾರ್ಯಕರ್ತರು ವಿಡಿಯೊ ದಾಖಲೆಗಳನ್ನು ಸಂಗ್ರಹಿಸಿರುವುದಾಗಿ ಹೇಳಿದರು. ರಾಮನಗರದ 35 ಸೂಕ್ಷ್ಮ ಮತಗಟ್ಟೆಗಳಲ್ಲಿ ರಾಜ್ಯ ಚುನಾವಣಾ ಆಯೋಗವೇ ನೇರವಾಗಿ ಮೇಲ್ವಿಚಾರಣೆ ನಡೆಸಬೇಕು ಎಂದು ಒತ್ತಾಯಿಸಿದರು.

ಕುಣಿಗಲ್ ವಿಧಾನಸಭೆ ಕ್ಷೇತ್ರದಲ್ಲಿಯೂ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮಗಳು ನಡೆಯುತ್ತಿವೆ ಎಂದು ಆರೋಪಿಸಿದ ನಿಖಿಲ್ ಕುಮಾರಸ್ವಾಮಿ, ಕೆಲವು ಜನಪ್ರತಿನಿಧಿಗಳು ಅಧಿಕಾರಿಗಳ ಮೇಲೆ ಒತ್ತಡ ಹೇರಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಸಿಸುತ್ತಿದ್ದಾರೆ ಎಂದು ದೂರಿದರು.

# 'ಮಹಿಳೆಯರು ರಾಜಕೀಯ ನಾಯಕತ್ವ ಬೆಳೆಸಿಕೊಳ್ಳಿ'

ತುಮಕೂರು

ಜೆಡಿಎಸ್‌ನ ಮಹಿಳಾ ಕಾರ್ಯಕರ್ತೆಯರು ಪಕ್ಷದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಪಕ್ಷ ಸಂಘಟನೆಗೆ ಕೆಲಸ ಮಾಡಿ, ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಭಾಗವಹಿಸಿ ನಾಯಕತ್ವ ರೂಪಿಸಿಕೊಳ್ಳಲು ಪ್ರಯತ್ನಿಸಬೇಕು ಎಂದು ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್. ನಿಂಗಪ್ಪ ಹೇಳಿದರು.

ಶುಕ್ರವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಮಹಿಳಾ ಘಟಕದ ನೂತನ ಪದಾಧಿಕಾರಿಗಳಿಗೆ ನೇಮಕಾತಿ ಪತ್ರ ನೀಡಿ ಮಾತನಾಡಿದರು. ಹೆಣ್ಣುಮಕ್ಕಳು ರಾಜಕೀಯ ಕ್ಷೇತ್ರದಲ್ಲಿ ಭಾಗವಹಿಸಿ ತಮ್ಮ ಸಂಘಟನಾಶಕ್ತಿ ಪ್ರದರ್ಶಿಸಬೇಕು. ಪಕ್ಷದ ಸಂಘಟನೆಯಲ್ಲಿ ತೊಡಗಿಕೊಳ್ಳುವುದರಿಂದ ಸಾಮಾಜಿಕವಾಗಿಯೂ ಗುರುತಿಸಿಕೊಳ್ಳಲು ಅವಕಾಶವಿದೆ ಎಂದರು.

ಚುನಾವಣೆಗಳಲ್ಲಿ ಮಹಿಳೆಯರಿಗೆ ಶೇಕಡ 50ರಷ್ಟು ಸ್ಥಾನ ಮೀಸಲಾತಿ ಇದೆ. ಅವಕಾಶ ದೊರೆಯುವ ಅರ್ಹ ಮಹಿಳೆಯರು ಚುನಾವಣೆಯಲ್ಲಿ ಸ್ಪರ್ಧೆ ಮಾಡಿ ಗೆಲುವು ಪಡೆದು ರಾಜಕೀಯ ಸ್ಥಾನ ಪಡೆಯಬೇಕು. ಅಂತಹ ಅರ್ಹತೆ ಪಡೆಯಲು ಪಕ್ಷ ಸಂಘಟನೆಯಲ್ಲಿ ಹೆಚ್ಚು ಸಕ್ರಿಯವಾಗಿ ಭಾಗವಹಿಸಬೇಕು. ಈ ಮೂಲಕ ಪಕ್ಷವನ್ನೂ ಬೆಳೆಸಿ ತಾವೂ ಬೆಳೆಯಲು ಅವಕಾಶವಿದೆ. ಮುಂಬರುವ 2028ರ ವಿಧಾನಸಭಾ ಚುನಾವಣೆ ನಮ್ಮೆಲ್ಲರ ಗುರಿಯಾಗಬೇಕು, ಆ ಚುನಾವಣೆಯಲ್ಲಿ ಜೆಡಿಎಸ್‌ಗೆ ಹೆಚ್ಚು ಸ್ಥಾನ ದೊರಕಿಸಲು ಎಲ್ಲರೂ ಕೆಲಸ ಮಾಡಿ, ಮತ್ತೊಮ್ಮೆ ಹೆಚ್.ಡಿ. ಕುಮಾರಸ್ವಾಮಿಯವರು ರಾಜ್ಯದ ಮುಖ್ಯಮಂತ್ರಿ ಆಗಬೇಕು ಎಂಬ ಗುರಿ ನಮ್ಮದಾಗಬೇಕು ಎಂದು ಹೆಚ್. ನಿಂಗಪ್ಪ ಹೇಳಿದರು.

ಜೆಡಿಎಸ್ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ರೇಖಾ ರಾಜ್‌ಗೌಡ ಹಾಗೂ ನಗರ ಅಧ್ಯಕ್ಷೆ ಲಕ್ಷ್ಮೀ ನಾಯಕ್ ಅವರು ನೂತನ ಪದಾಧಿಕಾರಿಗಳನ್ನು ಸನ್ಮಾನಿಸಿದರು. ನಂತರ ಮಾತನಾಡಿದ ರೇಖಾ ರಾಜ್‌ಗೌಡ, ಮಹಿಳೆಯರು ರಾಜಕೀಯವಾಗಿ ಬೆಳೆಯಲು ಜೆಡಿಎಸ್ ಒಂದು ಉತ್ತಮ ಪಕ್ಷವಾಗಿದೆ. ಪದಾಧಿಕಾರಿ ಹುದ್ದೆ ಅಧಿಕಾರವಲ್ಲ, ಅದೊಂದು ಜವಾಬ್ದಾರಿ ಎಂದು ತಿಳಿದು ಪಕ್ಷ ಕಟ್ಟುವ ಜವಾಬ್ದಾರಿ ವಹಿಸಿಕೊಳ್ಳಬೇಕು. ಪದಾಧಿಕಾರಿ ಅಲ್ಲದವರೂ ಮುಂದೆ ಅವಕಾಶಗಳನ್ನು ಪಡೆಯಲು ಪಕ್ಷದ ಕಾರ್ಯಚಟುಕಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಕೊಳ್ಳಬೇಕು ಎಂದು ತಿಳಿಸಿದರು.

# ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಗೆ ಸಹಕಾರ ನೀಡುವಂತೆ ಸಲಹೆ

ವಿಜಯಪುರ

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ವಿಶೇಷ ಪಟ್ಟಿ ಪರಿಷ್ಕರಣೆಯ ಕುರಿತು, ಆತಂಕವನ್ನು ಬಿಟ್ಟು, ಸಕ್ರೀಯವಾಗಿ ಭಾಗವಹಿಸುವಂತೆ ಪುರಸಭೆ ಸದಸ್ಯ ಎಂ.ಸತೀಶ್ ಕುಮಾರ್ ಹೇಳಿದರು.

ಪಟ್ಟಣದಲ್ಲಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತಗಟ್ಟೆ ಅಧಿಕಾರಿಗಳು, ಕೊಡುವಂತಹ ಎನ್ಯುಮರೇಷನ್ ಫಾರಂಗಳನ್ನು ಜೋಪಾನವಾಗಿಟ್ಟುಕೊಂಡು, ಅವುಗಳನ್ನು ಕಡ್ಡಾಯವಾಗಿ ಭರ್ತಿ ಮಾಡಿ, ಮತಗಟ್ಟೆ ಅಧಿಕಾರಿಗಳಿಗೆ ಒಂದು ಫಾರಂನ್ನು ಹಿಂತಿರುಗಿಸಬೇಕು, ಅಧಿಕಾರಿಗಳು ಕೇಳುವಂತಹ ದಾಖಲೆಗಳನ್ನು ಮೊದಲೇ ಸಿದ್ಧಪಡಿಸಿಕೊಂಡು, ಅಧಿಕಾರಿಗಳು ಬಂದಾಗ, ಅವರಿಗೆ ದಾಖಲೆಗಳು ನೀಡಿ, ಸಹಕರಿಸಿ.

18 ವರ್ಷ ತುಂಬುವವರು, ಹೊಸದಾಗಿ ಸೇರ್ಪಡೆಯಾಗಲು ನಮೂನೆ-6 ನ್ನು ಭರ್ತಿ ಮಾಡಿ, ಮತಗಟ್ಟೆ ಅಧಿಕಾರಿಗಳಿಗೆ ಕೊಡಿ, ಮತದಾರರ ಪಟ್ಟಿಯಿಂದ ಹೆಸರು ತೆಗೆಯುವುದಕ್ಕಾಗಿ ನಮೂನೆ-7 ನ್ನು ಭರ್ತಿ ಮಾಡಿಕೊಡಿ, ಮೃತಪಟ್ಟಿರುವವರು, ಬೇರೆ ಊರುಗಳಲ್ಲಿ ಮತದಾನದ ಹಕ್ಕನ್ನು ಹೊಂದಿರುವವರ ಹೆಸರನ್ನು ಡಿಲೀಟ್ ಮಾಡಿಸುವ ಮೂಲಕ ನೈಜ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಸಹಕಾರ ನೀಡಬೇಕು.

ಯುವಜನರು ಹೆಚ್ಚು ಸಕ್ರೀಯವಾಗಿ ಕೆಲಸ ಮಾಡಿ, ನಾಗರೀಕರಲ್ಲಿ ಎಸ್.ಐ.ಆರ್ ಕುರಿತು ಅರಿವು ಮೂಡಿಸಬೇಕು. ನಮೂನೆಗಳನ್ನು ಭರ್ತಿ ಮಾಡಲು ಬಾರದವರಿಗೆ ಮತಗಟ್ಟೆಗಳು ಅಧಿಕಾರಿಗಳು ಸಹಾಯ ಮಾಡಬೇಕು ಎಂದು



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿಯವರ ಪತ್ನಿ ಶ್ರೀಮತಿ ಉಷಾ ಡಿ.ಕೆ. ಶಿವಕುಮಾರ್ ಹಾಗೂ ಸಹೋದರ ಡಿ.ಕೆ. ಸುರೇಶ್ ಅವರು ಶುಕ್ರವಾರ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿವಾಸಕ್ಕೆ ಭೇಟಿ ನೀಡಿ ಉಪಾಹಾರದ ಜೊತೆಗೆ ಮಾತುಕತೆ ನಡೆಸಿದರು.



ವಿರಾಜಪೇಟೆ ಶಾಸಕರಾದ ಎ ಎಸ್ ಪೊನ್ನಣ್ಣ ಅವರ ನೇತೃತ್ವದಲ್ಲಿ ಕೊಡಗು ಭಾಗದ ಮಾಜಿ ಸೈನಿಕರು ಹಾಗೂ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕ್ರೀಡಾಪಟುಗಳ ನಿಯೋಗವು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಶುಕ್ರವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ನಿವೃತ್ತ ಬ್ರಿಗೇಡಿಯರ್ ಬ್ರಿಜ್ ಚೆನಂಡ ಚೀಯಣ್ಣ, ನಿವೃತ್ತ ಏರ್ ಮಾರ್ಷಲ್ ಬಿ ಯು ಚೆಂಗಪ್ಪ, ನಿವೃತ್ತ ಲೆಫ್ಟಿನೆಂಟ್ ಕರ್ನಲ್ ಪಿ ಎಸ್ ಗಣಪತಿ, ನಿವೃತ್ತ ಮೇಜರ್ ಜೆನರಲ್ ಅರ್ಜುನ್ ಮುತ್ತಯ್ಯ, ನಿವೃತ್ತ ಮೇಜರ್ ಜೆನರಲ್ ಬಚಮಂಡ ಕಾರ್ಯಪ್ಪ, ನಿವೃತ್ತ ಬ್ರಿಗೇಡಿಯರ್ ಎಂ ಎ ದೇವಯ್ಯ, ನಿವೃತ್ತ ಕರ್ನಲ್ ಸಿ ಪಿ ಮುತ್ತಯ್ಯ, ಭಾರತ ಹಾಕಿ ತಂಡದ ಮಾಜಿ ನಾಯಕರಾದ ಡಾ. ಎಂ ಪಿ ಗಣೇಶ್, ಎಂ ಎಂ ಸೋಮಯ್ಯ, ಬಿ ಸುಬ್ರಮಣಿ ಅವರು ಉಪಸ್ಥಿತರಿದ್ದರು.

# ಆ.14ರವರೆಗೆ ಬೆಳೆ ವಿಮೆ ನೋಂದಣಿಗೆ ಅವಕಾಶ

ಕೊರಟಗೆರೆ

2026–27ನೇ ಸಾಲಿನ ಮುಂಗಾರು ಹಂಗಾಮಿನ ಪ್ರಧಾನಮಂತ್ರಿ ಫಸಲ್ ಬಿಮಾ (ಬೆಳೆ ವಿಮೆ) ಯೋಜನೆ ಜಾರಿಯಲ್ಲಿದ್ದು, ಅಧಿಸೂಚಿತ ಬೆಳೆಗಳನ್ನು ಬೆಳೆಯುತ್ತಿರುವ ಬೆಳೆಸಾಲ ಪಡೆದ ಹಾಗೂ ಸಾಲ ಪಡೆಯದ ರೈತರು ನಿಗದಿತ ದಿನಾಂಕದೊಳಗೆ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳುವಂತೆ ಸಹಾಯಕ ಕೃಷಿ ನಿರ್ದೇಶಕ ಕಲ್ಲೇಶ್ ಪ್ರಸಾದ್ ತಿಳಿಸಿದ್ದಾರೆ.

ತಾಲ್ಲೂಕಿನಲ್ಲಿ ವಿವಿಧ ಬೆಳೆಗಳಿಗೆ ಪ್ರತ್ಯೇಕ ಕೊನೆಯ ದಿನಾಂಕ ನಿಗದಿಪಡಿಸಲಾಗಿದೆ. ಅದರಂತೆ ಶೇಂಗಾ (ನೀರಾವರಿ) ಹಾಗೂ ತೊಗರಿ (ಮಳೆಆಶ್ರಿತ) ಬೆಳೆಗಳಿಗೆ ಜುಲೈ 15, ಮುಸುಕಿನ ಜೋಳ (ಮಳೆಆಶ್ರಿತ ಹಾಗೂ ನೀರಾವರಿ) ಬೆಳೆಗಳಿಗೆ ಜುಲೈ 31, ಹಾಗೂ ಭತ್ತ (ನೀರಾವರಿ), ಶೇಂಗಾ (ಮಳೆಆಶ್ರಿತ), ರಾಗಿ (ಮಳೆಆಶ್ರಿತ ಹಾಗೂ ನೀರಾವರಿ) ಮತ್ತು ಹುರುಳಿ (ಮಳೆಆಶ್ರಿತ) ಬೆಳೆಗಳಿಗೆ ಆಗಸ್ಟ್ 14ರವರೆಗೆ ನೋಂದಣಿ ಮಾಡಿಕೊಳ್ಳಬಹುದು.

ತಾಲ್ಲೂಕಿನಲ್ಲಿ ಈಗಾಗಲೇ 513 ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಂಡಿದ್ದಾರೆ. ಉಳಿದ ರೈತರು ರಾಷ್ಟ್ರೀಕೃತ ಬ್ಯಾಂಕುಗಳು, ಗ್ರಾಮ ಒನ್ ಕೇಂದ್ರಗಳು, ಸಾಮಾನ್ಯ ಸೇವಾ ಕೇಂದ್ರಗಳು (ಅಖಅ) ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆ ನೋಂದಾಯಿಸಿಕೊಳ್ಳಬಹುದು ಎಂದು ತಿಳಿಸಿದ್ದಾರೆ.

ಮುಂಗಾರು ಹಂಗಾಮಿನಲ್ಲಿ ಅತಿವೃಷ್ಟಿ, ಮಳೆ ಕೊರತೆ, ಭೂಕುಸಿತ, ಪ್ರವಾಹ ಸೇರಿದಂತೆ ಪ್ರಕೃತಿ ವಿಕೋಪಗಳಿಂದ ಉಂಟಾಗುವ ಬೆಳೆ ನಷ್ಟಕ್ಕೆ ಯೋಜನೆಯಡಿ ಪರಿಹಾರ ದೊರೆಯಲಿದೆ. ಬೆಳೆಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಪಹಣಿ, ಖಾತೆ, ಕಂದಾಯ ರಸೀದಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ನಿಗದಿತ ವಿಮಾ ಕಂತು ಪಾವತಿಸಬೇಕು.

ಪ್ರತಿ ಬೆಳೆಗೆ ವಿಮಾ ಕಂತು ಹಾಗೂ ನೋಂದಣಿ ದಿನಾಂಕಗಳು ಭಿನ್ನವಾಗಿರುವುದರಿಂದ ರೈತರು ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯ ಕೃಷಿ ಇಲಾಖೆ, ರೈತ ಸಂಪರ್ಕ ಕೇಂದ್ರಗಳು ಅಥವಾ ಸಮೀಪದ ಸೇವಾ ಕೇಂದ್ರಗಳನ್ನು ಸಂಪರ್ಕಿಸುವಂತೆ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಂದಿನಿ ಮಳಿಗೆಗಳಿಂದ ರೈತರಿಗೆ ಲಾಭ, ಗ್ರಾಮೀಣ ವ್ಯಾಪಾರಕ್ಕೂ ಉತ್ತೇಜನ

ಬೂದಿಕೋಟೆ

ಗ್ರಾಮೀಣ ಪ್ರದೇಶಗಳಲ್ಲಿ ನಂದಿನಿ ಉತ್ಪನ್ನಗಳ ಮಾರಾಟ ಮಳಿಗೆಗಳನ್ನು ಸ್ಥಾಪಿಸುವುದರಿಂದ ಹಾಲು ಉತ್ಪಾದಕ ರೈತರಿಗೆ ಉತ್ತಮ ಮಾರುಕಟ್ಟೆ ದೊರೆಯುವುದರ ಜೊತೆಗೆ ಸ್ಥಳೀಯ ವ್ಯಾಪಾರಕ್ಕೂ ಉತ್ತೇಜನ ಸಿಗಲಿದೆ ಎಂದು ಕೋಲಾರ ಹಾಲು ಒಕ್ಕೂಟದ ಕೆಜಿಎಫ್ ಕ್ಷೇತ್ರದ ನಿರ್ದೇಶಕ ಜಯಸಿಂಹ ಕೃಷ್ಣಪ್ಪ ಹೇಳಿದರು.

ಹೋಬಳಿಯ ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಂ. ಹೊಸಹಳ್ಳಿ ಗ್ರಾಮದಲ್ಲಿ ನೂತನ ನಂದಿನಿ ಉತ್ಪನ್ನಗಳ ಮಾರಾಟ ಮಳಿಗೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಂದಿನಿ ಉತ್ಪನ್ನಗಳು ರೈತರು ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಪೂರೈಸುವ ಶುದ್ಧ ಹಾಲಿನಿಂದ ತಯಾರಾಗುತ್ತವೆ. ವಿಶೇಷವಾಗಿ ನಂದಿನಿ ತುಪ್ಪವನ್ನು ಯಾವುದೇ ಕಲಬೆರಿಕೆ ಇಲ್ಲದೆ ತಯಾರಿಸಲಾಗುತ್ತದೆ. ಮಾರುಕಟ್ಟೆಯಲ್ಲಿನ ಕೆಲವು ಉತ್ಪನ್ನಗಳಲ್ಲಿ ಕಲಬೆರಿಕೆ ಎಣ್ಣೆ ಬಳಸುವುದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮ



ಉಂಟಾಗುವ ಸಾಧ್ಯತೆ ಇದೆ. ಆದ್ದರಿಂದ ಗ್ರಾಹಕರು ನಂದಿನಿ ಉತ್ಪನ್ನಗಳನ್ನು ಬಳಸುವುದರಿಂದ ಆರೋಗ್ಯಕ್ಕೂ ಒಳಿತು, ರೈತರಿಗೂ ನೇರ ಲಾಭವಾಗುತ್ತದೆ ಎಂದು ಹೇಳಿದರು.

ನಂದಿನಿ ಬ್ರ್ಯಾಂಡ್‌ನಡಿ ವಿವಿಧ ಸಿಹಿ ಮತ್ತು ಖಾರ ತಿಂಡಿಗಳನ್ನೂ ತಯಾರಿಸಲಾಗುತ್ತಿದ್ದು, ಗುಣಮಟ್ಟದ ಆಹಾರ ಉತ್ಪನ್ನಗಳನ್ನು ಗ್ರಾಹಕರಿಗೆ ಒದಗಿಸಲಾಗುತ್ತಿದೆ. ಪ್ರತಿಯೊಬ್ಬರೂ ನಂದಿನಿ ಉತ್ಪನ್ನಗಳಿಗೆ ಆದ್ಯತೆ ನೀಡುವ ಮೂಲಕ ರೈತರನ್ನು ಬೆಂಬಲಿಸಬೇಕು ಎಂದು ಅವರು ಕರೆ ನೀಡಿದರು.

ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಅಗತ್ಯವಿರುವ ಮಿಲ್ಕಿಂಗ್ ಯಂತ್ರ ಸೇರಿದಂತೆ ಮೂಲಸೌಕರ್ಯಗಳನ್ನು ಒದಗಿಸಲು ಕೋಲಾರ ಹಾಲು ಒಕ್ಕೂಟ ಬದ್ಧವಾಗಿದೆ. ರೈತರು ಗುಣಮಟ್ಟದ ಹಾಗೂ ಶುದ್ಧ ಹಾಲನ್ನು ಮಾತ್ರ ಸಂಘಗಳಿಗೆ ಪೂರೈಸುವ ಮೂಲಕ ಹಾಲಿನ ಗುಣಮಟ್ಟ ಕಾಪಾಡಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಹೊಸಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಗಣೇಶ್ ರಾವ್, ವ್ಯವಸ್ಥಾಪಕ ಕಾರ್ತಿಕ್ ರೆಡ್ಡಿ, ನಂದೀಶ್ ಗೌಡ, ಉಪ ವ್ಯವಸ್ಥಾಪಕ ಗಿರೀಶ್ ಗೌಡ, ವಿಸ್ತರಣಾಧಿಕಾರಿ ಅನಿಲ್ ಕುಮಾರ್, ಮುಖಂಡರಾದ ಸಿ. ವೆಂಕೋಬರಾವ್, ಮೊಲಜಿ ರಾವ್, ಆನಂದ್ ರೆಡ್ಡಿ, ಬೊಪ್ಪನಹಳ್ಳಿ ರವಿ, ನಾಗರಾಜ್ ಗೌಡ ಹಾಗೂ ವಿವಿಧ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಮತ್ತು ರೈತರು ಉಪಸ್ಥಿತರಿದ್ದರು.



ಕನಕಪುರ ನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಕಾಂಗ್ರೆಸ್ ಭವನಕ್ಕೆ ಕುರುಪೇಟೆಯ ಹಿರಿಯ ಕಾಂಗ್ರೆಸ್ ಮುಖಂಡ ಮೊಟ್ಟೆ ಕೃಷ್ಣಪ್ಪನವರ ಮಗನಾದ, ಯುವ ಕಾಂಗ್ರೆಸ್ ಮುಖಂಡ ಕೆ ಶ್ರೀನಿವಾಸ್ ಐದು ಲಕ್ಷ ರೂಗಳ ಚೆಕ್ ಅನ್ನು ಸಹಾಯಾರ್ಥವಾಗಿ ಮಾಜಿ ಸಂಸದ ಹಾಗೂ ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ ಡಿ ಕೆ ಸುರೇಶ್ ಅವರಿಗೆ ನೀಡಿದರು. ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಕೆ ಎನ್ ದಿಲೀಪ್, ಹಿರಿಯ ಕಾಂಗ್ರೆಸ್ ಮುಖಂಡ ಚಾಮರಾಜು, ಮಾಜಿ ನಗರಸಭಾ ಉಪಾಧ್ಯಕ್ಷ ಜಗನ್ನಾಥ್, ಟಿ ಎ ಪಿ ಸಿ ಎಂ ಎಸ್ ನಿರ್ದೇಶಕ ಚಿಕ್ಕಣ್ಣ,ಮಲ್ಲೇಶ್, ಆರ್ ಮಂಜುನಾಥ್ , ಭರತ್ ಕುಮಾರ್, ನಿಂಗರಾಜು ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಈ ವೇಳೆ ಹಾಜರಿದ್ದರು.

# ಶಾಲಾ ಮಕ್ಕಳಿಗೆ ನೋಟ್‌ಬುಕ್ ವಿತರಣೆ, ನೇತ್ರ ತಪಾಸಣೆ ಶಿಬಿರ



ಕನಕಪುರ

ಗ್ರಾಮೀಣ ಭಾಗದ ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗಬಾರದು. ಪ್ರತಿಯೊಬ್ಬ ವಿದ್ಯಾರ್ಥಿಯೂ ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಉನ್ನತ ಸ್ಥಾನಕ್ಕೇರಬೇಕು ಎಂಬುದು ರೋಟರಿ ಸಂಸ್ಥೆಯ ಉದ್ದೇಶ ಮತ್ತು ಕನಸಾಗಿದೆ ಎಂದು ಕನಕಪುರ ರೋಟರಿ ಸಂಸ್ಥೆಯ ನೂತನ ಅಧ್ಯಕ್ಷ ಕಾಂತರಾಜು ಹೇಳಿದರು.

ತಾಲೂಕಿನ ಕಸಬಾ ಹೋಬಳಿ ತೆಂಗನಾಯಕನಹಳ್ಳಿ ಸರ್ಕಾರಿ ಅನುದಾನಿತ ಜ್ಞಾನೋದಯ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ, ಗಿಡ ನೆಡುವ ಕಾರ್ಯಕ್ರಮ ಹಾಗೂ ನೇತ್ರ ತಪಾಸಣೆ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರೋಟರಿ ಸಂಸ್ಥೆಯ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಮೊದಲ ದಿನವೇ ವಿದ್ಯಾರ್ಥಿಗಳಿಗೆ ಉಪಯುಕ್ತವಾಗುವ ಕಾರ್ಯಕ್ರಮ ಆಯೋಜಿಸಬೇಕೆಂಬ ಸಂಕಲ್ಪದಿಂದ ಸಂಸ್ಥೆಯ ಸದಸ್ಯರ ಸಹಕಾರದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಶಿಕ್ಷಣದ ಕಡೆ ಹೆಚ್ಚಿನ ಗಮನಹರಿಸಿ, ಉನ್ನತ ವಿದ್ಯಾಭ್ಯಾಸದ ಮೂಲಕ ತಮ್ಮ ಶಾಲೆ, ಪೋಷಕರು ಹಾಗೂ ಸಮಾಜಕ್ಕೆ ಕೀರ್ತಿ ತರಬೇಕು. ಶಿಕ್ಷಣದ ಜೊತೆಗೆ ಸಮಾಜಸೇವೆಯ ಮನೋಭಾವವನ್ನೂ ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ರೋಟರಿ ಟ್ರಸ್ಟ್‌ನ ಕಾರ್ಯದರ್ಶಿ ಭಾನು ಪ್ರಕಾಶ್ ಮಾತನಾಡಿ, 1905ರಲ್ಲಿ ಸಮಾಜಸೇವೆಯ ಉದ್ದೇಶದಿಂದ ಆರಂಭವಾದ ರೋಟರಿ ಸಂಸ್ಥೆ ವಿಶ್ವದಾದ್ಯಂತ ಅನೇಕ ಸೇವಾ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಪೋಲಿಯೊ ನಿರ್ಮೂಲನೆಗೆ ರೋಟರಿ ಸಂಸ್ಥೆಯ ಕೊಡುಗೆ ಅಪಾರವಾಗಿದ್ದು, ಭಾರತ ಪೋಲಿಯೊ ಮುಕ್ತ ರಾಷ್ಟ್ರವಾಗಲು ಸಂಸ್ಥೆಯ ಸೇವೆ ಮಹತ್ವದ್ದಾಗಿದೆ ಎಂದು ಹೇಳಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಯಾವುದೇ ರೀತಿಯಲ್ಲೂ ಕಡಿಮೆಯಿಲ್ಲ. ಸರ್ಕಾರದ ಸೌಲಭ್ಯಗಳ ಜೊತೆಗೆ ಅಗತ್ಯವಿರುವ ನೆರವನ್ನು ರೋಟರಿ ಸಂಸ್ಥೆ ನಿರಂತರವಾಗಿ ಒದಗಿಸುತ್ತಿದೆ. ವೈದ್ಯರು, ಇಂಜಿನಿಯರ್‌ಗಳಷ್ಟೇ ಅಲ್ಲದೆ ಕೃಷಿ ಕ್ಷೇತ್ರದಲ್ಲಿಯೂ ಅಪಾರ ಅವಕಾಶಗಳಿದ್ದು, ಕೃಷಿಯಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳು ಕೃಷಿ ಶಿಕ್ಷಣ ಪಡೆದು ಆಧುನಿಕ ಕೃಷಿಯತ್ತ ಮುಖ ಮಾಡಬೇಕು ಎಂದು ಸಲಹೆ ನೀಡಿದರು.

ಶಾಲಾ ಆವರಣದಲ್ಲಿ ನೆಡಲಾದ ತೆಂಗು, ದಾಳಿಂಬೆ, ಸಪೋಟ ಸೇರಿದಂತೆ ವಿವಿಧ ಗಿಡಗಳ ಆರೈಕೆಯ ಜವಾಬ್ದಾರಿಯನ್ನು ವಿದ್ಯಾರ್ಥಿಗಳೇ ವಹಿಸಿಕೊಂಡು ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು ಎಂದು ಅವರು ಕರೆ ನೀಡಿದರು.

ಬಳಿಕ ಸುವರ್ಣ ನೇತ್ರಾಲಯದ ವೈದ್ಯಕೀಯ ತಂಡದಿಂದ ವಿದ್ಯಾರ್ಥಿಗಳಿಗೆ ಉಚಿತ ನೇತ್ರ ತಪಾಸಣೆ ನಡೆಸಿ, ನೋಟ್‌ಬುಕ್‌ಗಳನ್ನು ವಿತರಿಸಲಾಯಿತು.

ರೋಟರಿ ಸಂಸ್ಥೆಯ ಕಾರ್ಯದರ್ಶಿ ರಂಜನ್ ಮಾತನಾಡಿ, ರೋಟರಿ ವರ್ಷದ ಆರಂಭದ ಅಂಗವಾಗಿ ವಿದ್ಯಾರ್ಥಿಗಳಲ್ಲಿ ಪರಿಸರ ಜಾಗೃತಿ ಮೂಡಿಸಲು ಗಿಡ ನೆಡುವ ಕಾರ್ಯಕ್ರಮ, ಉಚಿತ ನೇತ್ರ ತಪಾಸಣೆ ಹಾಗೂ ನೋಟ್‌ಬುಕ್ ವಿತರಣೆ ಹಮ್ಮಿಕೊಳ್ಳಲಾಗಿದೆ. ಜೀವನದಲ್ಲಿ ಯಶಸ್ಸು ಸಾಧಿಸಲು ಶಿಕ್ಷಣವೇ ಪ್ರಮುಖ ಸಾಧನವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮ ಗುರಿ ಸಾಧನೆಗೆ ಶ್ರಮಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರೋಟರಿ ಮಾಜಿ ಅಧ್ಯಕ್ಷ ಕೆ.ಬಿ.ಎಸ್. ಸಿದ್ದರಾಜು, ರಾಜು, ಸತೀಶ್, ಶ್ರೀಧರ್, ಚನ್ನಕೇಶವ, ವೆಂಕಟೇಶ್, ಸಂತೋಷ್, ಜ್ಞಾನೋದಯ ಪ್ರೌಢಶಾಲೆಯ ನಿರ್ದೇಶಕ ಸಿದ್ದಲಿಂಗಯ್ಯ, ಮುಖ್ಯ ಶಿಕ್ಷಕರು, ಸಹಶಿಕ್ಷಕರು ಹಾಗೂ ರೋಟರಿ ಸದಸ್ಯರು ಉಪಸ್ಥಿತರಿದ್ದರು.

# ‘ಆರೋಗ್ಯಕರ ಬದುಕಿಗೆ ಕಲೆಯಂತಹ ಹವ್ಯಾಸಗಳು ಅವಶ್ಯಕ’

ತುಮಕೂರು

ಆರೋಗ್ಯಕರ ಬದುಕು ಹಾಗೂ ಸಮಾಜಕ್ಕೆ ಕಲೆ, ಕ್ರೀಡೆ, ಯೋಗ, ಲಲಿತಕಲೆಗಳಂತಹ ಹವ್ಯಾಸಗಳ ಅವಶ್ಯಕತೆ ಇರುತ್ತದೆ ಎಂದು ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ತೇಜಸ್ವಿ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ವತಿಯಿಂದ ಶುಕ್ರವಾರ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದ್ದ ಯುವ ಸೌರಭ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿದ್ಯಾರ್ಥಿಗಳು ಓದುವುದರೊಂದಿಗೆ ಕಲೆಯಂತಹ ಹವ್ಯಾಸಗಳನ್ನು ಬೆಳೆಸಿಕೊಂಡಾಗ ಮಾತ್ರ ಸಮಾಜಕ್ಕೆ ದೊಡ್ಡ ಆಸ್ತಿಯಾಗುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಗೌರವ ಉಪಸ್ಥಿತಿವಹಿಸಿದ್ದ ಶಾಲಾ ಶಿಕ್ಷಣ(ಪದವಿ ಪೂರ್ವ) ಇಲಾಖೆಯ ಉಪನಿರ್ದೇಶಕಿ ರಾಧಾ ಎಂ.ಎಸ್. ಅವರು ಮಾತನಾಡಿ, ಯುವ ಜನರು ಕಲೆ / ಕ್ರೀಡೆ ಮೊದಲಾದ ಆರೋಗ್ಯಕರ ಹವ್ಯಾಸಗಳ ಮುಖೇನ ಸ್ಪರ್ಧಾತ್ಮಕ ಬದುಕನ್ನು ಎದುರಿಸಬೇಕೆಂದು ಕರೆ ನೀಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ಮಾತನಾಡಿ, ಯುವ ಜನರಿಗೆ ಕಲೆ ಕೇವಲ ಮನರಂಜನೆ ಆದರೂ ಅವರಲ್ಲಿನ ಭಾವನೆಗಳ ಅಭಿವ್ಯಕ್ತಿಯಾಗಿರುತ್ತದೆ. ಕಲೆಯು ಯುವ ಜನಾಂಗವನ್ನು ಮಾನಸಿಕವಾಗಿ ಸದೃಢರನ್ನಾಗಿ ಮಾಡುತ್ತದೆ ಹಾಗೂ ಅವರನ್ನು ಸಮಾಜಮುಖಿಗಳನ್ನಾಗಿ ಬೆಳೆಸಲು ಸಹಕಾರಿಯಾಗುತ್ತದೆ. ಇಂದಿನ ಸ್ಪರ್ಧಾತ್ಮಕ ಜಗತ್ತನ್ನು ಪರಿಣಾಮಾತ್ಮಕವಾಗಿ ಎದುರಿಸಲು ಎಲ್ಲಾ ರೀತಿಯಲ್ಲೂ ಸಹಕರಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಇನ್‌ಫಾರ್ಮಟಿಕ್ಸ್ ಇಂಡಿಯಾ ಲಿಮಿಟೆಡ್‌ನ ಚೇರ್ಮನ್ ಮತ್ತು ಮ್ಯಾನೇಜಿಂಗ್ ಡೈರೆಕ್ಟರ್ ಎನ್.ವಿ. ಸತ್ಯನಾರಾಯಣ ಮಾತನಾಡಿ, ತನ್ನ ಕಾಲೇಜಿನ ಬೆಳವಣಿಗೆಗೆ ಎಲ್ಲಾ ರೀತಿಯಲ್ಲೂ ಸಹಕರಿಸಲು ಸಿದ್ಧನಿರುತ್ತೇನೆ ಹಾಗೂ ಕಲೆ, ಸಂಸ್ಕೃತಿ ಉಳಿಸಿ ಬೆಳೆಸುವಲ್ಲಿ ಅಪಾರ ಕೊಡುಗೆಯನ್ನು ನೀಡುತ್ತಿರುವ ಈ ನಾಡಿನಲ್ಲಿ ಇತ್ತೀಚೆಗೆ ಕಲೆಗಳು ಅವಸಾನದ ಅಂಚಿಗೆ ಸರಿಯುತ್ತಿರುವುದು ವಿಷಾದನೀಯ. ಯುವ ಜನರಿಗೆ ಕಲೆಯನ್ನು ಕುರಿತು ಅಭಿರುಚಿ ಬೆಳೆಸುವಲ್ಲಿ ಇಂತಹ ಕಾರ್ಯಕ್ರಮಗಳು ಹೆಚ್ಚು ಪ್ರಸ್ತುತವಾಗಿದೆ ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಡಿ.ವಿ. ಸುರೇಶ್ ಕುಮಾರ್ ಮಾತನಾಡಿ, ಕಲಾವಿದರು ವೇದಿಕೆಯ ಮೇಲೆ ಕಲಾಪ್ರದರ್ಶನ ನೀಡುವುದನ್ನು ನಾವೆಲ್ಲರೂ ಗೌರವಿಸಿ, ಆಸ್ವಾದಿಸಬೇಕು. ಪ್ರತಿಯೊಬ್ಬ ಕಲಾವಿದನ ಪ್ರದರ್ಶನದ ಹಿಂದೆ ಅಪಾರವಾದ ಶ್ರಮ ಇರುತ್ತದೆ. ಪ್ರತಿ ಕಲಾವಿದರು ಹಲವಾರು ವರ್ಷಗಳ ಕಾಲ ತಪಸ್ಸಿನಂತೆ ಪ್ರಯತ್ನಿಸಿ ಕಲೆಯನ್ನು ತನ್ನದಾಗಿಸಿಕೊಂಡಿರುತ್ತಾರೆ. ಆದ್ದರಿಂದ ಕಲಾವಿದರನ್ನು ನಾವೆಲ್ಲರೂ ಗೌರವಿಸಬೇಕೆಂದು ತಿಳಿಸಿದರು.

# ಬೇಡಿಕೆ ಈಡೇರಿಕೆಗೆ ಮಸಣ ಕಾರ್ಮಿಕರ ಪ್ರತಿಭಟನೆ

ಚಿಂತಾಮಣಿ

ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಮಸಣ ಕಾರ್ಮಿಕರ ಹಾಗೂ ತಮಟೆ ಕಲಾವಿದರ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಗುರುವಾರ ನಗರದ ತಾಲೂಕು ಪಂಚಾಯಿತಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.

ಗ್ರಾಮೀಣ ಪ್ರದೇಶದಲ್ಲಿ ಮಸಣ ಕಾರ್ಮಿಕರು ಮತ್ತು ತಮಟೆ ಕಲಾವಿದರ ಸಮಗ್ರ ಗಣತಿ ನಡೆಸಿ ಗುರುತಿನ ಚೀಟಿ ನೀಡುವುದು, ಅಗತ್ಯ ಕೆಲಸದ ಸಾಮಗ್ರಿಗಳನ್ನು ವಿತರಿಸುವುದು, ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಮಿಕರ ಪಟ್ಟಿ ಸಿದ್ಧಪಡಿಸಿ ಮೂಲಭೂತ ಸೌಲಭ್ಯ ಕಲ್ಪಿಸುವುದು, ಮಾಸಿಕ ಪಿಂಚಣಿ, ಉದ್ಯೋಗ ಖಾತ್ರಿ ಯೋಜನೆಯಡಿ ಉದ್ಯೋಗ, ವಿವಿಧ ಬ್ಯಾಂಕ್‌ಗಳಿಂದ ಬಡ್ಡಿರಹಿತ ಸಾಲ, ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ಆರ್ಥಿಕ ನೆರವು, ನಿವೇಶನ ಹಾಗೂ ವಸತಿ ಸೌಲಭ್ಯ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಪ್ರತಿಭಟನಾಕಾರರು ಸರ್ಕಾರವನ್ನು ಆಗ್ರಹಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಂಘದ ತಾಲೂಕು ಸಂಚಾಲಕ ಹೆಚ್.ಎಸ್. ರಾಜಕುಮಾರ್, ಮಸಣ ಕಾರ್ಮಿಕರು ಮತ್ತು ತಮಟೆ ಕಲಾವಿದರ ಜೀವನೋಪಾಯಕ್ಕೆ



ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಸರ್ಕಾರ ತಕ್ಷಣ ಕಲ್ಪಿಸಬೇಕು. ಕಾರ್ಮಿಕರ ಬೇಡಿಕೆಗಳನ್ನು ವಿಳಂಬವಿಲ್ಲದೆ ಈಡೇರಿಸಲು ಸಂಬಂಧಪಟ್ಟ ಇಲಾಖೆಗಳು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದಕ್ಕೂ ಮುನ್ನ ಪ್ರವಾಸಿ ಮಂದಿರದ ಬಳಿಯಿಂದ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು ತಾಲೂಕು ಪಂಚಾಯಿತಿ ಕಚೇರಿ ಮುಂಭಾಗ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಾಲೂಕು ಪಂಚಾಯಿತಿ ಅಧಿಕಾರಿ ಪ್ರಶಾಂತ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಸಂಘದ ಕಾರ್ಯದರ್ಶಿ ನಾಗರಾಜ್, ಗಂಗಾಧರ, ನಾರಾಯಣಸ್ವಾಮಿ, ಓಬಲೇಶ್, ನರಸಿಂಹಪ್ಪ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು



ಕರ್ನಾಟಕ ರಾಜ್ಯ ಪೌರ ಸೇವಾ ನೌಕರರ ಸೇವಾ ಸಂಘದ ತಾಲೂಕು ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಸಂಘದ ಜಿಲ್ಲಾಧ್ಯಕ್ಷ ಸಿ.ಎನ್. ವೆಂಕಟೇಶ್ ಅವರ ನೇತೃತ್ವದಲ್ಲಿ ನಡೆಯಿತು. ನೂತನ ಅಧ್ಯಕ್ಷರಾಗಿ ಬಿ. ನರಸಿಂಹಪ್ಪ, ಗೌರವಾಧ್ಯಕ್ಷರಾಗಿ ಪಪಂ ಮುಖ್ಯಾಧಿಕಾರಿ ಆರತಿ, ಕಾರ್ಯದರ್ಶಿಯಾಗಿ ಸುಬ್ರಮಣಿ, ಉಪಾಧ್ಯಕ್ಷರಾಗಿ ಮಂಜುನಾಥ್, ಖಜಾಂಚಿಯಾಗಿ ಶ್ರೀನಿವಾಸ, ಸಂಘಟನಾ ಕಾರ್ಯದರ್ಶಿಯಾಗಿ ಎ.ಜಿ. ಗಂಗಯ್ಯ, ಕಾನೂನು ಸಲಹೆಗಾರರಾಗಿ ಅಶ್ವತ್ಥಪ್ಪ, ಜಿಲ್ಲಾ ಜಂಟಿ ಕಾರ್ಯದರ್ಶಿಯಾಗಿ ಪದ್ಮನಾಭ, ಜಿಲ್ಲಾ ನಿರ್ದೇಶಕರಾಗಿ ಲೋಕೇಶ್ ಹಾಗೂ ಗಂಗಾಧರ್, ತಾಲೂಕು ನಿರ್ದೇಶಕರಾಗಿ ಕೆ. ವೆಂಕಟೇಶ್, ಚಿಕ್ಕಗಂಗಯ್ಯ, ಅಶ್ವತ್ಥಮ್ಮ, ಶ್ರೀನಿವಾಸ ಮತ್ತು ಚಿಕ್ಕಮುನಿಶಾಮಿ ಆಯ್ಕೆಯಾದರು.

# 2028ರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧೆ ಖಚಿತ

ತಿಪಟೂರು

2028ರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದು ಖಚಿತ. ರಾಷ್ಟ್ರೀಯ ಪಕ್ಷವಾದ ಕಾಂಗ್ರೆಸ್ ಅಥವಾ ಬಿಜೆಪಿ ಟಿಕೆಟ್ ನೀಡಿದರೆ ಆ ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿಯುತ್ತೇನೆ. ಇಲ್ಲದಿದ್ದರೆ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತೇನೆ ಎಂದು ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ಜಿ. ನಾರಾಯಣ್ ಘೋಷಿಸಿದರು.

ನಗರದ ಹುಳಿಯರು ರಸ್ತೆಯ ಟಿ.ಎಂ. ಮಂಜುನಾಥ ನಗರದ ತಮ್ಮ ಗೃಹ ಕಚೇರಿಯಲ್ಲಿ ಪತ್ರಿಕಾ ದಿನಾಚರಣೆಯ ಅಂಗವಾಗಿ ಪತ್ರಕರ್ತರನ್ನು ಸನ್ಮಾನಿಸಿ, ಸಿಹಿ ಹಂಚಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಜುಲೈ 27ರಂದು ತಮ್ಮ ಜನ್ಮದಿನಾಚರಣೆ ನಡೆಯಲಿದ್ದು, ಅಭಿಮಾನಿಗಳ ಆಶಯದಂತೆ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಅದನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದರು. ಅಂದು ತಾಲೂಕಿನ 288 ಸರ್ಕಾರಿ ಶಾಲೆಗಳ ಸುಮಾರು 13 ಸಾವಿರ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ, 10 ಸಾವಿರ ಮಹಿಳೆಯರಿಗೆ ಬಾಗಿನ ವಿತರಣೆ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ, ಅಂಗವಿಕಲರು, ವಕೀಲರು ಹಾಗೂ ತಾಲೂಕಿನ ಪತ್ರಕರ್ತರಿಗೆ ಗೌರವ ಸಮಾರಂಭವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಕಳೆದ 18 19 ವರ್ಷಗಳಿಂದ ತಾಲೂಕಿನ ಜನರೊಂದಿಗೆ ನಿಕಟ ಸಂಪರ್ಕ ಹೊಂದಿದ್ದು, ಈವರೆಗೆ ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಸ್ಪರ್ಧಿಸಿದ್ದೇನೆ. ಆದರೆ ತಾಲೂಕಿನ ಜನರ ಆಶಯದಂತೆ ಇದೀಗ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಲು ನಿರ್ಧರಿಸಿದ್ದೇನೆ ಎಂದು ಹೇಳಿದರು.

ತಮ್ಮ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ತಾಲೂಕಿನ ಹಿರಿಯರು, ಯುವಕರು, ಮಹಿಳೆಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಆಶೀರ್ವದಿಸಬೇಕು ಎಂದು ಜಿ. ನಾರಾಯಣ್ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಾಜಿ ತಾಲೂಕು ಪಂಚಾಯತ್ ಅಧ್ಯಕ್ಷ ವಿರೂಪಾಕ್ಷ, ತಾಲೂಕು ರೈತ ಸಂಘದ ಅಧ್ಯಕ್ಷ ಬಸ್ತಿಹಳ್ಳಿ ರಾಜಣ್ಣ, ಮಂಜುನಾಥ್, ಚಿದಾನಂದ, ಓಂಕಾರ, ಸುಗಂಧರಾಜು, ಗಂಗಾಧರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ‘ಸಂಪಂಗಿ ಆರೋಪ ಸತ್ಯಕ್ಕೆ ದೂರ’

ಬೇತಮಂಗಲ

ವೆಂಗಸಂದ್ರ ಗ್ರಾಮದಲ್ಲಿ ಸರ್ಕಾರಿ ಜಮೀನು ಒತ್ತುವರಿ ಹಾಗೂ ಅಕ್ರಮ ನಿವೇಶನ ಸೃಷ್ಟಿ ಪ್ರಕರಣಕ್ಕೆ ಸಂಬಂಧಿಸಿ ಮಾಜಿ ಶಾಸಕ ವೈ. ಸಂಪಂಗಿ ಅವರು ಹಾಲಿ ಶಾಸಕಿ ರೂಪಕಲಾ ವಿರುದ್ಧ ಮಾಡಿರುವ ಆರೋಪಗಳು ಸಂಪೂರ್ಣ ಸತ್ಯಕ್ಕೆ ದೂರವಾಗಿದ್ದು, ರಾಜಕೀಯ ದುರುದ್ದೇಶದಿಂದ ಕೂಡಿವೆ ಎಂದು ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಮುಖಂಡರು ಹಾಗೂ ವೆಂಗಸಂದ್ರ ಗ್ರಾಮಸ್ಥರು ಸ್ಪಷ್ಟಪಡಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡರು, ಈ ಪ್ರಕರಣದ ಮೂಲ ಬೆಳವಣಿಗೆಗಳು ಬಿಜೆಪಿ ಆಡಳಿತದ ಅವಧಿಯಲ್ಲಿ ಹಾಗೂ ವೈ. ಸಂಪಂಗಿ ಅವರು ಶಾಸಕರಾಗಿದ್ದ ಸಂದರ್ಭದಲ್ಲೇ ನಡೆದಿವೆ ಎಂದು ತಿಳಿಸಿದ್ದಾರೆ. ಗ್ರಾಮದ ಚಂದ್ರಪ್ಪ ಅವರು ಸುಮಾರು 100 ವರ್ಷಗಳಿಂದ ಸ್ವಾಧೀನದಲ್ಲಿರುವ ಜಾಗಕ್ಕೆ 2004ರಲ್ಲಿ ಖಾತೆ ಕೋರಿ ಅರ್ಜಿ ಸಲ್ಲಿಸಿದ್ದು, ಗ್ರಾಮಸಭೆಯ ನಿರ್ಣಯದ ಆಧಾರದ ಮೇಲೆ ಖಾತೆ ಮಾಡಿಕೊಡಲಾಗಿತ್ತು. ಬಳಿಕ ಕೆಲವರು ಆಕ್ಷೇಪ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಪ್ರಕರಣ ನ್ಯಾಯಾಲಯದ ಮೆಟ್ಟಿಲೇರಿದ್ದು, ಚಂದ್ರಪ್ಪ ಅವರು ತಡೆಯಾಜ್ಞೆ ಪಡೆದಿದ್ದಾರೆ ಎಂದು ವಿವರಿಸಿದರು.

ಈ ಪ್ರಕರಣ ಸರ್ಕಾರ ಹಾಗೂ ನ್ಯಾಯಾಲಯದ ವ್ಯಾಪ್ತಿಯಲ್ಲಿದ್ದು, ಹಾಲಿ ಶಾಸಕಿ ರೂಪಕಲಾ ಅವರಿಗೆ ಯಾವುದೇ ಸಂಬಂಧವಿಲ್ಲ. ಆದರೂ ಅವರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಿ ಸಾರ್ವಜನಿಕರನ್ನು ತಪ್ಪುದಾರಿಗೆಳೆಯುವ ಪ್ರಯತ್ನ ನಡೆಯುತ್ತಿದೆ ಎಂದು ಕಾಂಗ್ರೆಸ್ ಮುಖಂಡರು ಆರೋಪಿಸಿದರು. ಯಾವುದೇ ವಾಸ್ತವಾಂಶ ತಿಳಿಯದೆ ಶಾಸಕಿ ರೂಪಕಲಾ ಅವರ ಹೆಸರಿಗೆ ಕಳಂಕ ತರುವ ರಾಜಕೀಯ ಆರೋಪಗಳನ್ನು ಕೈಬಿಡಬೇಕು ಎಂದು ಅವರು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗರಾಜ್, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಪ್ಪಾಜಿಗೌಡ, ವಿನು ಕಾರ್ತಿಕ್, ಸುನೀತಾ ಚಂದ್ರಶೇಖರ್, ಮಾಜಿ ತಾಪಂ ಅಧ್ಯಕ್ಷ ಜಯರಾಮ್ ರೆಡ್ಡಿ, ಎಪಿಎಂಸಿ ಸದಸ್ಯೆ ಯುವರಾಣಿ ವೆಂಕಟಚಲಪತಿ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರು ಮತ್ತು ವೆಂಗಸಂದ್ರ ಗ್ರಾಮದ ಗ್ರಾಮಸ್ಥರು ಉಪಸ್ಥಿತರಿದ್ದರು.

05/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸೆಪ್ಟೆಂಬರ್ 30ರವರೆಗೆ ಹಲವು ರೈಲುಗಳ ತಾತ್ಕಾಲಿಕ ನಿಲುಗಡೆ ವಿಸ್ತರಣೆ

ಬೆಂಗಳೂರು

ಪ್ರಯಾಣಿಕರ ಅನುಕೂಲಕ್ಕಾಗಿ ವಿವಿಧ ರೈಲುಗಳ ಆಯ್ದ ನಿಲ್ದಾಣಗಳಲ್ಲಿನ ತಾತ್ಕಾಲಿಕ ನಿಲುಗಡೆಯನ್ನು ನೈರುತ್ಯ ರೈಲ್ವೆ 2026ರ ಸೆಪ್ಟೆಂಬರ್ 30ರವರೆಗೆ ವಿಸ್ತರಿಸಿದೆ. ಈ ಹಿಂದೆ ಜೂನ್ 30ರವರೆಗೆ ಜಾರಿಯಲ್ಲಿದ್ದ ನಿಲುಗಡೆಗಳನ್ನು ಇದೀಗ ಇನ್ನೂ ಮೂರು ತಿಂಗಳ ಕಾಲ ಮುಂದುವರಿಸಲು ನಿರ್ಧರಿಸಲಾಗಿದೆ.

ರೈಲು ಸಂಖ್ಯೆ 56519/56520 ಕೆಎಸ್‌ಆರ್ ಬೆಂಗಳೂರು–ಹೊಸಪೇಟೆ–ಕೆಎಸ್‌ಆರ್ ಬೆಂಗಳೂರು ಪ್ಯಾಸೆಂಜರ್ ರೈಲು ದೇವನೂರು, ಹೊಳಲ್ಕೆರೆ ಮತ್ತು ಅಮೃತಾಪುರ ನಿಲ್ದಾಣಗಳಲ್ಲಿ ಸೆಪ್ಟೆಂಬರ್ 30ರವರೆಗೆ ನಿಲುಗಡೆ ಮುಂದುವರಿಸಲಿದೆ.

20675/20676 ಬೆಳಗಾವಿ–ಮೈಸೂರು–ಬೆಳಗಾವಿ ವಿಶ್ವಮಾನವ ಎಕ್ಸ್‌ಪ್ರೆಸ್ ಹಾಗೂ 17391/17392 ಕೆಎಸ್‌ಆರ್ ಬೆಂಗಳೂರು–ಸಿಂಧನೂರು–ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್ ರೈಲುಗಳು ರಾಮಗಿರಿ ನಿಲ್ದಾಣದಲ್ಲಿ ತಾತ್ಕಾಲಿಕವಾಗಿ ನಿಲುಗಡೆ ಮುಂದುವರಿಸಲಿವೆ.

16587/16588 ಯಶವಂತಪುರ–ಬಿಕಾನೇರ್–ಯಶವಂತಪುರ ಎಕ್ಸ್‌ಪ್ರೆಸ್ ರೈಲು ಬೀರೂರು ನಿಲ್ದಾಣದಲ್ಲಿ ಹಾಗೂ 17391/17392 ಕೆಎಸ್‌ಆರ್ ಬೆಂಗಳೂರು–ಸಿಂಧನೂರು–ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್ ರೈಲು ಚಳಗೇರಿ ನಿಲ್ದಾಣದಲ್ಲಿ ಸೆಪ್ಟೆಂಬರ್ 30ರವರೆಗೆ ನಿಲುಗಡೆ ಹೊಂದಿರಲಿದೆ.

20651/20652 ಕೆಎಸ್‌ಆರ್ ಬೆಂಗಳೂರು–ತಾಳಗುಪ್ಪ–ಕೆಎಸ್‌ಆರ್ ಬೆಂಗಳೂರು ಎಕ್ಸ್‌ಪ್ರೆಸ್ ರೈಲು ಅರಸಾಳು ಮತ್ತು ಕುಂಸಿ ನಿಲ್ದಾಣಗಳಲ್ಲಿ ತಾತ್ಕಾಲಿಕ ನಿಲುಗಡೆ ಮುಂದುವರಿಸಲಿದ್ದು, 16579/16580 ಯಶವಂತಪುರ–ಶಿವಮೊಗ್ಗ ಟೌನ್–ಯಶವಂತಪುರ ಎಕ್ಸ್‌ಪ್ರೆಸ್ ರೈಲು ಚಿಕ್ಕಬಾಣಾವರ ನಿಲ್ದಾಣದಲ್ಲಿ ನಿಲುಗಡೆ ಮುಂದುವರಿಸಲಿದೆ.

ಇದೇ ರೀತಿ, 16239/16240 ಚಿಕ್ಕಮಗಳೂರು–ಯಶವಂತಪುರ–ಚಿಕ್ಕಮಗಳೂರು ಎಕ್ಸ್‌ಪ್ರೆಸ್ ರೈಲು ಸಂಪಿಗೆ ರೋಡ್ ನಿಲ್ದಾಣದಲ್ಲಿ ಹಾಗೂ 16228 ತಾಳಗುಪ್ಪ–ಮೈಸೂರು ಎಕ್ಸ್‌ಪ್ರೆಸ್ ರೈಲು ಮಲ್ಲೇಶ್ವರಂ ನಿಲ್ದಾಣದಲ್ಲಿ ತಾತ್ಕಾಲಿಕ ನಿಲುಗಡೆಯನ್ನು ಸೆಪ್ಟೆಂಬರ್ 30ರವರೆಗೆ ಮುಂದುವರಿಸಲಿದೆ.

16315/16316 ಮೈಸೂರು–ತಿರುವನಂತಪುರಂ ನಾರ್ತ್–ಮೈಸೂರು ಎಕ್ಸ್‌ಪ್ರೆಸ್ ರೈಲು ಮದ್ದೂರು ನಿಲ್ದಾಣದಲ್ಲಿ ನಿಲುಗಡೆ ಮುಂದುವರಿಸಲಿದ್ದು, 66553 ಕೆಎಸ್‌ಆರ್ ಬೆಂಗಳೂರು–ಅಶೋಕಪುರಂ ಮೆಮು ರೈಲು ಕೃಷ್ಣದೇವರಾಯ ಹಾಲ್ಟ್ ನಿಲ್ದಾಣದಲ್ಲಿ ತಾತ್ಕಾಲಿಕವಾಗಿ ನಿಲ್ಲಲಿದೆ.

ಇದಲ್ಲದೆ, 66519/66520 ಮಾರಿಕುಪ್ಪಂ–ಕೆಎಸ್‌ಆರ್ ಬೆಂಗಳೂರು–ಮಾರಿಕುಪ್ಪಂ ಮೆಮು ಹಾಗೂ 16521 ಬಂಗಾರಪೇಟೆ–ಕೆಎಸ್‌ಆರ್ ಬೆಂಗಳೂರು ಮೆಮು ರೈಲುಗಳು ದೇವನಗೊಂಥಿ ನಿಲ್ದಾಣದಲ್ಲಿ ಸೆಪ್ಟೆಂಬರ್ 30ರವರೆಗೆ ತಮ್ಮ ತಾತ್ಕಾಲಿಕ ನಿಲುಗಡೆಯನ್ನು ಮುಂದುವರಿಸಲಿವೆ.

ನೈರುತ್ಯ ರೈಲ್ವೆ ಪ್ರಕಟಣೆಯ ಪ್ರಕಾರ, ಈ ವಿಸ್ತರಣೆಯಿಂದ ಆಯಾ ಪ್ರದೇಶಗಳ ಪ್ರಯಾಣಿಕರಿಗೆ ಅನುಕೂಲವಾಗಲಿದೆ.



ವಿಧಾನ ಪರಿಷತ್ ನೂತನ ಸದಸ್ಯರಾಗಿ ಆಯ್ಕೆಯಾಗಿರುವ ಕಾಂಗ್ರೆಸ್ ಪಕ್ಷದ ಬಿ.ಕೆ. ಹರಿಪ್ರಸಾದ್, ಪಿ.ವಿ.ಮೋಹನ್, ಶಿವಣ್ಣ ಮಳವಳ್ಳಿ, ತಿಪ್ಪಣ್ಣಪ್ಪ ಕಮಕನೂರ್ ಹಾಗೂ ವಿನಯ್ ಕಾರ್ತಿಕ್, ಬಿಜೆಪಿಯ ಕೌಟಿಲ್ಯ ರಘು ಹಾಗೂ ಅಂಗರಾಜ ಪಾಟೀಲ್ ಅವರು ಗುರುವಾರ ವಿಧಾನಸೌಧದಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಸಿಎಂ ಡಿ.ಕೆ.ಶಿವಕುಮಾರ್, ಡಿಸಿಎಂ ಪರಮೇಶ್ವರ್, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ವಿಧಾನಸಭೆ ಉಪಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಅವರು ಉಪಸ್ಥಿತರಿದ್ದರು.

# ‘ಹಳಕಟ್ಟಿ ಇಲ್ಲದಿದ್ದರೆ ಶರಣ ಸಂಸ್ಕೃತಿಯೇ ಕಣ್ಮರೆಯಾಗುತ್ತಿತ್ತು’

ಬೆಂಗಳೂರು

ಅಜ್ಞಾತವಾಗಿದ್ದು, ವಿವಿಧೆಡೆ ಚೆಲ್ಲಾಪಿಲ್ಲಿಯಾಗಿದ್ದ ವಚನ ಸಾಹಿತ್ಯವನ್ನು ಸಂಗ್ರಹಿಸಿ ಬೆಳಕಿಗೆ ತಂದ ಮಹತ್ವದ ಕೀರ್ತಿ ಫ.ಗು. ಹಳಕಟ್ಟಿ ಅವರಿಗೆ ಸಲ್ಲುತ್ತದೆ. ಅವರು ಈ ಕಾರ್ಯ ಮಾಡದೇ ಇದ್ದಿದ್ದರೆ ಶರಣ ಸಂಸ್ಕೃತಿ, ಲಿಂಗಾಯತ ಧರ್ಮ ಹಾಗೂ ಬಸವಾದಿ ಶರಣರ ಪರಂಪರೆಯ ಅಮೂಲ್ಯ ಸಾಹಿತ್ಯವೇ ಕಣ್ಮರೆಯಾಗುತ್ತಿತ್ತು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಕರ್ನಾಟಕ ರಾಜ್ಯ ಮುದ್ರಣಕಾರರ ಸಂಘ ಹಾಗೂ ವಿಜಯಪುರದ ಫ.ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಬೆಂಗಳೂರಿನ ತಮ್ಮ ನಿವಾಸದಲ್ಲಿ ಆಯೋಜಿಸಿದ್ದ ಫ.ಗು. ಹಳಕಟ್ಟಿ ಜನ್ಮದಿನ ಹಾಗೂ ವಚನ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಧಾರವಾಡ ಸೀಮೆಯವರಾದ ಫ.ಗು. ಹಳಕಟ್ಟಿ ವಿಜಯಪುರವನ್ನು ತಮ್ಮ ಕಾರ್ಯಕ್ಷೇತ್ರವನ್ನಾಗಿ ಮಾಡಿಕೊಂಡು ಅಪಾರವಾದ ಸಂಶೋಧನಾ ಕಾರ್ಯ ನಡೆಸಿದರು. ಅವರ ಪರಿಶ್ರಮದಿಂದ ನೂರಾರು ವಚನಕಾರರು ನಾಡಿಗೆ ಪರಿಚಿತರಾದರು. ವಚನ ಸಾಹಿತ್ಯವನ್ನು ಸಂಗ್ರಹಿಸಿ ಸಂರಕ್ಷಿಸುವುದರ ಜೊತೆಗೆ ಮುದ್ರಣಾಲಯವನ್ನು ಸ್ಥಾಪಿಸುವ ಮೂಲಕ ಜ್ಞಾನ ಪ್ರಸಾರಕ್ಕೂ ಅವರು ಮಹತ್ತರ ಕೊಡುಗೆ ನೀಡಿದರು ಎಂದು ಸಚಿವರು ಸ್ಮರಿಸಿದರು.

ಬಸವಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ನೂತನ ಅನುಭವ ಮಂಟಪ ಕುರಿತು ಮಾತನಾಡಿದ ಅವರು, ಇಲ್ಲಿ ಕೈಗೊಳ್ಳಬೇಕಾದ



ಕಾರ್ಯಕ್ರಮಗಳ ಕುರಿತು ಶರಣ ಸಾಹಿತ್ಯ ಪರಿಷತ್ತು ಹಲವು ಸಲಹೆಗಳನ್ನು ನೀಡಿದ್ದು, ಅವುಗಳನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಜಾರಿಗೆ ತರಲಾಗುವುದು ಎಂದು ಭರವಸೆ ನೀಡಿದರು.

ಹಿರಿಯ ಸಾಹಿತಿ ಗೊ.ರು. ಚನ್ನಬಸಪ್ಪ ಮಾತನಾಡಿ, ಫ.ಗು. ಹಳಕಟ್ಟಿ ಅವರ ಪರಿಶ್ರಮದಿಂದ ವಿಶ್ವಗುರು ಬಸವಣ್ಣ ಸೇರಿದಂತೆ ಅನೇಕ ಶರಣರ ವಚನಗಳು ಜನಸಾಮಾನ್ಯರಿಗೆ ತಲುಪಿದವು.

ವಚನ ಸಂಸ್ಕೃತಿ ಇಂದು ಹೆಮ್ಮರವಾಗಿ ಬೆಳೆಯಲು ಅವರ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.

ವಚನ ಸಾಹಿತ್ಯವನ್ನು ಸಂಗ್ರಹಿಸುವ ಮಹತ್ತರ ಕಾರ್ಯವನ್ನು ಹಳಕಟ್ಟಿ ಅವರು ಮಾಡಿದರೆ, ಅದನ್ನು ವಿಶ್ವದಾದ್ಯಂತ ಪಸರಿಸುವ ಕೆಲಸವನ್ನು ಎಂ.ಬಿ. ಪಾಟೀಲ ಅವರ ನೇತೃತ್ವದ ಬಿಎಲ್‌ಡಿಇ ಸಂಸ್ಥೆ ಮಾಡುತ್ತಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಸಿ. ಸೋಮಶೇಖರ್, ಅಖಿಲ ಭಾರತ ಮುದ್ರಣಕಾರರ ಸಂಘದ ಅಧ್ಯಕ್ಷ ಸಿ.ಆರ್. ಜನಾರ್ದನ, ಮಾಜಿ ಉಪಮೇಯರ್ ಪುಟ್ಟರಾಜು, ಕಾಂಗ್ರೆಸ್ ಮುಖಂಡ ಮಲ್ಲಿಕಾರ್ಜುನ ಹಾಗೂ ಮುದ್ರಣಕಾರರ ಸಂಘದ ಪದಾಧಿಕಾರಿಗಳಾದ ಅಶೋಕ್ ಕುಮಾರ್, ಸ್ವಾನ್ ಕೃಷ್ಣಮೂರ್ತಿ, ಮರಳವಾಡಿ ಶಿವಶಂಕರ್, ಮಲ್ಲಿಕಾರ್ಜುನ, ಫಾಲನೇತ್ರ, ರಾಜಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನೈರುತ್ಯ ರೈಲ್ವೆಯಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆ



ಹುಬ್ಬಳ್ಳಿ

ನೈರುತ್ಯ ರೈಲ್ವೆಯ ವೈದ್ಯಕೀಯ ವಿಭಾಗವು ವೈದ್ಯರ ಸಮರ್ಪಿತ ಸೇವೆಯನ್ನು ಗೌರವಿಸುವ ಹಾಗೂ ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶದಿಂದ ‘ರಾಷ್ಟ್ರೀಯ ವೈದ್ಯರ ದಿನಾಚರಣೆ–2026’ ಅನ್ನು ವಿವಿಧ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಿತು.

ಹುಬ್ಬಳ್ಳಿಯ ಸೆಂಟ್ರಲ್ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ನೈರುತ್ಯ ರೈಲ್ವೆಯ ಪ್ರಧಾನ ಮುಖ್ಯ ವೈದ್ಯಕೀಯ ನಿರ್ದೇಶಕರಾದ ಡಾ. ಶೋಭಾ ಜಾಸ್ಮಿನ್ ಎಸ್. ಅವರು ವೈದ್ಯರೊಂದಿಗೆ ಸಂವಾದ ನಡೆಸಿ, ರೈಲ್ವೆ ಆರೋಗ್ಯ ಸೇವೆಗೆ ಅವರು ಸಲ್ಲಿಸುತ್ತಿರುವ ನಿಸ್ವಾರ್ಥ ಸೇವೆಯನ್ನು ಶ್ಲಾಘಿಸಿದರು. ಇದೇ ಸಂದರ್ಭದಲ್ಲಿ ಹಿರಿಯ ವೈದ್ಯರನ್ನು ಸನ್ಮಾನಿಸಲಾಯಿತು. ವೈದ್ಯಕೀಯ ವೃತ್ತಿಯಲ್ಲಿನ ನೈತಿಕತೆ, ಸಹಾನುಭೂತಿ ಹಾಗೂ ಸೇವಾ ಮನೋಭಾವವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ವೈದ್ಯರಿಗೆ ‘ವೈದ್ಯರ ಪ್ರತಿಜ್ಞಾವಿಧಿ’ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ನಿವೃತ್ತ ರೈಲ್ವೆ ಉದ್ಯೋಗಿಗಳು ವೈದ್ಯರಿಗೆ ಶುಭಾಶಯಗಳನ್ನು ತಿಳಿಸಿ ಅಭಿನಂದಿಸಿದರು.

ರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ ಬೆಂಗಳೂರು ವಿಭಾಗೀಯ ರೈಲ್ವೆ ಆಸ್ಪತ್ರೆಯಲ್ಲಿ ಸುಮಾರು 50 ಮಂದಿ ಹೌಸ್‌ಕೀಪಿಂಗ್ ಸಿಬ್ಬಂದಿಗಾಗಿ ಆರೋಗ್ಯ ತಪಾಸಣೆ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ವೇಳೆ ಅಧಿಕ ರಕ್ತದೊತ್ತಡ, ಮಧುಮೇಹ ಹಾಗೂ ಹೆಚ್.ಐ.ವಿ. ತಪಾಸಣೆ ನಡೆಸಿ, ಆರೋಗ್ಯ ಕುರಿತು ಅಗತ್ಯ ಸಲಹೆಗಳನ್ನು ನೀಡಲಾಯಿತು.

ಇದೇ ಸಂದರ್ಭದಲ್ಲಿ ಸುಬ್ರಹ್ಮಣ್ಯ ರೋಡ್ ರೈಲ್ವೆ ನಿಲ್ದಾಣದಲ್ಲಿ ಕಬಕಪುತ್ತೂರು ಆರೋಗ್ಯ ಘಟಕದ ವತಿಯಿಂದ ಸಾರ್ವಜನಿಕ ಆರೋಗ್ಯ ಶಿಬಿರವನ್ನು ಆಯೋಜಿಸಿ, ಅಧಿಕ ರಕ್ತದೊತ್ತಡ, ಮಧುಮೇಹ ಮತ್ತು ಬೊಜ್ಜಿನ ತಪಾಸಣೆ ನಡೆಸಲಾಯಿತು. ಜೊತೆಗೆ ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ ಹಾಗೂ ವೈದ್ಯಕೀಯ ಸಲಹೆಗಳನ್ನು ಒದಗಿಸಲಾಯಿತು.

ಇದರೊಂದಿಗೆ, ಹುಬ್ಬಳ್ಳಿಯ ಕ್ಯಾರೇಜ್ ವರ್ಕ್‌ಶಾಪ್‌ನ ಅಧಿಕಾರಿಗಳು ಮತ್ತು ಮೇಲ್ವಿಚಾರಕರಿಗಾಗಿ ವೈದ್ಯಕೀಯ ವಿಭಾಗವು ಕಾರ್ಡಿಯೋಪಲ್ಮನರಿ ರಿಸಸಿಟೇಶನ್ (ಸಿ.ಪಿ.ಆರ್.) ಹಾಗೂ ಬೇಸಿಕ್ ಲೈಫ್ ಸಪೋರ್ಟ್ (ಬಿ.ಎಲ್.ಎಸ್.) ಕುರಿತು ವಿಶೇಷ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿತು. ನೇರ ಪ್ರಾತ್ಯಕ್ಷಿಕೆಯ ಮೂಲಕ ಜೀವ ರಕ್ಷಕ ತಂತ್ರಗಳು ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿವರವಾದ ಮಾಹಿತಿ ನೀಡಲಾಯಿತು. ವರ್ಕ್‌ಶಾಪ್‌ನ ಅಧಿಕಾರಿಗಳು, ಮೇಲ್ವಿಚಾರಕರು ಹಾಗೂ ಸಿಬ್ಬಂದಿ ಈ ತರಬೇತಿಯಲ್ಲಿ ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮದ ಪ್ರಯೋಜನ ಪಡೆದುಕೊಂಡರು.

# ಎಸ್‌ಐಆರ್ ಪ್ರಕ್ರಿಯೆ ಸ್ಥಗಿತಗೊಳಿಸಿ, ತಪ್ಪಿತಸ್ಥ ಬಿಎಲ್‌ಒಗಳನ್ನು ಅಮಾನತುಗೊಳಿಸಲು ಆಗ್ರಹ

ಬೆಂಗಳೂರು

ರಾಮನಗರ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಗಂಭೀರ ನಿಯಮ ಉಲ್ಲಂಘನೆ ನಡೆದಿದೆ ಎಂದು ಆರೋಪಿಸಿರುವ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಚುನಾವಣಾ ಆಯೋಗದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ‘ಎಕ್ಸ್’ ನಲ್ಲಿ ಸರಣಿ ಪೋಸ್ಟ್‌ಗಳನ್ನು ಹಂಚಿಕೊಂಡಿರುವ ಅವರು, ಮನೆ–ಮನೆಗೆ ತೆರಳಿ ಮತದಾರರ ಮಾಹಿತಿ ಪರಿಶೀಲಿಸಿ ನಮೂನೆಗಳನ್ನು ವಿತರಿಸಬೇಕಾದ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ರಾಮನಗರ ಟೌನ್ ನಗರಸಭೆಯ ವಾರ್ಡ್ ಸಂಖ್ಯೆ 23ರ ಟಿಪ್ಪುನಗರದ ಕಲ್ಯಾಣ ಮಂಟಪದಲ್ಲಿ ಜನರನ್ನು ಒಟ್ಟುಗೂಡಿಸಿ ‘ಎಸ್‌ಐಆರ್ ಜಾತ್ರೆ’ ನಡೆಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಇದು ಚುನಾವಣಾ ಆಯೋಗದ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿರುವ ಕ್ರಮವಾಗಿದ್ದು, ಪ್ರಜಾಪ್ರಭುತ್ವಕ್ಕೆ ಮಾಡಿದ ಅಣಕ ಎಂದು ಅವರು ಕಿಡಿಕಾರಿದ್ದಾರೆ.

ರಾಮನಗರ ಕ್ಷೇತ್ರದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ತಕ್ಷಣವೇ ಸ್ಥಗಿತಗೊಳಿಸಬೇಕು. ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳು ಖುದ್ದಾಗಿ ಮಧ್ಯಪ್ರವೇಶಿಸಿ ಸಂಪೂರ್ಣ ಪ್ರಕ್ರಿಯೆಯ ಮೇಲ್ವಿಚಾರಣೆ ವಹಿಸಬೇಕು.

ನಿಯಮ ಉಲ್ಲಂಘಿಸಿ ತಮ್ಮಿಷ್ಟದಂತೆ ಕಾರ್ಯನಿರ್ವಹಿಸುತ್ತಿರುವ ಬಿಎಲ್‌ಒ ಅಧಿಕಾರಿಗಳನ್ನು ತಕ್ಷಣ ಅಮಾನತುಗೊಳಿಸಿ, ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ನಿಖಿಲ್ ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಪಾರದರ್ಶಕತೆಗೆ ಹೆಸರಾದ ಚುನಾವಣಾ ಆಯೋಗ ರಾಮನಗರದಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮಗಳ ಬಗ್ಗೆ ಮೌನ ವಹಿಸದೆ, ತಕ್ಷಣ ಕ್ರಮ ಕೈಗೊಂಡು ತಪ್ಪಿತಸ್ಥರನ್ನು ಶಿಕ್ಷಿಸಬೇಕು. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡುವ ನಿಟ್ಟಿನಲ್ಲಿ ಚುನಾವಣಾ ಆಯೋಗ ನಿರ್ಣಾಯಕ ಹೆಜ್ಜೆ ಇಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಸಾಧಕ ವೈದ್ಯರಿಗೆ ‘ಧನ್ವಂತರಿ ಪ್ರಶಸ್ತಿ’ ಪ್ರದಾನ

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ಪಾಲಿಕೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಆರೋಗ್ಯಾಧಿಕಾರಿಗಳು, ಅಧೀಕ್ಷಕರು, ಆರೋಗ್ಯ ವೈದ್ಯಾಧಿಕಾರಿಗಳು ಹಾಗೂ ವೈದ್ಯರನ್ನು ಸನ್ಮಾನಿಸಿ ‘ಧನ್ವಂತರಿ ಪ್ರಶಸ್ತಿ’ ಪ್ರದಾನ ಮಾಡಲಾಯಿತು.

ಜಿಬಿಎ ನೌಕರರ ಭವನದಲ್ಲಿ ನಡೆದ ಸಮಾರಂಭವನ್ನು ಮುಖ್ಯ ಆಯುಕ್ತ ಎಂ. ಮಹೇಶ್ವರರಾವ್, ಆಯುಕ್ತ ಜಿ. ಜಗದೀಶ್, ವಿಶೇಷ ಆಯುಕ್ತ ಡಾ. ಆರ್. ವೆಂಕಟಚಲಪತಿ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ. ಷಡಕ್ಷರಿ, ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎ. ಅಮೃತ್ ರಾಜ್, ಮುಖ್ಯ ಆರೋಗ್ಯಾಧಿಕಾರಿ ಡಾ. ಸೈಯದ್ ಸಿರಾಜುದ್ದೀನ್ ಮದನಿ, ಡಾ. ನಿರ್ಮಲ ಬುಗ್ಗಿ, ಆರೋಗ್ಯಾಧಿಕಾರಿಗಳಾದ ಡಾ. ಎಂ. ಶಿವಕುಮಾರ್ ಹಾಗೂ ಡಾ. ಸಿದ್ದಪ್ಪಾಜಿ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಡಾ. ಬಿಧಾನ್ ಚಂದ್ರ ರಾಯ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಪ್ರಶಸ್ತಿಗಳನ್ನು ಪ್ರದಾನಿಸಲಾಯಿತು.

ಸಮಾರಂಭದಲ್ಲಿ ಮಾತನಾಡಿದ ಮುಖ್ಯ ಆಯುಕ್ತ ಎಂ. ಮಹೇಶ್ವರರಾವ್, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಗುಣಮಟ್ಟದ ವೈದ್ಯಕೀಯ ಸೇವೆ ಅತ್ಯಗತ್ಯ ಎಂದು ಹೇಳಿದರು. ಜನನ ಪ್ರಮಾಣ ಉತ್ತಮವಾಗಿರಬೇಕು, ಮರಣ ಪ್ರಮಾಣ ಕಡಿಮೆಯಾಗಬೇಕು ಎಂದರೆ ಆರೋಗ್ಯ ವ್ಯವಸ್ಥೆ ಬಲಿಷ್ಠವಾಗಿರಬೇಕು. ಉತ್ತಮ ಆಹಾರ ಪದ್ಧತಿ, ಆಧುನಿಕ ವೈದ್ಯಕೀಯ ಸಂಶೋಧನೆ ಮತ್ತು ಪರಿಣಾಮಕಾರಿ ಆರೋಗ್ಯ ಸೇವೆಗಳು ಸಮಾಜದ ಅಭಿವೃದ್ಧಿಗೆ ಅಗತ್ಯವೆಂದು ತಿಳಿಸಿದರು.

ನಗರದ ನಾಗರಿಕರಿಗೆ ಉತ್ತಮ ವೈದ್ಯಕೀಯ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ



ಆಸ್ಪತ್ರೆಗಳನ್ನು ಮತ್ತಷ್ಟು ಗುಣಮಟ್ಟದ ಸೇವಾ ಕೇಂದ್ರಗಳನ್ನಾಗಿ ರೂಪಿಸಲಾಗುತ್ತಿದೆ. ಈ ಕಾರ್ಯದಲ್ಲಿ ವೈದ್ಯರ ಸಹಕಾರ ಅತ್ಯವಶ್ಯಕ ಎಂದು ಅವರು ಹೇಳಿದರು.

ಆಯುಕ್ತ ಜಿ. ಜಗದೀಶ್ ಮಾತನಾಡಿ, ಡಾ. ಬಿಧಾನ್ ಚಂದ್ರ ರಾಯ್ ಅವರ ಸ್ಮರಣಾರ್ಥ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಕೋವಿಡ್ ಸಂಕಷ್ಟದ ಸಂದರ್ಭದಲ್ಲಿ ವೈದ್ಯರು ತಮ್ಮ ಜೀವವನ್ನೇ ಪಣಕ್ಕಿಟ್ಟು ಸಲ್ಲಿಸಿದ ಸೇವೆ ಅವಿಸ್ಮರಣೀಯವಾಗಿದೆ. ಪಾಲಿಕೆ ವ್ಯಾಪ್ತಿಯ ಆಸ್ಪತ್ರೆಗಳನ್ನು ಹೈಟೆಕ್ ಆಸ್ಪತ್ರೆಗಳನ್ನಾಗಿ ರೂಪಿಸುವ ಕಾರ್ಯದಲ್ಲಿ ವೈದ್ಯರು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ವಿಶೇಷ ಆಯುಕ್ತ ಡಾ. ಆರ್. ವೆಂಕಟಚಲಪತಿ ಮಾತನಾಡಿ, ವೈದ್ಯರು ದೇವರ ಸಮಾನರು. ಕೋವಿಡ್ ಸಂದರ್ಭದಲ್ಲಿ ಜೀವದ ಹಂಗು ತೊರೆದು ಜನರ ಸೇವೆಗೆ ನಿಂತ ವೈದ್ಯರೊಂದಿಗೆ ಕಾರ್ಯನಿರ್ವಹಿಸಿದ ಅನುಭವ ಸ್ಮರಣೀಯವಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ. ಷಡಕ್ಷರಿ ಮಾತನಾಡಿ, ವೈದ್ಯರ ಸಮಸ್ಯೆಗಳು ಹಾಗೂ ಸಂಕಷ್ಟಗಳಿಗೆ ನೆರವಾಗುವ ನಿಟ್ಟಿನಲ್ಲಿ ಕ್ಷೇಮಾಭಿವೃದ್ಧಿ ಸಂಘ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ. ವೈದ್ಯ ವೃತ್ತಿ ಅತ್ಯಂತ ಜವಾಬ್ದಾರಿಯುತವಾಗಿದ್ದು, ಪ್ರಶಸ್ತಿಗಳು ಇನ್ನಷ್ಟು ಸೇವೆ ಸಲ್ಲಿಸಲು ಪ್ರೇರಣೆ ನೀಡುತ್ತವೆ ಎಂದು ಹೇಳಿದರು.

ಸಂಘದ ಅಧ್ಯಕ್ಷ ಎ. ಅಮೃತ್ ರಾಜ್ ಮಾತನಾಡಿ, ಪಂಚ ಪಾಲಿಕೆಗಳ ವೈದ್ಯರು ಹಾಗೂ ಆರೋಗ್ಯಾಧಿಕಾರಿಗಳನ್ನು ಮೊದಲ ಬಾರಿಗೆ ರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ಗೌರವಿಸಲಾಗುತ್ತಿದೆ ಎಂದರು.

ಅಧಿಕಾರಿ ಮತ್ತು ನೌಕರರ ಆರೋಗ್ಯದ ಹಿತದೃಷ್ಟಿಯಿಂದ ಒಳಾಂಗಣ ವ್ಯಾಯಾಮ ಕೇಂದ್ರ ಹಾಗೂ ಆಧುನಿಕ ಸೌಲಭ್ಯಗಳಿರುವ ಹೈಟೆಕ್ ಕ್ಯಾಂಟೀನ್ ಆರಂಭಿಸಲಾಗುತ್ತಿದೆ. ಆರೋಗ್ಯವಂತ ಸಿಬ್ಬಂದಿಯಿಂದಲೇ ಉತ್ತಮ ಆಡಳಿತ ಮತ್ತು ಪರಿಣಾಮಕಾರಿ ಸೇವೆ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

# ‘ಕ್ರಷರ್ ಕ್ವಾರಿ ದುರಂತ: ಯಾರೇ ತಪ್ಪಿತಸ್ಥರಾಗಿದ್ದರೂ ಕಠಿಣ ಕ್ರಮವಾಗಲಿ’

ಬೆಂಗಳೂರು

ಬೆಂಗಳೂರು ದಕ್ಷಿಣ ತಾಲೂಕಿನ ಮಾದಪಟ್ಟಣದ ಕ್ರಷರ್ ಕ್ವಾರಿ ದುರಂತದಲ್ಲಿ ಯಾರೇ ತಪ್ಪಿತಸ್ಥರಾಗಿದ್ದರೂ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ವಿಧಾನಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದರು.

ಕೆಂಗೇರಿಯ ಆರ್.ಆರ್. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳು ಕಾರ್ಮಿಕರನ್ನು ಗುರುವಾರ ಭೇಟಿ ಮಾಡಿ ಆರೋಗ್ಯ ವಿಚಾರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ದುರಂತವನ್ನು ರಾಜಕೀಯವಾಗಿ ನೋಡಬಾರದು ಎಂದು ಹೇಳಿದರು.

“ರಾಜಕಾರಣ ಮಾಡುವುದು ಗಣಿಗಾರಿಕೆ ಅಥವಾ ರಿಯಲ್ ಎಸ್ಟೇಟ್‌ಗಾಗಿ ಅಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡುವುದೇ ನಿಜವಾದ ರಾಜಕಾರಣ. ಕ್ರಷರ್ ಕ್ವಾರಿ ಯಾರದ್ದೇ ಆಗಿರಲಿ, ದುರಂತಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು” ಎಂದು ಒತ್ತಾಯಿಸಿದರು.

ವಿವಿಧ ಗಲಭೆ ಪ್ರಕರಣಗಳಿಗೆ ಸಂಬಂಧಿಸಿದ ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಹೈಕೋರ್ಟ್ ತಡೆ ನೀಡಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಘಟನೆಗಳ ಸಂಪೂರ್ಣ ವಿವರಗಳು ಪೊಲೀಸರ ವರದಿಯಲ್ಲೇ ದಾಖಲಾಗಿವೆ ಎಂದು ಹೇಳಿದರು.

“ಆ ಸಂದರ್ಭ ಪೊಲೀಸರ ಮೇಲೆ ಹಲ್ಲೆ ನಡೆದಿದೆ. ಪೊಲೀಸ್ ವಾಹನಗಳು ಜಖಂಗೊಂಡಿವೆ. ತಳವಾರು, ಕತ್ತಿಗಳ ಪ್ರದರ್ಶನ ನಡೆದಿರುವುದು ವರದಿಗಳಲ್ಲಿದೆ. ಇಂತಹ ಗಂಭೀರ ಪ್ರಕರಣಗಳನ್ನು ಕೇವಲ ಮತಬ್ಯಾಂಕ್ ರಾಜಕಾರಣಕ್ಕಾಗಿ ಹಿಂಪಡೆಯುವ ಪ್ರಯತ್ನ ಸಮಾಜಘಾತುಕ ಶಕ್ತಿಗಳಿಗೆ ಪ್ರೋತ್ಸಾಹ ನೀಡುತ್ತದೆ. ಇಂತಹ ಪ್ರಕರಣಗಳನ್ನು ಹಿಂಪಡೆಯಬಾರದು ಎಂಬುದು ನಮ್ಮ ನಿಲುವಾಗಿತ್ತು. ಈಗ ನ್ಯಾಯಾಲಯವೂ ಸರ್ಕಾರದ ನಿರ್ಧಾರಕ್ಕೆ ತಡೆ ನೀಡಿರುವುದು ಗಮನಾರ್ಹ” ಎಂದು ಟೀಕಿಸಿದರು.

ಸರ್ಕಾರದ ಕ್ರಮವನ್ನು ಟೀಕಿಸಿದ ಅವರು, “ಸಂವಿಧಾನದ ಬಗ್ಗೆ ಮಾತನಾಡುತ್ತಾ, ಕಾನೂನು ವಿರುದ್ಧವಾಗಿ ನಡೆದುಕೊಳ್ಳುವುದು ಸರಿಯಲ್ಲ. ಸರ್ಕಾರ ಕಾನೂನು ಚೌಕಟ್ಟಿನಲ್ಲಿಯೇ ಕಾರ್ಯನಿರ್ವಹಿಸಬೇಕು. ಇಲ್ಲದಿದ್ದರೆ ಬುದ್ಧಿ ಹೇಳಲು ನ್ಯಾಯಾಲಯವೂ ಇದೆ, ಜನರೂ ಇದ್ದಾರೆ” ಎಂದು ಹೇಳಿದರು.

# ಖಾಲಿ ನಿವೇಶನಗಳಿಗೆ ಪಾರ್ಕಿಂಗ್ ಯೋಜನೆ: ತೆರಿಗೆ ವಿನಾಯಿತಿ

ಬೆಂಗಳೂರು

ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಹಾಗೂ ಪಾರ್ಕಿಂಗ್ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ರಾಜ್ಯ ಸರ್ಕಾರ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಹೊಸ ಪಾರ್ಕಿಂಗ್ ನೀತಿ–2026 ಕರಡನ್ನು ಸಿದ್ಧಪಡಿಸಿದೆ. ಇದರಡಿ ಖಾಲಿ ನಿವೇಶನಗಳಲ್ಲಿ ಬಹುಮಹಡಿ ಅಥವಾ ಸ್ವಯಂಚಾಲಿತ ಪಾರ್ಕಿಂಗ್ ವ್ಯವಸ್ಥೆ ನಿರ್ಮಿಸಿದರೆ 15ರಿಂದ 35 ವರ್ಷಗಳವರೆಗೆ ಆಸ್ತಿ ತೆರಿಗೆ ವಿನಾಯಿತಿ ನೀಡುವ ಪ್ರಸ್ತಾವನೆ ಮಾಡಲಾಗಿದೆ. ಆದರೆ ಕರಡು ನೀತಿ ಅಧಿಕೃತವಾಗಿ ಪ್ರಕಟವಾಗುವ ಮೊದಲುವೇ ಇದು ವಿವಾದಕ್ಕೆ ಕಾರಣವಾಗಿದೆ.

ಸರ್ಕಾರದ ಈ ಪ್ರಸ್ತಾವನೆಗೆ ಹಲವಾರು ಆಸ್ತಿ ಮಾಲೀಕರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ದೀರ್ಘಾವಧಿಯವರೆಗೆ ಸಾರ್ವಜನಿಕ ಪಾರ್ಕಿಂಗ್‌ಗೆ ಜಾಗ ನೀಡಿದರೆ ಮುಂದಿನ ದಿನಗಳಲ್ಲಿ ನಿವೇಶನದ ಮೇಲಿನ ಹಕ್ಕಿಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. 35 ವರ್ಷಗಳ ಕಾಲ ಜಾಗವನ್ನು ಪಾರ್ಕಿಂಗ್‌ಗೆ ಬಳಸಿದರೆ ಭವಿಷ್ಯದಲ್ಲಿ ಆ ಜಾಗದ ಸ್ವಾಮ್ಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಎದುರಾಗಬಹುದು ಎಂದು ಕೆಲವರು ಆರೋಪಿಸಿದ್ದಾರೆ.

ಮತ್ತೊಂದೆಡೆ, ಕೆಲವು ಆಸ್ತಿ ಮಾಲೀಕರು ಸರ್ಕಾರದ ಯೋಜನೆಯನ್ನು ಸ್ವಾಗತಿಸಿದ್ದಾರೆ. ಇದುವರೆಗೆ ಖಾಲಿ ನಿವೇಶನಗಳಿಗೆ ತೆರಿಗೆ ಪಾವತಿಸುತ್ತಿದ್ದರೂ ಯಾವುದೇ ಆದಾಯ ದೊರೆಯುತ್ತಿರಲಿಲ್ಲ.

ಹೊಸ ಯೋಜನೆಯಡಿ ತೆರಿಗೆ ವಿನಾಯಿತಿಯ ಜೊತೆಗೆ ಪಾರ್ಕಿಂಗ್ ಶುಲ್ಕದಿಂದಲೂ ಆದಾಯ ಗಳಿಸಲು ಅವಕಾಶ ದೊರೆಯಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಖಾಸಗಿ ಹೂಡಿಕೆ ಅಥವಾ ಸಾರ್ವಜನಿಕ–ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಪಾರ್ಕಿಂಗ್ ಕಟ್ಟಡ ನಿರ್ಮಿಸಿದರೆ ದೀರ್ಘಾವಧಿಯಲ್ಲಿ ಸ್ಥಿರ ಆದಾಯದ ಮೂಲವಾಗಬಹುದು ಎನ್ನುವುದು ಅವರ ಅಭಿಮತವಾಗಿದೆ.

# ಜೂನ್‌ನಲ್ಲಿ ನೈರುತ್ಯ ರೈಲ್ವೆ ದಾಖಲೆ ಸಾಧನೆ

ಹುಬ್ಬಳ್ಳಿ

ನೈರುತ್ಯ ರೈಲ್ವೆ (ಎಸ್‌ಡಬ್ಲ್ಯುಆರ್) 2026ರ ಜೂನ್ ತಿಂಗಳಲ್ಲಿ ಸರಕು ಸಾಗಣೆ ಮತ್ತು ಆದಾಯದಲ್ಲಿ ಹೊಸ ದಾಖಲೆ ನಿರ್ಮಿಸಿದ್ದು, ಕಾರ್ಯಾಚರಣಾ ದಕ್ಷತೆ ಹಾಗೂ ಗ್ರಾಹಕಕೇಂದ್ರಿತ ಸೇವೆಗಳಲ್ಲಿ ಮತ್ತೊಮ್ಮೆ ತನ್ನ ಸಾಮರ್ಥ್ಯವನ್ನು ಪ್ರದರ್ಶಿಸಿದೆ.

ಜೂನ್ 2026ರಲ್ಲಿ ನೈರುತ್ಯ ರೈಲ್ವೆ 4.18 ಮಿಲಿಯನ್ ಟನ್ (ಎಂಟಿ) ಮೂಲ ಸರಕು ಸಾಗಣೆ ದಾಖಲಿಸಿದ್ದು, ಕಳೆದ ವರ್ಷದ ಜೂನ್‌ನಲ್ಲಿ ದಾಖಲಾದ 3.98 ಮಿಲಿಯನ್ ಟನ್ಗೆ ಹೋಲಿಸಿದರೆ 5.2 ಶೇಕಡಾ (0.20 ಮಿಲಿಯನ್ ಟನ್) ಹೆಚ್ಚಳವಾಗಿದೆ. ಇದು ಜೂನ್ ತಿಂಗಳಲ್ಲಿ ದಾಖಲಾದ ಅತ್ಯಧಿಕ ಸರಕು ಸಾಗಣೆಯಾಗಿದೆ.

ಅಲ್ಲದೆ, ಪ್ರತಿದಿನ ಸರಾಸರಿ 2,221 ವ್ಯಾಗನ್‌ಗಳ ಲೋಡಿಂಗ್ ಮೂಲಕ ಮತ್ತೊಂದು ದಾಖಲೆ ನಿರ್ಮಿಸಲಾಗಿದ್ದು, ಕಳೆದ ವರ್ಷದ 2,143 ವ್ಯಾಗನ್‌ಗಳ ಸರಾಸರಿಗೆ ಹೋಲಿಸಿದರೆ 3.6 ಶೇಕಡಾ ಏರಿಕೆಯಾಗಿದೆ.

ಸರಕು ಸಾಗಣೆಯ ಪ್ರಮುಖ ವಸ್ತುಗಳಲ್ಲೂ ಉತ್ತಮ



ಪ್ರಗತಿ ಕಂಡುಬಂದಿದೆ. ಕಬ್ಬಿಣದ ಅದಿರು ಸಾಗಣೆ 1.69 ಮಿಲಿಯನ್ ಟನ್ ತಲುಪಿ 6.3 ಶೇಕಡಾ ಹೆಚ್ಚಳ ಕಂಡಿದೆ. ಉಕ್ಕು ಸಾಗಣೆ 0.90 ಮಿಲಿಯನ್ ಟನ್ ತಲುಪಿ 7.4 ಶೇಕಡಾ ಏರಿಕೆಯಾಗಿದೆ. ಆರ್‌ಎಂಎಸ್‌ಪಿ ಸರಕು ಸಾಗಣೆ 34.5 ಶೇಕಡಾ ಏರಿಕೆ ಕಂಡು 0.23 ಮಿಲಿಯನ್ ಟನ್ ತಲುಪಿದೆ. ಖನಿಜ ತೈಲ ಸಾಗಣೆ 15.8 ಶೇಕಡಾ ಹೆಚ್ಚಳಗೊಂಡು 0.21 ಮಿಲಿಯನ್ ಟನ್ ತಲುಪಿದೆ. ಸಿಮೆಂಟ್ ಸಾಗಣೆ 32 ಶೇಕಡಾ ಏರಿಕೆಯೊಂದಿಗೆ 0.03 ಮಿಲಿಯನ್ ಟನ್ ಹಾಗೂ ಕಂಟೇನರ್ ಸಾಗಣೆ 15.8 ಶೇಕಡಾ ಏರಿಕೆಯೊಂದಿಗೆ 0.09 ಮಿಲಿಯನ್ ಟನ್ ದಾಖಲಾಗಿದೆ.

ಆದಾಯದ ಕ್ಷೇತ್ರದಲ್ಲಿಯೂ ನೈರುತ್ಯ ರೈಲ್ವೆ ಉತ್ತಮ ಸಾಧನೆ ಮಾಡಿದ್ದು, ಜೂನ್ 2026ರಲ್ಲಿ ಒಟ್ಟು ರೂ.733.23 ಕೋಟಿ ಒಟ್ಟು ಆದಾಯ ದಾಖಲಿಸಿದೆ. ಇದು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ರೂ.11.22 ಕೋಟಿ (1.55 ಶೇಕಡಾ) ಹೆಚ್ಚಳವಾಗಿದೆ.

ಪ್ರಯಾಣಿಕರ ಸೇವೆಯಿಂದ ರೂ.290.43 ಕೋಟಿ ಆದಾಯ ಲಭಿಸಿದ್ದು, ಇದು ಕಳೆದ ವರ್ಷಕ್ಕಿಂತ 15.08 ಶೇಕಡಾ ಹೆಚ್ಚಾಗಿದೆ. ಜೂನ್ ತಿಂಗಳಲ್ಲಿ ಒಟ್ಟು 1.485 ಕೋಟಿ ಪ್ರಯಾಣಿಕರು ನೈರುತ್ಯ ರೈಲ್ವೆಯ ಸೇವೆ ಬಳಸಿದ್ದು, ಪ್ರಯಾಣಿಕರ ಸಂಖ್ಯೆಯಲ್ಲಿ 4.36 ಶೇಕಡಾ ಏರಿಕೆ ದಾಖಲಾಗಿದೆ.

ಪಾರ್ಸೆಲ್ ಸೇವೆಯಿಂದ ರೂ.14.30 ಕೋಟಿ ಆದಾಯ ಲಭಿಸಿದ್ದು, ಇದು 5.30 ಶೇಕಡಾ ಹೆಚ್ಚಳವಾಗಿದೆ. ರೈಲ್ವೆಯ ಪ್ರಮುಖ ಆದಾಯ ಮೂಲವಾದ ಸರಕು ಸಾಗಣೆಯಿಂದ ರೂ.402.61 ಕೋಟಿ ಆದಾಯ ದಾಖಲಾಗಿದೆ. ಇತರೆ ಕೋಚಿಂಗ್ ಸೇವೆಗಳಿಂದ ರೂ.26.66 ಕೋಟಿ, ವಿವಿಧ ಇತರೆ ಮೂಲಗಳಿಂದ ರೂ.13.53 ಕೋಟಿ ಹಾಗೂ ವಾಣಿಜ್ಯ ಇತರೆ ಆದಾಯದಿಂದ ರೂ.5.56 ಕೋಟಿ ಸಂಗ್ರಹವಾಗಿದೆ.

ಟಿಕೆಟ್ ತಪಾಸಣೆ ಕಾರ್ಯಾಚರಣೆಯಲ್ಲಿ 58 ಸಾವಿರ ಪ್ರಕರಣಗಳು ಪತ್ತೆಯಾಗಿದ್ದು, ಇದರಿಂದ ರೂ.4.96 ಕೋಟಿ ಆದಾಯ ಸಂಗ್ರಹವಾಗಿದೆ.

ಸರಕು ಸಾಗಣೆಯಲ್ಲಿ ದಾಖಲೆ ಸಾಧನೆ ಹಾಗೂ ವಿವಿಧ ಆದಾಯ ಮೂಲಗಳಲ್ಲಿ ಕಂಡುಬಂದ ಸ್ಥಿರ ಬೆಳವಣಿಗೆ, ಕಾರ್ಯಾಚರಣಾ ದಕ್ಷತೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಗ್ರಾಹಕಸ್ನೇಹಿ ಸೇವೆಗಳತ್ತ ನೈರುತ್ಯ ರೈಲ್ವೆ ನೀಡುತ್ತಿರುವ ಆದ್ಯತೆಯನ್ನು ಪ್ರತಿಬಿಂಬಿಸುತ್ತದೆ.

ಮುಂದಿನ ದಿನಗಳಲ್ಲಿಯೂ ಇದೇ ಸಾಧನೆಯನ್ನು ಮುಂದುವರಿಸಿಕೊಂಡು ಪ್ರದೇಶದ ಸಾರಿಗೆ ಅಗತ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಪೂರೈಸಲು ನೈರುತ್ಯ ರೈಲ್ವೆ ಬದ್ಧವಾಗಿದೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy